ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೭

**ಪಟ್ಟಿ – ೦೬**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ಐದನೇ ಅಧಿವೇಶನ

ಬುಧವಾರ, ದಿನಾಂಕ : ೧೨ನೇ ಮಾರ್ಚ್, ೨೦೨೫

---

## ಸಮೂಹ – III

೧. ಸಾರಿಗೆ ಮತ್ತು ಮುಜರಾಯಿ ಸಚಿವರು

೨. ಲೋಕೋಪಯೋಗಿ ಸಚಿವರು

೩. ಕಂದಾಯ ಸಚಿವರು

೪. ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

೫. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು

೬. ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

---

## ರಾಜ್ಯದಲ್ಲಿರುವ ತಂಗುದಾಣಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೧೫ (೬೭೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಒಟ್ಟು ಎಷ್ಟು ತಂಗುದಾಣ/ನಿಲ್ದಾಣಗಳಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಇರುವಂತಹ ತಂಗುದಾಣ/ನಿಲ್ದಾಣಗಳಲ್ಲಿ ಎಷ್ಟು ತಂಗುದಾಣ/ನಿಲ್ದಾಣಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿವೆ ; ದುರಸ್ತಿಗೊಂಡಿರುವ ತಂಗುದಾಣ/ನಿಲ್ದಾಣಗಳೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ದುರಸ್ತಿಗೊಂಡಿರುವ ತಂಗುದಾಣ/ನಿಲ್ದಾಣಗಳನ್ನು ಯಾವ ಕಾಲ ಮಿತಿಯೊಳಗೆ ಸರಿಪಡಿಸಲಾಗುವುದು ;

(ಈ) ಬಹುತೇಕ ಗ್ರಾಮೀಣ ಪ್ರದೇಶಗಳಲ್ಲಿ ಸಾರಿಗೆ ಸಮಸ್ಯೆ ಎದುರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಪಶುಸಂಗೋಪನೆ ಇಲಾಖೆಯಿಂದ ನೀಡುತ್ತಿರುವ ಯೋಜನೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೧೬ (೬೭೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಶುಸಂಗೋಪನೆ ಇಲಾಖೆಯಿಂದ ರೈತರಿಗೆ ಹಾಗೂ ಹೈನುಗಾರಿಕೆಗೆ ಅನುಕೂಲವಾಗಲು ರೂಪಿಸುವ ಯೋಜನೆಗಳಾವುವು ; (ಯೋಜನಾವಾರು ಮಾಹಿತಿ ಒದಗಿಸುವುದು)

(ಆ) ಸದರಿ ಯೋಜನೆಗಳ ಪೈಕಿ ದಾವಣಗೆರೆ ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚು ಮಾಡಲಾದ ಅನುದಾನವೆಷ್ಟು; (ಯೋಜನೆವಾರು ಮಾಹಿತಿ ಒದಗಿಸುವುದು)

(ಇ) ಕಳೆದ ೨ ವರ್ಷಗಳಲ್ಲಿ ಸದರಿ ಯೋಜನೆಗಳನ್ನು ಪಡೆಯಲು ಸ್ವೀಕೃತಗೊಂಡಿರುವ ಅರ್ಜಿಗಳೆಷ್ಟು ; ಅನುಕೂಲ ಪಡೆದ ಹಾಗೂ ತಿರಸ್ಕೃತಗೊಂಡಿರುವ ಅರ್ಜಿಗಳೆಷ್ಟು ? (ಜಿಲ್ಲಾವಾರು/ ತಾಲ್ಲೂಕುವಾರು/ಯೋಜನಾವಾರು ಮಾಹಿತಿ ಒದಗಿಸುವುದು)

## ಬೆಂಗಳೂರು ಜಿಲ್ಲೆಯಲ್ಲಿ ಆಗಿರುವ ಸರ್ಕಾರಿ ಜಮೀನು ಅತಿಕ್ರಮಣದ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೧೭ (೬೭೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಜಿಲ್ಲೆಯ ಹಲವು ಕಡೆಗಳಲ್ಲಿ ಭಾರಿ ಪ್ರಮಾಣದ ಸರ್ಕಾರಿ ಜಮೀನುಗಳು ಅನುಕ್ರಮವಲ್ಲದ ದಾಖಲೆಗಳ ಮೂಲಕ ಭೂಗಳ್ಳರ ಪಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದ್ದಲ್ಲಿ, ಇಂತಹ ಎಷ್ಟು ಭೂಗಳ್ಳತನವಾಗಿರುವ ಪ್ರಕರಣಗಳು ದಾಖಲಾಗಿವೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಸರ್ಕಾರಿ ಜಮೀನುಗಳು ಅತಿಕ್ರಮಣ ಆಗುತ್ತಿರುವುದನ್ನು ತಪ್ಪಿಸಲು ಸರ್ಕಾರ ಯಾವ ರೀತಿಯ ಪರಿಶೀಲನಾ ಕ್ರಮಗಳನ್ನು ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಈಗಾಗಲೇ ಭೂಗಳ್ಳರ ಪಾಲಾಗಿರುವ ಸರ್ಕಾರಿ ಜಮೀನುಗಳನ್ನು ಸರ್ಕಾರದ ವಶಕ್ಕೆ ಪಡೆಯಲು ಕೈಗೊಂಡ ಕಠಿಣ ಕ್ರಮಗಳಾವುವು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ವಕ್ಫ್ ಆಸ್ತಿಯ ಬಗ್ಗೆ ವಿವರ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೧೮ (೭೨೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷಗಳಲ್ಲಿ ರಾಜ್ಯದಲ್ಲಿ ವಕ್ಫ್ ಬೋರ್ಡ್‌ಗೆ ನೀಡಿರುವ ಅನುದಾನ ಎಷ್ಟು ;

(ಆ) ವಕ್ಫ್ ಬೋರ್ಡ್‌ಗೆ ಸೇರಿದ ಆಸ್ತಿ ಎಷ್ಟು ಮತ್ತು ಶಿವಮೊಗ್ಗ ಜಿಲ್ಲೆ ಸೇರಿದಂತೆ ಯಾವ ಯಾವ ಜಿಲ್ಲೆಯಲ್ಲಿ ಎಷ್ಟು ಆಸ್ತಿ ಇದೆ ; ಸದರಿ ಆಸ್ತಿಯನ್ನು ಯಾವ ಯಾವ ಉದ್ದೇಶಕ್ಕೆ ಬಳಕೆಯಾಗುತ್ತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವಕ್ಫ್ ಬೋರ್ಡ್ ಆಸ್ತಿ ಕಬ್ಬಳಿಕೆ ಒತ್ತುವರಿ ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ರೀತಿ ಕಬಳಿಸಿರುವ ಅಥವಾ ಒತ್ತುವರಿ ಮಾಡಿಕೊಂಡಿರುವ ಆಸ್ತಿಯಲ್ಲಿ ಎಷ್ಟು ಪ್ರಮಾಣದ ಆಸ್ತಿಯನ್ನು ಈವರೆಗೂ ಸರ್ಕಾರ ಮರಳಿ ಪಡೆಯಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಆಸ್ತಿ ಕಬಳಿಸಿದವರ/ಒತ್ತುವರಿ ಮಾಡಿದವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಪಶು ಆಸ್ಪತ್ರೆಗಳ ನಿರ್ಮಾಣದ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೯ (೭೨೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಾನುವಾರು ಗಣತಿಗೆ ಅನುಗುಣವಾಗಿ ಪಶು ಆಸ್ಪತ್ರೆಗಳನ್ನು ನಿರ್ಮಿಸಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪ್ರಸ್ತುತ ಮಂಜೂರಾಗಿರುವ ಪಶು ಎಷ್ಟು ಆಸ್ಪತ್ರೆಗಳು ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿದೆ ಮತ್ತು ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ನಗರೀಕರಣದಿಂದ ನಗರ ಭಾಗಗಳಲ್ಲಿರುವ ಕೆಲವು ಪಶು ಆಸ್ಪತ್ರೆಗಳು ಅಪ್ರಸ್ತುತವಾಗಿದ್ದು ಅಂತ ಪಶು ಆಸ್ಪತ್ರೆಗಳನ್ನು ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ ಇವುಗಳನ್ನು ಸ್ಥಳಾಂತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ವಸತಿ ಗೃಹಗಳ ಹಂಚಿಕೆ ಮತ್ತು ನಿರ್ಮಾಣದ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೦ (೭೨೪) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಿವೇಶನ ಇರುವವರಿಗೆ ಸರ್ಕಾರದಿಂದ ಯಾವ ಯಾವ ಯೋಜನೆ ಅಡಿಯಲ್ಲಿ ವಸತಿ ಗೃಹ ಮತ್ತು ಫ್ಲಾಟ್‌ಗಳನ್ನು ನಿರ್ಮಿಸಿ ನೀಡಲಾಗಿದೆ ; (ವಿವರ ನೀಡುವುದು)

(ಆ) ಕಳೆದ ಎರಡು ವರ್ಷದಲ್ಲಿ ವಿವಿಧ ವಸತಿ ಗೃಹ ಯೋಜನೆ ಅಡಿಯಲ್ಲಿ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಗೆ ಮಂಜೂರಾಗಿರುವ ಮನೆ/ಫ್ಲಾಟ್‌ಗಳ ಸಂಖ್ಯೆ ಎಷ್ಟು ; ಅವುಗಳ ನಿರ್ಮಾಣ ಮತ್ತು ಅನುದಾನ ಯಾವ ಹಂತದಲ್ಲಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಳೆದ ೫ ವರ್ಷದಲ್ಲಿ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಗೆ ರಾಜೀವ ಗಾಂಧಿ ವಸತಿ ನಿಗಮದಿಂದ ಮಂಜೂರಾದ ಮನೆಗಳು ಮತ್ತು ಫ್ಲಾಟ್‌ಗಳೆಷ್ಟು ; ಅದರಲ್ಲಿ ಹಂಚಿಕೆಯಾದ ಮನೆಗಳೆಷ್ಟು; ಬಾಕಿ ಇರುವ ಕಾಮಗಾರಿಗಳೆಷ್ಟು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ವಿವಿಧ ಯೋಜನೆಗಳಡಿಯಲ್ಲಿ ಹಂಚಿಕೆ ಮಾಡದೆ ಉಳಿದಿರುವ ಮನೆಗಳು/ಫ್ಲಾಟ್‌ಗಳೆಷ್ಟು ; ಇವುಗಳನ್ನು ಯಾವ ಕಾಲಮಿತಿಯಲ್ಲಿ ಹಂಚಿಕೆ ಮಾಡಲಾಗುವುದು ? (ಯೋಜನೆವಾರು ವಿವರ ನೀಡುವುದು)

## ಹಿಂದು ಮತ್ತು ಮುಸಲ್ಮಾನರ ಭಾವೈಕ್ಯತೆ ಕ್ಷೇತ್ರಗಳ ಅಭಿವೃದ್ಧಿ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೨೧ (೬೨೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹಿಂದು ಮತ್ತು ಮುಸಲ್ಮಾನರುಗಳು ಭೇಟಿ ನೀಡುತ್ತಿರುವ ಭಾವೈಕ್ಯತೆ ಸ್ಥಳಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಭಾವೈಕ್ಯತೆ ಸ್ಥಳಗಳು ಕ್ಷೇತ್ರಗಳು ಅಘೋಶಿತ ಪ್ರವಾಸೋದ್ಯಮ ಕ್ಷೇತ್ರಗಳಾಗಿ ಮಾರ್ಪಟಿದ್ದು ಈ ಕ್ಷೇತ್ರಗಳಲ್ಲಿ ಮೂಲಸೌಲಭ್ಯಗಳ ಕೊರತೆಯಿಂದ ಅಲ್ಲಿಗೆ ಬರುವ ಭಕ್ತಾದಿಗಳು ತೀವ್ರ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹೌದಾದಲ್ಲಿ ಸದರಿ ಭಾವೈಕ್ಯತೆ ಕ್ಷೇತ್ರಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರವು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿ ಹಾಗೂ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡುವುದೇ ? (ವಿವರ ನೀಡುವುದು)

## ಪೋಸ್ಟ್ ಮೆಟ್ರಿಕ್ ವಸತಿ ನಿಲಯಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೨೨ (೬೨೮) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ನಡೆಸಲಾಗುತ್ತಿರುವ ಪೋಸ್ಟ್ ಮೆಟ್ರಿಕ್ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇವುಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ; ಹಾಗೂ ಬಾಡಿಗೆಯಲ್ಲಿ ನಡೆಯುತ್ತಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬಾಡಿಗೆಗಿರುವ ವಸತಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ಮುಂಗಾರು ಬೆಳೆ ಸಮೀಕ್ಷೆಯಲ್ಲಿ ಅಕ್ರಮ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭೆಯಿಂದ ಚುನಾಯಿತರಾದವರು):-**

೫೨೩ (೬೯೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿನಲ್ಲಿ ಮುಂಗಾರು ಬೆಳೆ ಸಮೀಕ್ಷೆಯಲ್ಲಿ ಭತ್ತ, ತೊಗರಿ ಬೆಳೆದ ಭೂಮಿಯಲ್ಲಿ ಜೋಳ ಬೆಳೆಯಲಾಗಿದೆ ಎಂದು ಸಮೀಕ್ಷೆ ಮಾಡಿ, ಜೋಳ ಖರೀದಿ ಕೇಂದ್ರದ ವ್ಯಾಪಾರಿಗಳು ಹಾಗೂ ಮಧ್ಯವರ್ತಿಗಳು ಇದರ ಲಾಭ ಪಡೆಯಲು ಈ ರೀತಿ ಅಕ್ರಮ ನಡೆಸಿದ್ದಾರೆ ಎಂಬ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೇ ಅಕ್ರಮ ಸಮೀಕ್ಷೆ ನಡೆಸಲು ಕಾರಣಕರ್ತರಾದ ಕಂದಾಯ, ಕೃಷಿ, ಕೃಷಿ ಉತ್ಪನ್ನ ಮಾರುಕಟ್ಟೆ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಸಾರಿಗೆ ಪ್ರಾದೇಶಿಕ ಕಛೇರಿ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು):-**

೫೨೪ (೬೯೬) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಈ ಹಿಂದೆ ಸಿಂಧನೂರಿಗೆ ಸರ್ಕಾರವು ಪ್ರಾದೇಶಿಕ ಸಾರಿಗೆ ಕಚೇರಿ ಮಂಜೂರು ಮಾಡಲಾಗಿತ್ತೇ ;

(ಆ) ಇಲ್ಲದಿದ್ದಲ್ಲಿ, ಸಿಂಧನೂರು ತಾಲ್ಲೂಕಿನಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿಯನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಸದರಿ ತಾಲ್ಲೂಕಿನ ಹೋಬಳಿ ಕೇಂದ್ರಗಳಾದ ಜವಳಗೇರಿ, ದಡೆಸಗೂರು, ಗಾಂಧಿನಗರಗಳಲ್ಲಿ ಹತ್ತು ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಇದ್ದು, ಸದರಿ ಊರುಗಳಲ್ಲಿ ಸಾರಿಗೆ ಬಸ್ಸು ನಿಲ್ದಾಣಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆ ಇದೆಯೇ ;

(ಈ) ಇದ್ದರೆ, ಕಾಮಗಾರಿ ಯಾವಾಗ ಆರಂಭವಾಗುವುದು ; ನಿರ್ಮಾಣದ ವೆಚ್ಚವೆಷ್ಟು ?

## ಮೀನುಗಾರರಿಗೆ ವಿವಿಧ ಯೋಜನೆಗಳಲ್ಲಿ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು):-**

೫೨೫ (೬೯೭) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿಂಧನೂರು ವಿಧಾನ ಸಭಾ ವ್ಯಾಪ್ತಿಯ ಸಣ್ಣ ಕೆರೆ ಹಾಗೂ ನದಿಗಳಲ್ಲಿ ಮೀನು ಹಿಡಿದು ಜೀವನ ನಡೆಸುತ್ತಿರುವ ಮೀನುಗಾರರಿಗೆ ಮನೆಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಮತ್ಸಾಶ್ರಯ ಯೋಜನೆಯಡಿ ಸಿಂಧನೂರು ತಾಲ್ಲೂಕಿಗೆ ಕಳೆದ ಐದು ವರ್ಷಗಳಲ್ಲಿ ಮಂಜೂರಾದ ಅನುದಾನವೆಷ್ಟು ; ಯಾವ ಯಾವ ಕಾಮಗಾರಿಗೆ ಅನುದಾನವನ್ನು ಮಂಜೂರು ಮಾಡಲಾಗಿದೆ ; (ವಿವರ ನೀಡುವುದು)

(ಇ) ಸದರಿ ತಾಲ್ಲೂಕಿನ ಮೀನುಗಾರಿಕೆ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸಲಾಗಿರುವ ಯೋಜನೆಗಳಾವುವು ; ಕಳೆದ ೦೫ ವರ್ಷಗಳಲ್ಲಿ ಮೀನುಗಾರಿಕೆ ಅಭಿವೃದ್ಧಿಗಾಗಿ ಮಂಜೂರು ಮಾಡಲಾಗಿರುವ ಅನುದಾನವೆಷ್ಟು ? (ವಿವರ ನೀಡುವುದು)

## ಸಿಂಧನೂರು ತಾಲ್ಲೂಕಿಗೆ ವಸತಿ ಯೋಜನೆಗಳ ಅನುಷ್ಠಾನ ಮಾಡುವ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು):-**

೫೨೬ (೬೯೮) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಾ: ಡಿ.ಎಂ. ನಂಜುಂಡಪ್ಪ ಅವರ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ವರದಿಯ ಅನುಸಾರ ಹಿಂದುಳಿದ ತಾಲ್ಲೂಕಾಗಿರುವ ಸಿಂಧನೂರು ತಾಲ್ಲೂಕಿನ ಪಟ್ಟಣ ಮತ್ತು ಗ್ರಾಮೀಣ ಭಾಗದ ಜನರು ಮನೆಗಳಿಗೆ ಬೇಡಿಕೆ ಇರುವುದರಿಂದ ೨೦೨೫-೨೬ನೇ ಸಾಲಿನಲ್ಲಿ ಮನೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ವಸತಿ ಇಲಾಖೆಯಿಂದ ಯಾವ ಯಾವ ಯೋಜನೆಗಳಡಿಯಲ್ಲಿ ವಸತಿಗಳನ್ನು ಮಂಜೂರು ಮಾಡಲಾಗಿದೆ ; ಅದರ ಅಂದಾಜು ವೆಚ್ಚ ಎಷ್ಟು ; (ವಿವರ ನೀಡುವುದು)

(ಇ) ಕಳೆದ ಐದು ವರ್ಷಗಳಲ್ಲಿ ಕರ್ನಾಟಕ ಗೃಹ ಮಂಡಳಿಯಿಂದ ನಿವೇಶನಗಳನ್ನು ಅಭಿವೃದ್ಧಿ ಪಡಿಸಿ ಹಂಚಿಕೆ ಮಾಡಲು ಸರ್ಕಾರ ಸ್ವಾಧೀನ ಪಡಿಸಿಕೊಂಡ ಜಮೀನು ಎಷ್ಟು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

# ಘತ್ತರಗಾ ಶ್ರೀ ಭಾಗ್ಯವಂತಿ ದೇವಿ ದೇವಸ್ಥಾನಕ್ಕೆ ಮೂಲಭೂತ ಸೌಕರ್ಯಗಳ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು):-**

೫೨೭ (೬೧೬) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಘತ್ತರಗಾ ಶ್ರೀ ಭಾಗ್ಯವಂತಿ ದೇವಿ ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಶುದ್ಧ ಕುಡಿಯುವ ನೀರು ಹಾಗೂ ಇತರೆ ಮೂಲ ಭೂತ ಸೌಕರ್ಯಗಳ ಕೊರತೆ ಇರುವುದರಿಂದ ಭಕ್ತರಿಗೆ ಅನಾನುಕೂಲ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಸ್ತುತ ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಯಾವ ಯಾವ ಮೂಲ ಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ ; (ಸಂಪೂರ್ಣ ಇವರ ನೀಡುವುದು)

(ಇ) ವಿಶೇಷ ದಿನಗಳಲ್ಲಿ ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಉತ್ತಮ ಗುಣಮಟ್ಟದ ದಾಸೋಹ ನಿರ್ವಹಣೆ ಮಾಡಲಾಗುತ್ತಿದೆಯೇ ; ದಾಸೋಹ ಕಟ್ಟಡದ ಸ್ಥಿತಿಗತಿ ನಿರ್ವಹಣೆ ಇಲ್ಲದೇ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತಂತೆ ಕೈಗೊಂಡಿರುವ ಕ್ರಮವೇನು ; (ಸಂಪೂರ್ಣ ವಿವರ ಒದಗಿಸುವುದು)

(ಈ) ದೇವಸ್ಥಾನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸಕಾಲದಲ್ಲಿ ವೇತನ ಪಾವತಿಸಲಾಗುತ್ತಿದೆಯೇ ; (ವಿವರ ಒದಗಿಸುವುದು)

(ಉ) ಪಾವತಿಸದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಪಾವತಿಸಲಾಗುವುದು ;

(ಊ) ಭಕ್ತರು ದೇವಸ್ಥಾನಕ್ಕೆ ನೀಡಲಾಗುತ್ತಿರುವ ಅಕ್ಕಿ, ದವಸ ಹಾಗೂ ಇತರೆ ಧಾನ್ಯಗಳನ್ನು ಸಮರ್ಪಕವಾಗಿ ಸಂಗ್ರಹಿಸಿ ಬಳಸಲಾಗುತ್ತಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಮುಜರಾಯಿ ಇಲಾಖೆಯ ದೇವಸ್ಥಾನಗಳ ಭೂಮಿ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು):–**

೫೨೮ (೬೬೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮುಜರಾಯಿ ಇಲಾಖೆಯ ದೇವಸ್ಥಾನಗಳಿಗೆ ಸೇರಿದ ಭೂಮಿಯನ್ನು ಪರಭಾರೆ ಮಾಡಲು ಕಾರಣಗಳೇನು ; ಇದರಿಂದ ಸಂಬಂಧಿತ ದೇವಸ್ಥಾನಗಳಿಗೆ ಯಾವ ರೀತಿಯಲ್ಲಿ ಉಪಯೋಗವಾಗಿದೆ ; ದೇವಸ್ಥಾನದ ೯೮೨೫.೯೧ ಎಕರೆ ಜಾಗವನ್ನು ಯಾವ ವರ್ಷದಲ್ಲಿ ಪರಭಾರೆ ಮಾಡಲಾಯಿತು ಮತ್ತು ಯಾರಿಗೆ ಪರಭಾರೆ ಮಾಡಲಾಯಿತು ; (ವಿವರ ನೀಡುವುದು)

(ಆ) ಪರಿಭಾರೆ ಮಾಡಲಾದ ೯೮೨೫.೯೧ ಎಕರೆ ಜಾಗವನ್ನು ಯಾರು ಯಾವ ದೇವಸ್ಥಾನಕ್ಕೆ ಯಾವ ಉದ್ದೇಶಕ್ಕಾಗಿ ನೀಡಲಾಗಿದೆ ಇದರಲ್ಲಿ ದೇವಸ್ಥಾನ ಖರೀದಿಸಿದ ಜಾಗವೆಷ್ಟು ; ದೇವಸ್ಥಾನಕ್ಕೆ ದಾನ, ಉಂಬಳಿ ಮೂಲಕ ದೊರೆತ ಜಾಗವೆಷ್ಟು ; (ವಿವರ ನೀಡುವುದು)

(ಇ) ದೇವಸ್ಥಾನಕ್ಕೆ ದಾನ, ಉಂಬಳಿ ಮೂಲಕ ದೊರೆತ ಜಾಗವನ್ನು ಪರಭಾರೆ ಮಾಡುವ ಕುರಿತು ಇರುವ ನಿಯಮಗಳೇನು ? (ಸದರಿ ನಿಯಮದ ಪ್ರತಿಯನ್ನು ಒದಗಿಸುವುದು)

## ಮನೆಗಳ ಹಂಚಿಕೆ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೫೨೯ (೬೭೦) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ವಿವಿಧ ಯೋಜನೆಗಳನ್ವಯ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ; (ಯೋಜನೆವಾರು ಮತ್ತು ಜಿಲ್ಲಾವಾರು ವಿವರ ಒದಗಿಸುವುದು)

(ಆ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಮನೆಗಳನ್ನು ಕಟ್ಟಲು ಪ್ರಾರಂಭಿಸಲಾಗಿದೆ ; (ವಿವರ ಒದಗಿಸುವುದು)

(ಇ) ಕಳೆದ ೨ ವರ್ಷಗಳಲ್ಲಿ ವಸತಿ ಯೋಜನೆಗೆ ಸಂಬಂಧಪಟ್ಟಂತೆ ರಾಜ್ಯ ಸರ್ಕಾರ ಎಷ್ಟು ಮೊತ್ತ ವೆಚ್ಚ ಮಾಡಲಾಗಿದೆ ? (ಜಿಲ್ಲಾವಾರು ವಿವರ ಒದಗಿಸುವುದು)

## ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ರೈತರ ಜಮೀನು ದುರಸ್ತಿ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೫೩೦ (೭೦೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಕೊಪ್ಪ ಹೋಬಳಿ ಕೋಣಸಾಲೆ ಗ್ರಾಮದ ಸರ್ವೆ ನಂ. ೩೧ರಲ್ಲಿ ಇರುವ ಒಟ್ಟು ಸರ್ಕಾರಿ ಜಮೀನು ಎಷ್ಟು ; ಈ ಪೈಕಿ ಯಾವ್ಯಾವ ವರ್ಷಗಳಲ್ಲಿ

ಯಾರ್ಯಾರಿಗೆ ಎಷ್ಟೆಷ್ಟು ಜಮೀನು ಮಂಜೂರು ಮಾಡಲಾಗಿದೆ ; (ಹೆಸರು ಮತ್ತು ದಿನಾಂಕವಾರು ವಿವರ ನೀಡುವುದು)

(ಆ) ಜಮೀನು ಮಂಜೂರಿದಾರರಿಗೆ ಸಾಗುವಳಿ ಚೀಟಿ ವಿತರಿಸಿ ದಾಖಲು ಮಾಡಿರುವ ವಹಿ (ಪುಸ್ತಕ)ದ ನಕಲು ಪ್ರತಿ ನೀಡುವುದು ; ಸದರಿ ಸರ್ವೆ ನಂಬರ್‌ನಲ್ಲಿ ಮಂಜೂರಾಗದೇ ಉಳಿದಿರುವ ಜಮೀನು ಎಷ್ಟು ;

(ಇ) ಸದರಿ ಮಂಜೂರಿದಾರರಿಗೆ ಅವರ ಜಮೀನಿನ ದುರಸ್ತಿ ಕಾರ್ಯ ನಿರ್ವಹಿಸಲಾಗಿದೆಯೇ ; ಇದ್ದಲ್ಲಿ ಯಾವ ಯಾವ ದಿನಾಂಕಗಳಂದು ನಿರ್ವಹಿಸಲಾಗಿದೆ ; (ಹೆಸರು ಮತ್ತು ದಿನಾಂಕವಾರು ಮಾಹಿತಿ ನೀಡುವುದು)

(ಈ) ಬಾಕಿ ಉಳಿದ ಮಂಜೂರಿದಾರರಿಗೆ ಯಾವ ನಿಗದಿತ ದಿನಾಂಕದೊಳಗೆ ದುರಸ್ತಿ ಕಾರ್ಯ ನಿರ್ವಹಿಸಲಾಗುವುದು ? (ಸ್ಪಷ್ಟ ಮಾಹಿತಿಯನ್ನು ನೀಡುವುದು)

## ತುಮಕೂರು ಜಿಲ್ಲೆ, ಸಿರಾ ತಾಲ್ಲೂಕು, ಚಿಕ್ಕನಹಳ್ಳಿಯ ಧರ್ಮಛತ್ರ ಹಾಗೂ ಶಾಲೆಯ ಜಮೀನಿನ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೫೩೧ (೭೦೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ, ಸಿರಾ ತಾಲ್ಲೂಕು, ಚಿಕ್ಕನಹಳ್ಳಿ ದಾನಿ ಶ್ರೀ ಉಗ್ರೇಗೌಡರು ಹಳೆ ಸರ್ವೆ ನಂ. ೧೯೦, ಹೊಸ ಸರ್ವೆ ನಂ. ೨೦೨ರ ೫-೧ಳ ಗುಂಟೆ ವಿಸ್ತೀರ್ಣ ಮತ್ತು ಹಳೆ ಸರ್ವೆ

ನಂ. ೧೮೭/೧ ಮತ್ತು ೨, ಹೊಸ ಸರ್ವೆ ನಂ. ೧೯೯/೪ ಮತ್ತು ೫ರ ೨-೦೦ ಎಕರೆ ವಿಸ್ತೀರ್ಣದ ಜಮೀನುಗಳನ್ನು ಮಹಾರಾಜರ ಸರ್ಕಾರದ ಆದೇಶ ಸಂ: R ४೭೬೯-೭೦/ ३೬೧-೦೭-೦೬-೧೯೧೦ರಂತೆ ಧರ್ಮಛತ್ರ ಮತ್ತು ಪಾಠಶಾಲೆ ಕಟ್ಟಲು ಈ ಜಮೀನುಗಳನ್ನು ಭೂ ಪರಿವರ್ತನೆಗೊಳಿಸಿ ಕಂದಾಯ ವಜಾಗೊಳಿಸಿ ಜಿಲ್ಲಾಧಿಕಾರಿಗಳ ಸಂರಕ್ಷಣೆಯಲ್ಲಿ ಸರ್ಕಾರ ವಹಿಸಿಕೊಂಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ೧೯೧೨ರ ಶ್ರೀ ಉಗ್ರೇಗೌಡರ ರಿಜಿಸ್ಟರ್ ವಿಲ್‌ನಲ್ಲಿ ನಮೂದಿಸಿರುವಂತೆ ಯಾವ ಕಾರಣಕ್ಕೂ ಈ ಆಸ್ತಿಗಳು ಪರಬಾರೆಯಾಗದಂತೆ ಹಾಗೂ ಸರ್ಕಾರಿ ಆದೇಶ ಸಂಖ್ಯೆ: ೬೪३೦-೫೦, A ಅಂಡ್ I ೧೯೫-೧೫-೦೨, ದಿನಾಂಕ: ೦೬-೦೫-೧೯೧೬ರಂತೆ ಈ ಆಸ್ತಿಗಳ ಸಂರಕ್ಷಣೆ ಹಾಗೂ ಧರ್ಮಛತ್ರ ಮತ್ತು ಈ ಪಾಠಶಾಲೆಗಳ ಆಡಳಿತವನ್ನು ಜಿಲ್ಲಾಧಿಕಾರಿಗಳ ಉಸ್ತುವಾರಿಯಲ್ಲಿ ನಡೆಸಬೇಕೆಂದು ಆದೇಶವಾಗಿದ್ದರೂ, ಜಿಲ್ಲಾಧಿಕಾರಿಗಳ ನ್ಯಾಯಾಲಯ ಪ್ರಕರಣ RP ೯೭/೧೫ರಂತೆ ಈ ದಾನದ ಜಮೀನುಗಳ ಒತ್ತುವರಿಯನ್ನು ತೆರವುಗೊಳಿಸುವಂತೆ ಮೇಲ್ಮನವಿ ಸಲ್ಲಿಸಿದ ಮೇರೆಗೆ ಮಾನ್ಯ ಜಿಲ್ಲಾಧಿಕಾರಿಗಳ ಸ್ಥಳ ತನಿಖೆ ಮಾಡದೆ ವಿಚಾರಣೆ ನಡೆಸದೆ ಶಾಲೆಯ ಹೆಸರಿಗೆ ಕೇವಲ ೦-೧೦ ಗುಂಟೆ ವಿಸ್ತೀರ್ಣ ಮಾತ್ರ ಎಂದು ತೀರ್ಪು ನೀಡಿದ ಪರಿಣಾಮ, ಶಾಲೆಯ ಕಟ್ಟಡಗಳು ಸೇರಿ ಶಾಲೆಗೆ ಬರುವ ದಾರಿಯೇ ಇಲ್ಲದೆ ಶಾಲೆಯನ್ನೇ ಮುಚ್ಚುವ ಸ್ಥಿತಿಗೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಶಾಲೆಯ ಒತ್ತುವರಿಯನ್ನು ತೆರವುಗೊಳಿಸಿ ದಾನಿಗಳು ಆಶ್ರಯದಂತೆ/ಸರ್ಕಾರದ ಆದೇಶದಂತೆ ಶಾಲೆಯ ಆಸ್ತಿಯನ್ನು ಉಳಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

**ಉಗ್ರೇಗೌಡರು ಖಜಾನೆಯಲ್ಲಿ ಇಟ್ಟಿರುವ ಠೇವಣಿ ಹಣದ ಬಗ್ಗೆ**

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೫೩೨ (೭೦೭) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿರಾ ತಾಲ್ಲೂಕು ಚಿಕ್ಕನಹಳ್ಳಿಯ ದಾನಿ ಶ್ರೀ ಉಗ್ರೇಗೌಡರು ತುಮಕೂರು ಜಿಲ್ಲಾ ಖಜಾನೆಯಲ್ಲಿ ಮಹಾರಾಜರ ಸರ್ಕಾರದ ಆದೇಶ ಸಂಖ್ಯೆ: ೨೪೪೦-೨ MUZ ೬೭೫-೦೯-೦೪, ದಿನಾಂಕ: ೨೪-೩-೧೯೧೧ರಲ್ಲಿ ರೂ. ೨೪,೦೦೦/-ಗಳ ಮೂಲಧನವನ್ನು ಸರ್ಕಾರದಲ್ಲಿ ಠೇವಣಿ ಇಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಉದ್ದೇಶಕ್ಕಾಗಿ ಈ ಠೇವಣಿಯನ್ನು ಇಡಲಾಗಿದೆ ;

(ಆ) ೧೯೧೦ರಿಂದ ಇಲ್ಲಿಯವರೆಗೆ ಯಾವ ಯಾವ ಸಾಲಿನಲ್ಲಿ ಈ ಠೇವಣಿ ಹಣದ ಒಟ್ಟು ಬಡ್ಡಿ ಹಣವನ್ನು ಯಾವ ಇಲಾಖೆಯವರು ಯಾವ ಉದ್ದೇಶಕ್ಕೆ ವಿನಿಯೋಗಿಸಿರುತ್ತಾರೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಇನ್ನು ಮುಂದಾದರೂ ಸರ್ಕಾರದ ಆದೇಶ ಸಂಖ್ಯೆ: ೬೪೩೬-೫೦ A ಅಂಡ್ I ೧೯೫-೧೫-೦೨, ದಿನಾಂಕ : ೦೬-೦೯-೧೯೧೬ ರಂತೆ ಜಿಲ್ಲಾಧಿಕಾರಿಗಳ ಉಸ್ತುವಾರಿಯಲ್ಲಿ ಈ

ಠೇವಣಿ ಹಣದ ಬಡ್ಡಿಯನ್ನು ಶ್ರೀ ಉಗ್ರೇಗೌಡರ ಮೂಲ ಉದ್ದೇಶದಂತೆ ಚಿಕ್ಕನಹಳ್ಳಿಯ ಸರ್ಕಾರಿ ಶ್ರೀ ಕೃಷ್ಣರಾಜೇಂದ್ರ ವ್ಯವಸಾಯ ಧರ್ಮ ಪಾಠಶಾಲೆಯ (ಎಸ್.ಕೆ.ವಿ.ಡಿ) ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ವಿನಿಯೋಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ?

## ಮಂಡ್ಯ ಜಿಲ್ಲೆಯಲ್ಲಿ ಇರುವ ದೇವಸ್ಥಾನಗಳ ಅಭಿವೃದ್ಧಿಯ ಬಗ್ಗೆ

**ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೩೩ (೬೪೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯಲ್ಲಿ ಇರುವ ಒಟ್ಟು ದೇವಾಲಯಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಮುಜರಾಯಿ ದೇವಸ್ಥಾನಗಳು ಹಾಗೂ ಇತರೆ ದೇವಸ್ಥಾನಗಳು ಯಾವುವು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಮಂಡ್ಯ ಜಿಲ್ಲೆಯ ಮುಜರಾಯಿ ದೇವಸ್ಥಾನಗಳ ಅಭಿವೃದ್ಧಿಗಾಗಿ ಸರ್ಕಾರ ನೀಡಿರುವ ಅನುದಾನದ ಮೊತ್ತವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಕಳೆದ ಎರಡು ವರ್ಷಗಳಿಂದ ಮುಜರಾಯಿ ದೇವಾಲಯಗಳಿಂದ ಸಂಗ್ರಹಿಸಲಾದ ಹುಂಡಿಯ ಹಣ ಎಷ್ಟು ? (ದೇವಾಲಯಗಳವಾರು ಮಾಹಿತಿ ನೀಡುವುದು)

## ಬೆಂಗಳೂರು – ಮೈಸೂರು ಎಕ್ಸ್‌ಪ್ರೆಸ್‌ವೇ NH - 275ರಲ್ಲಿ ಆಗಮನ ಮತ್ತು ನಿರ್ಗಮನ ಸ್ಥಳಗಳನ್ನು ಮುಚ್ಚುವ ಬಗ್ಗೆ

**ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೩೪ (೬೪೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು – ಮೈಸೂರು ಎಕ್ಸ್‌ಪ್ರೆಸ್‌ವೇ NH - 275ರಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಿಗೆ ಆಗಮನ ಮತ್ತು ನಿರ್ಗಮನವನ್ನು ಯಾವ ಸ್ಥಳಗಳಲ್ಲಿ ನಿಗದಿಗೊಳಿಸಲಾಗಿದೆ ; ಮೂಲ ಅನುಮೋದಿತ ನಕ್ಷೆಯನ್ನು ಒದಗಿಸುವುದು ; (ಮಾಹಿತಿ ನೀಡುವುದು)

(ಆ) ಬಿಡದಿ, ಮಂಡ್ಯ, ಪಾಂಡವಪುರ ಮತ್ತು ಶ್ರೀರಂಗಪಟ್ಟಣದ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಈಗಾಗಲೇ ಒದಗಿಸಿದ್ದ ಆಗಮನ–ನಿರ್ಗಮನ ಸ್ಥಳಗಳನ್ನು ಯಾವ ಮುನ್ಸೂಚನೆ ಇಲ್ಲದೆ ಮುಚ್ಚಲಾಗಿದ್ದು, ಇದರಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಎಕ್ಸ್‌ಪ್ರೆಸ್‌ವೇ NH - 275ರ ಎರಡು ಬದಿ ಸರ್ವಿಸ್ ರಸ್ತೆ ಕಾಮಗಾರಿಗಳು ಮುಗಿದಿದೆಯೇ ; ಇಲ್ಲವಾದಲ್ಲಿ ಪೂರ್ಣಗೊಳ್ಳದೆ ಇರಲು ಕಾರಣಗಳೇನು ; (ವಿವರ ನೀಡುವುದು)

(ಈ) ಎರಡು ಬದಿ ಸರ್ವಿಸ್ ರಸ್ತೆ ಕಾಮಗಾರಿ ಎಲ್ಲೆಲ್ಲಿ ಪ್ರಾರಂಭವಾಗಿದೆ ಹಾಗೂ ಎಲ್ಲೆಲ್ಲಿ ಮುಗಿದಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಶಕ್ತಿ ಯೋಜನೆಯಲ್ಲಿ ಮಹಿಳಾ ಫಲಾನುಭವಿಗಳ ಹಾಗೂ ಇದಕ್ಕೆ ತಗಲುತ್ತಿರುವ ಮೊತ್ತದ ಮಾಹಿತಿ ನೀಡುವ ಬಗ್ಗೆ

**ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೩೫ (೬೭೧) ಮಾನ್ಯ ಸಾರಿಗೆ ಮತ್ತು ಮುಜರಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಕ್ತಿ ಯೋಜನೆ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ ಪ್ರತಿ ತಿಂಗಳು ರಾಜ್ಯದ ಎಷ್ಟು ಮಹಿಳಾ ಪ್ರಯಾಣಿಕರಿಗೆ ಶೂನ್ಯ ಮೊತ್ತದ ಟಿಕೆಟ್ ನೀಡಲಾಗಿದೆ ; ಇದಕ್ಕೆ ತಗಲುತ್ತಿರುವ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ಶಕ್ತಿ ಯೋಜನೆಯಡಿ ಪ್ರತಿದಿನ ಸರಾಸರಿ ಎಷ್ಟು ಮಹಿಳಾ ಪ್ರಯಾಣಿಕರಿಗೆ ಉಚಿತ ಟಿಕೆಟ್ ನೀಡಲಾಗುತ್ತಿದೆ ; ಇದಕ್ಕೆ ತಗಲುವ ಮೊತ್ತವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಶಕ್ತಿ ಯೋಜನೆ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ ಪ್ರತಿ ತಿಂಗಳು ಎಷ್ಟು ಮಹಿಳಾ ಪ್ರಯಾಣಿಕರಿಗೆ ಉಚಿತ ಟಿಕೆಟ್ ನೀಡಲಾಗುತ್ತಿದೆ ; ಇದಕ್ಕೆ ತಗಲುವ ಮೊತ್ತವೆಷ್ಟು ? (ತಾಲ್ಲೂಕುವಾರು ಹಾಗೂ ತಿಂಗಳವಾರು ಸಂಪೂರ್ಣ ಮಾಹಿತಿ ನೀಡುವುದು)

## ಹಲವು ಜಿಲ್ಲೆಗಳ ಬಾಕಿ ಇರುವ ಬಗರ್ ಹುಕುಂ, ಅಕ್ರಮ-ಸಕ್ರಮ, ಕುಮ್ಕಿ ಇತರೆ ಅರ್ಜಿಗಳ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೫೩೬ (೭೧೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ, ಉಡುಪಿ, ದಕ್ಷಿಣ ಕನ್ನಡ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಬಗರ್ ಹುಕುಂ, ಅಕ್ರಮ-ಸಕ್ರಮ, ಕುಮ್ಕಿ ಜಮೀನು ನಮೂನೆ ೫೩, ೫೭, ಬಾಣೆ, ಜುಮ್ಮಾ ಸೇರಿದಂತೆ ವಿವಿಧ ಕೃಷಿ ಪೂರಕ ಜಮೀನು ಮಂಜೂರಾತಿಗೆ ಸೇರಿದಂತೆ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಮಂಜೂರಾದ, ತಿರಸ್ಕೃತವಾದ ವಿಲೇವಾರಿಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆಗಳೆಷ್ಟು ;

(ಇ) ಮಂಜೂರಾದ ಪ್ರಕರಣಗಳಲ್ಲಿ ಆರ್.ಟಿ.ಸಿ. ಮತ್ತು ಹಕ್ಕು ಪತ್ರ ನೀಡಲು ಬಾಕಿ ಇರುವ ಪ್ರಕರಣಗಳೆಷ್ಟು ; ಅರ್ಜಿಗಳು ತಿರಸ್ಕೃತಗೊಳ್ಳಲು ಪ್ರಮುಖ ಕಾರಣಗಳೇನು ;

(ಈ) ಬಾಕಿ ಇರುವ ಅರ್ಜಿಗಳನ್ನು ವಿಲೇವಾರಿ ಮಾಡಿ, ಅರ್ಹರಿಗೆ ಭೂ ಮಂಜೂರಾತಿ ನೀಡಲು ವಿಳಂಬವಾಗುತ್ತಿರುವುದು ಮತ್ತು ಮಂಜೂರಾದ ಪ್ರಕರಣಗಳಲ್ಲಿ ಆರ್.ಟಿ.ಸಿ. ಪಹಣಿ ಪತ್ರ ಮತ್ತು ಸಾಗುವಳಿ ಚೀಟಿ ನೀಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ?

## ರಾಜ್ಯದ ಗಡಿ ಪ್ರದೇಶದ ಗಡಿ ವಿಸ್ತರಣೆ ಮಾಡುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೫೩೭ (೭೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸುಮಾರು ೭೦–೮೦ ವರ್ಷಗಳಿಂದ ರಾಜ್ಯದ ಗ್ರಾಮಗಳಲ್ಲಿ ಗ್ರಾಮಠಾಣಾ ಗಡಿ ವಿಸ್ತರಣೆಯಾಗದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗ್ರಾಮಠಾಣ ಗಡಿ ವಿಸ್ತರಣೆಯಾಗದೆ ಇರುವುದರಿಂದ ರಾಜ್ಯದ ಬೊಕ್ಕಸಕ್ಕೆ ಆಗುತ್ತಿರುವ ನಷ್ಟದ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕಂದಾಯ ಇಲಾಖೆ ಜಂಟಿಯಾಗಿ ಹೊರಡಿಸಿರುವ ಸುತ್ತೋಲೆ ಸಂಖ್ಯೆ: ಗ್ರಾಅಪ/೪೪೧/ಗ್ರಾಪಂಅ/೨೦೧೬ (ಭಾಗ–೩) ದಿನಾಂಕ: ೨೮–೧೦–೨೦೧೬ರನ್ನು ಅನುಷ್ಠಾನ ಗೊಳಿಸಲಾಗಿದೆಯೇ ;

(ಈ) ಅನುಷ್ಠಾನಗೊಳಿಸಿದ್ದಲ್ಲಿ, ಗ್ರಾಮಗಳ ಗಡಿ ವಿಸ್ತರಣೆಯಾಗಿರುವ ಬಗ್ಗೆ ; (ಪೂರ್ಣ ಮಾಹಿತಿ ನೀಡುವುದು)

(ಉ) ಇಲ್ಲದಿದ್ದಲ್ಲಿ, ಅನುಷ್ಠಾನ ಮಾಡಲು ಇರುವ ತೊಡಕುಗಳೇನು ಮತ್ತು ಗ್ರಾಮಗಳ ಗ್ರಾಮಠಾಣ ಗಡಿ ವಿಸ್ತರಣೆಯನ್ನು ಯಾವ ಕಾಲಮಿತಿಯೊಳಗೆ ಮಾಡಲಾಗುವುದು ?

## ಪೆರಿಫೆರಲ್ ವರ್ತುಲ ರಸ್ತೆ – ೨ ಕಾಮಗಾರಿಯ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೮ (೭೨೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೆರಿಫೆರಲ್ ವರ್ತುಲ ರಸ್ತೆ – ೨ ಪ್ರಾರಂಭವಾಗಿದ್ದು ಯಾವಾಗ ಪ್ರಸ್ತುತ ಕಾಮಗಾರಿ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಪೆರಿಫೆರಲ್ ವರ್ತುಲ ರಸ್ತೆ – ೨ ಯ ಉಪಯೋಗಕ್ಕಾಗಿ ರೈತರಿಂದ ಎಷ್ಟು ಎಕರೆ ಜಮೀನನ್ನು ಭೂ ಸ್ವಾಧೀನ ವಶಪಡಿಸಿಕೊಳ್ಳಲಾಗಿದೆ ;

(ಇ) ರೈತರು ಜಮೀನನ್ನು ವಶಪಡಿಸಿಕೊಳ್ಳಲು ಇರುವ ಮಾನದಂಡಗಳೇನು ;

(ಈ) ಪೆರಿಫೆರಲ್ ವರ್ತುಲ ರಸ್ತೆ – ೨ ಕಾಮಗಾರಿ ಪ್ರಸ್ತುತ ಯಾವ ಹಂತದಲ್ಲಿ ಮತ್ತು ಯಾವಾಗ ಪ್ರಾರಂಭ ಮಾಡಲಾಗುವುದು ; ಎಷ್ಟು ಗ್ರಾಮಗಳಲ್ಲಿ ಈ ರಸ್ತೆ ಹಾದು ಹೋಗುತ್ತದೆ ? (ಸಂಪೂರ್ಣ ವಿವರ ನೀಡುವುದು)

## ಬಿ.ಎಂ.ಟಿ.ಸಿ. ಸಂಸ್ಥೆಗೆ ಸರ್ಕಾರ ಉಳಿಸಿಕೊಂಡಿರುವ ಬಾಕಿ ಹಣದ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೯ (೭೨೧) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಕ್ತಿ ಯೋಜನೆ ಪ್ರಾರಂಭವಾದ ದಿನದಿಂದ ಇದುವರೆಗೂ ನಾಲ್ಕು ಸಾರಿಗೆ ಸಂಸ್ಥೆಗಳಿಂದ ಪ್ರಯಾಣ ಮಾಡಿರುವ ಮಹಿಳಾ ಪ್ರಯಾಣಿಕರ ಸಂಖ್ಯೆ ಎಷ್ಟು ;

(ಆ) ಮಹಿಳೆಯರ ಟಿಕೆಟ್ ಮೊತ್ತವನ್ನು ರಾಜ್ಯ ಸರ್ಕಾರವು ಬಿ.ಎಂ.ಟಿ.ಸಿ.ಗೆ ಪೂರ್ಣ ಪ್ರಮಾಣದಲ್ಲಿ ಪಾವತಿಸದೇ ಕೋಟ್ಯಾಂತರ ರೂ. ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಎಷ್ಟು ಬಾಕಿ ಉಳಿಸಿಕೊಂಡಿದೆ ಹಾಗೂ ಬಾಕಿ ಉಳಿಸಿಕೊಳ್ಳಲು ಇರುವ ಕಾರಣಗಳೇನು ;

(ಈ) ಸರ್ಕಾರವು ಈವರೆಗೆ ಬಾಕಿ ಮರುಪಾವತಿಸದಿರುವುದರಿಂದ ಸಂಸ್ಥೆಯು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಶು ಆಸ್ಪತ್ರೆಗಳ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೪೦ (೭೨೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಜಾನುವಾರುಗಳ ಸಂಖ್ಯೆ ಎಷ್ಟು ; ಈ ಸಂಖ್ಯೆಗಳಿಗನುಗುಣವಾಗಿ ಪಶು ಆಸ್ಪತ್ರೆಗಳನ್ನು ತೆರೆಯಲಾಗಿದೆಯೇ ; (ತೆರೆದಿದ್ದಲ್ಲಿ ಪೂರ್ಣ ವಿವರ ನೀಡುವುದು)

(ಆ) ಜಾನುವಾರುಗಳ ಆರೈಕೆಗೆ ಹಾಗೂ ತುರ್ತು ಚಿಕಿತ್ಸೆಗಾಗಿ ತಾಲ್ಲೂಕುವಾರು ಕೈಗೊಂಡಿರುವ ಕ್ರಮಗಳಾವುವು ;

(ಇ) ಬೆಂಗಳೂರು ಜಿಲ್ಲೆಯ ಯಾವ ಯಾವ ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಪಶು ಆಸ್ಪತ್ರೆಗಳನ್ನು ತೆರೆಯಲಾಗಿದೆ ; ಬಾಕಿ ಇರುವ ಸ್ಥಳಗಳಾವುವು ;

(ಈ) ಪ್ರತಿ ಹೋಬಳಿಗೊಂದು ಪಶು ಆಸ್ಪತ್ರೆಯನ್ನು ಕಡ್ಡಾಯವಾಗಿ ತೆರೆಯಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ಕೋಲಾರ ಜಿಲ್ಲೆಯಲ್ಲಿ ವೈದ್ಯರು ಹಾಗೂ ಸಿಬ್ಬಂದಿ ಕೊರತೆ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೧ (೬೦೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನಾ ಇಲಾಖೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು ; ಇದರಲ್ಲಿ ಖಾಯಂ ವೈದ್ಯರು ಹಾಗೂ ಖಾಸಗಿ ವೈದ್ಯರ ಸಂಖ್ಯೆಯೆಷ್ಟು ; ಸರ್ಕಾರದಿಂದ ಮಂಜೂರಾಗಿರುವ ಹುದ್ದೆಗಳ ಸಂಖ್ಯೆಯೆಷ್ಟು ;

(ಆ) ಕೋಲಾರ ಜಿಲ್ಲೆಯ ಪಶುಸಂಗೋಪನಾ ಇಲಾಖೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿ ಸೇರಿ ೩೩೮ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ೨೦೨೦ನೇ ಜಾನುವಾರು ಗಣತಿ ಪ್ರಕಾರ ರಾಜ್ಯದಲ್ಲಿ ಎಷ್ಟು ರಾಸು, ಎಮ್ಮೆ, ಕುರಿ, ಮೇಕೆ, ಹಂದಿ ಮತ್ತು ಕೋಳಿಗಳ ಸಂಖ್ಯೆಯೆಷ್ಟು ; ಈ ಜಾನುವಾರು ಸಂಖ್ಯೆಗೆ ಅನುಗುಣವಾಗಿ ವೈದ್ಯರು ಮತ್ತು ಸಿಬ್ಬಂದಿಗಳ ನೇಮಕವಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಸುಗಳು ಅಕಾಲಿಕವಾಗಿ ಮೃತಪಟ್ಟರೆ ಇದರ ಪರಿಹಾರಕ್ಕಾಗಿ ಎಷ್ಟು ರೂಪಾಯಿಗಳನ್ನು ನಿಗದಿಪಡಿಸಲಾಗಿದೆ ; ಎಲ್ಲಾ ಪ್ರಾಣಿಗಳನ್ನು ಒಳಗೊಂಡಂತೆ, ನಿಗದಿಪಡಿಸುವ ಪರಿಹಾರ ಮೊತ್ತವನ್ನು ಇನ್ನು ಹೆಚ್ಚು ಮಾಡಲು ಸರ್ಕಾರದ ಆಲೋಚನೆ ಇದೆಯೇ ?

## ದೇವಸ್ಥಾನದ ಆಸ್ತಿಯನ್ನು ಖಾಸಗಿಯವರು ಒತ್ತುವರಿ ಮಾಡಿಕೊಂಡಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೨ (೬೧೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಮುಜರಾಯಿ ದೇವಸ್ಥಾನಗಳ ಸಂಖ್ಯೆಯೆಷ್ಟು; ಸದರಿ ದೇವಸ್ಥಾನಗಳು ಎಷ್ಟು ವಿಸ್ತೀರ್ಣದ ಜಾಗವನ್ನು ಹೊಂದಿವೆ ;

(ಆ) ಮುಜರಾಯಿ ಇಲಾಖೆಯು ಎಷ್ಟು ಆಸ್ತಿಯನ್ನು ಬಾಡಿಗೆಗೆ ಮತ್ತು ಗುತ್ತಿಗೆ ನೀಡಿದೆ ಇದಕ್ಕೆ ನಿಗದಿಪಡಿಸಿರುವ ಹಣವೆಷ್ಟು ; ಇದರಿಂದ ಪ್ರತಿ ವರ್ಷ ಬರುತ್ತಿರುವ ಆದಾಯದ ಮೊತ್ತ ಎಷ್ಟು ;

(ಇ) ಸರ್ಕಾರಿ ಆಸ್ತಿಯನ್ನು ಖಾಸಗಿಯವರು ಒತ್ತುವರಿ ಮಾಡಿಕೊಂಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಇದರ ಒಟ್ಟು ಮೌಲ್ಯವೆಷ್ಟು ; (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)

(ಈ) ಒತ್ತುವರಿಯಾಗಿರುವ ಜಮೀನುಗಳ ಪೈಕಿ ಇದುವರೆಗೂ ಎಷ್ಟು ಆಸ್ತಿಯನ್ನು ಸರ್ಕಾರದ ವಶಕ್ಕೆ ಹಿಂಪಡೆಯಲಾಗಿದೆ ; ಹಿಂಪಡೆಯಲು ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಉ) ಧಾರ್ಮಿಕ ಮತ್ತು ದತ್ತಿ ಸಂಸ್ಥೆಗಳಿಗೆ ರಾಜ ಮಹಾರಾಜರ ಕಾಲದಿಂದಲೂ ನಾನಾ ಸಂದರ್ಭಗಳಲ್ಲಿ ದಾನದ ರೂಪದಲ್ಲಿ ಹಾಗೂ ಇನಾಂ ರೂಪದಲ್ಲಿ ಬಂದಿರುವ ಆಸ್ತಿಯ ವಿವರಗಳನ್ನು ಒದಗಿಸುವುದು ; ಇವುಗಳು ಕಂದಾಯ ಇಲಾಖೆಯ ದಾಖಲೆಗಳಲ್ಲಿ ನಮೂದಾಗಿದೆಯೇ ?

## ದಕ್ಷಿಣ ಕನ್ನಡ ಜಿಲ್ಲೆಯ ಗುಂಡ್ಯಾದಿಂದ ಬಂಟ್ವಾಳದವರೆಗೆ ೪ ಪಥ ರಸ್ತೆ ಕಾಮಗಾರಿ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೩ (೬೫೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಗುಂಡ್ಯಾದಿಂದ ಬಂಟ್ವಾಳದವರೆಗೆ ೪ ಪಥ ರಸ್ತೆ ಕಾಮಗಾರಿಯು ನಿಗದಿತ ಸಮಯದಲ್ಲಿ ಪೂರ್ಣಗೊಳ್ಳದೇ ಕುಂಠಿತಗೊಂಡಿದ್ದು, ಪ್ರಯಾಣಿಕರಿಗೆ ಉಂಟಾದ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಈ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಯಾವಾಗ ಮುಕ್ತಾಯಗೊಳ್ಳಬೇಕಾಗಿತ್ತು ; ಈ ಕಾಮಗಾರಿಯ ಒಟ್ಟು ಟೆಂಡರ್ ವೆಚ್ಚ ಎಷ್ಟು ; ಟೆಂಡರ್‌ದಾರರಿಗೆ ಪಾವತಿಸಿದ ಮೊತ್ತ ಎಷ್ಟು ; (ವಿವರ ನೀಡುವುದು)

(ಇ) ೨ ವರ್ಷಗಳಿಂದ ಈ ರಸ್ತೆಯ ನಿರ್ಮಾಣ ಸಂದರ್ಭದಲ್ಲಿ ಬದಲಿ ರಸ್ತೆ, ಸರ್ವಿಸ್ ರಸ್ತೆಯನ್ನು ನಿರ್ಮಿಸದೇ ಗುತ್ತಿಗೆದಾರರು ಟೆಂಡರ್ ನಿಯಮ ಉಲ್ಲಂಘಿಸಿರುವ ಬಗ್ಗೆ ಇಲಾಖೆ ಕ್ರಮ ಕೈಗೊಂಡಿದೆಯೇ ; ರಸ್ತೆ ನಿರ್ಮಾಣ ಸಂದರ್ಭದಲ್ಲಿ ಸಾರ್ವಜನಿಕರಿಗೆ ಪರ್ಯಾಯವಾಗಿ ಸಂಚರಿಸುವ ರಸ್ತೆ ನಿರ್ಮಿಸುವ ಜವಾಬ್ದಾರಿ ಯಾರದ್ದಾಗಿರುತ್ತದೆ ; (ವಿವರ ನೀಡುವುದು)

(ಈ) ಗುಂಡ್ಯಾ ಬಿಸಿ ರೋಡ್ ಪೂರ್ಣಗೊಳಿಸಲು ನಿಗದಿಪಡಿಸಿದ ಸಮಯ ಎಷ್ಟು ; ಸರ್ವಿಸ್ ರಸ್ತೆಯನ್ನು ಪೂರ್ಣಗೊಳಿಸುವುದು ಯಾವಾಗ ; (ವಿವರ ನೀಡುವುದು)

(ಉ) ಮಂಗಳೂರಿನ ಬಿರ್ಕಣೆ ಕಟ್ಟೆಯಿಂದ ಮೂಡಬಿದ್ರೆ-ಕಾರ್ಕಳ ಸಂಪರ್ಕ ರಸ್ತೆ NH - 169 ಕಾಮಗಾರಿ ಪ್ರಾರಂಭಗೊಂಡಿದ್ದು ಯಾವಾಗ ಈ ರಸ್ತೆಯ ಪ್ರಾರಂಭಿಕ ಅಂದಾಜು ವೆಚ್ಚ ಎಷ್ಟು ; ಪ್ರಸ್ತುತ ತಗಲುವ ವೆಚ್ಚ ಎಷ್ಟು ; (ವಿವರ ನೀಡುವುದು) ರಸ್ತೆಯ ನಿರ್ಮಾಣವು ಮನಬಂದಂತೆ ಬದಲಾಯಿಸುತ್ತಿರುವುದು ಯಾವ ಕಾರಣಕ್ಕಾಗಿ ವಿನ್ಯಾಸವನ್ನು ಎಷ್ಟು ಬಾರಿ ಬದಲಾಯಿಸಲಾಗಿದೆ ; ಹಾಗೂ ರಸ್ತೆ ಪೂರ್ಣಗೊಳಿಸುವುದು ಯಾವಾಗ ? (ವಿವರ ನೀಡುವುದು)

## ಮಂಗಳೂರು–ಮೂಡಬಿದ್ರಿಗೆ ಸಂಚರಿಸುವ ಬಸ್ಸುಗಳ ತಂಗುದಾಣದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೪ (೬೫೧) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಸ್ತೆ ಸಾರಿಗೆ ನಿಗಮ (KSRTC) ಮಂಗಳೂರು–ಮೂಡಬಿದ್ರಿಗೆ ಸಂಚರಿಸುವ ಬಸ್ಸುಗಳಿಗೆ ತಂಗುದಾಣವನ್ನು ಒದಗಿಸಲು ನಿರಾಕರಿಸಿರುವ ಮೂಡಬಿದ್ರಿ, ಕಾರ್ಕಳ ಪುರಸಭೆ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; ಈ ಬಸ್ಸುಗಳಿಗೆ ನಿಲ್ದಾಣ ನಿರಾಕರಿಸಲು ಕಾರಣಗಳೇನು ;

(ಆ) ರಾಜ್ಯ ರಸ್ತೆ ಸಾರಿಗೆ ಬಸ್ಸುಗಳಿಗೆ ಪುರಸಭೆ ವ್ಯಾಪ್ತಿಯಲ್ಲೂ ನಿಲ್ದಾಣಗಳು ಇಲ್ಲದಿರುವುದಕ್ಕೆ ಖಾಸಗಿ ಬಸ್ಸುಗಳವರು ಕಾರಣವಲ್ಲವೇ ; (ವಿವರ ನೀಡುವುದು)

(ಇ) (KSRTC) ಬಸ್ಸುಗಳಿಗೆ ನಿಲ್ದಾಣಕ್ಕೆ ತೆರಳುವ ಅವಕಾಶ ನೀಡದೇ ಇರುವ ಬಗ್ಗೆ ಸಾರ್ವಜನಿಕರ ದೂರು ಮತ್ತು ಪತ್ರಿಕೆಯಲ್ಲಿ ಪ್ರಕಟಗೊಂಡಿದ್ದು, ಇಲಾಖೆ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಮೂಡಬಿದ್ರಿ, ಕಾರ್ಕಳ KSRTC ಬಸ್ಸುಗಳಿಗೆ ಪ್ರತ್ಯೇಕವಾಗಿ ನಿಲ್ದಾಣ ಮತ್ತು ಡಿಪೋ ಪ್ರಾರಂಭಿಸಲು ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ ; (ವಿವರ ನೀಡುವುದು)

(ಉ) ಪ್ರಸ್ತುತ ಮಂಗಳೂರು–ಮೂಡಬಿದ್ರಿ–ಕಾರ್ಕಳ ಮಾರ್ಗದಲ್ಲಿ ಕಾರ್ಯನಿರ್ವಹಿಸುತ್ತಿರುವ KSRTC ಬಸ್ಸುಗಳ ಸಂಖ್ಯೆ ಹೆಚ್ಚಿಸಲು ಕೈಗೊಂಡ ಕ್ರಮಗಳೇನು ; ಪ್ರಸ್ತುತ ಸಂಚರಿಸುತ್ತಿರುವ ಬಸ್ಸುಗಳಲ್ಲಿ ಪ್ರಯಾಣಿಸುವರ ಸಂಖ್ಯೆ ಎಷ್ಟು ; ಮಹಿಳೆಯರ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ೨೦೨೪-೨೫ನೇ ಸಾಲಿನಲ್ಲಿ ಕ್ರೈಸ್ತ ಅಲ್ಪಸಂಖ್ಯಾತರಿಗೆ ಮೀಸಲಿಟ್ಟ ಅನುದಾನದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೫ (೬೫೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಸಾಲಿನ ಬಜೆಟ್‌ನಲ್ಲಿ ಕ್ರೈಸ್ತ ಅಲ್ಪಸಂಖ್ಯಾತರಿಗಾಗಿ ಮೀಸಲಿಟ್ಟ ಅನುದಾನ ಎಷ್ಟು ; ಬಿಡುಗಡೆ ಮಾಡಿದ, ಖರ್ಚು ಮಾಡಿದ ಹಾಗೂ ಬಾಕಿ ಉಳಿದಿರುವ ಅನುದಾನ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಕ್ರೈಸ್ತ ಅಭಿವೃದ್ಧಿಗಾಗಿ ಸ್ಥಾಪಿಸಲು ಉದ್ದೇಶಿಸಿದ ಕ್ರೈಸ್ತ ಸಮುದಾಯ ಅಭಿವೃದ್ಧಿ ನಿಗಮ ಯಾವಾಗ ಜಾರಿಗೆ ಬರುವುದು ; (ವಿವರ ನೀಡುವುದು)

(ಇ) ಸದರಿ ನಿಗಮ ಪ್ರಾರಂಭಿಸಿದ ನಂತರ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ "ಕ್ರೈಸ್ತ ಅಭಿವೃದ್ಧಿ ಸಮಿತಿ" ಜಾರಿಯಲ್ಲಿ ಇರುವುದೇ ? (ವಿವರ ನೀಡುವುದು)

## ರಾಜ್ಯದಲ್ಲಿ ಅಪಘಾತಗಳನ್ನು ನಿಯಂತ್ರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೬ (೬೫೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಪಘಾತಗಳನ್ನು ನಿಯಂತ್ರಿಸಲು ಸಾರಿಗೆ ಇಲಾಖೆ ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ಎಷ್ಟು ವಾಹನ ಪರೀಕ್ಷಾ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಮತ್ತು ಎಷ್ಟು ನಿರ್ಮಾಣ ಹಂತದಲ್ಲಿವೆ ; (ಸ್ಥಳಗಳು ಮತ್ತು ವೆಚ್ಚಗಳ ವಿವರ ನೀಡುವುದು)

(ಇ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲೆಕ್ಟ್ರಾನಿಕ್ ಚಾಲಕ ಪರೀಕ್ಷಾ ಟ್ರ್ಯಾಕ್‌ಗಳು ಎಷ್ಟು ; ನಿರ್ಮಾಣ ಹಂತದಲ್ಲಿರುವ ಟ್ರ್ಯಾಕ್‌ಗಳ ಸಂಖ್ಯೆ ಎಷ್ಟು ;

(ಈ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಚಾಲಕ ತರಬೇತಿ ಸಂಸ್ಥೆಗಳು ಎಷ್ಟು ; ನಿರ್ಮಾಣ ಹಂತದಲ್ಲಿರುವ ಸಂಸ್ಥೆಗಳು ಎಷ್ಟು ; (ಸ್ಥಳಗಳು ಮತ್ತು ವೆಚ್ಚಗಳ ವಿವರ ನೀಡುವುದು)

(ಉ) ಮಂಗಳೂರಿನಲ್ಲಿ ವಾಹನ ಪರೀಕ್ಷಾ ಕೇಂದ್ರ, ಎಲೆಕ್ಟ್ರಾನಿಕ್ ಚಾಲಕ ಪರೀಕ್ಷಾ ಟ್ರ್ಯಾಕ್ ಮತ್ತು ಚಾಲಕ ತರಬೇತಿ ಸಂಸ್ಥೆಯ ಅನುಷ್ಠಾನದ ಸ್ಥಿತಿಗತಿಗಳೇನು ? (ವಿವರ ನೀಡುವುದು)

## ಗ್ರಾಮಗಳಲ್ಲಿ ಲೆಕ್ಕಾಧಿಕಾರಿಗಳಿಗೆ ಕಟ್ಟಡ ನೀಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೭ (೬೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಗ್ರಾಮಗಳಲ್ಲಿ ಲೆಕ್ಕಾಧಿಕಾರಿಗಳಿಗೆ ಸ್ವತಂತ್ರ ಕಛೇರಿಯನ್ನು ಒದಗಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಗ್ರಾಮ ಮಟ್ಟದಲ್ಲಿ ಸರ್ಕಾರದ ಭೂಮಿ ಇದ್ದರೂ, ಗ್ರಾಮ ಲೆಕ್ಕಾಧಿಕಾರಿಗಳಿಗೆ ಸ್ವಂತ ಕಟ್ಟಡ ಹಾಗೂ ಮೂಲಭೂತ ಸೌಕರ್ಯವನ್ನು ಒದಗಿಸಲು ಇಲಾಖೆಗೆ ಇರುವ ತೊಂದರೆಗಳೇನು ; ಈ ಬಗ್ಗೆ ಇಲಾಖೆಯ ಮುಂದಿರುವ ಪ್ರಸ್ತಾವನೆಗಳು ಯಾವುವು ; (ವಿವರ ನೀಡುವುದು)

(ಇ) ಗ್ರಾಮ ಲೆಕ್ಕಾಧಿಕಾರಿಗಳು ತಮ್ಮ ಎಲ್ಲಾ ಕರ್ತವ್ಯಗಳನ್ನು ಆಪ್ (APP) ಮೂಲಕ ನಿರ್ವಹಿಸುತ್ತಿದ್ದು, ಕಂಪ್ಯೂಟರ್ ಮತ್ತು ಮೊಬೈಲ್ ಫೋನ್‌ಗಳನ್ನು ಒದಗಿಸದೇ ಇರುವುದರಿಂದ ಕರ್ತವ್ಯವನ್ನು ನಿರ್ವಹಿಸಲು ತೊಂದರೆಯಾಗಿದೆಯೇ ; ಇಲಾಖೆಯ ಗಮನದಲ್ಲಿ ಇದೆಯೇ ; ಈ ಬಗ್ಗೆ ಇಲಾಖೆ ಕೈಗೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಈ) ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗೆ ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣಿ ನಿಗದಿಪಡಿಸಬೇಕೆಂಬ ಬೇಡಿಕೆಯನ್ನು ಈಡೇರಿಸಲು ಇಲಾಖೆ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)

## ಬಗರ್ ಹುಕುಂನಲ್ಲಿ ಅರ್ಜಿ ಸಲ್ಲಿಸಿರುವ ರೈತರ ಜಮೀನನ್ನು ಸಕ್ರಮಗೊಳಿಸುವ ಕುರಿತು

**ಶ್ರೀ ಟಿ.ಎನ್ ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೮ (೬೩೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಜಮೀನಿನಲ್ಲಿ ಅನಧಿಕೃತವಾಗಿ ಸಾಗುವಳಿ ಮಾಡುತ್ತಿರುವ ರೈತರಿಗೆ ಬಗರ್‌ಹುಕುಂನಲ್ಲಿ ನಮೂನೆ 50, 53, 57 ರಲ್ಲಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಸಲ್ಲಿಕೆಯಾದ ಅರ್ಜಿಗಳಲ್ಲಿ ಇಲ್ಲಿಯವರೆಗೆ ವಿಲೇವಾರಿ ಮಾಡದೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; ಮತ್ತು ಎಷ್ಟು ವರ್ಷಗಳಿಂದ ಬಾಕಿ ಇರಿಸಿಕೊಳ್ಳಲಾಗಿದೆ, ಇದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಇ) ಬಾಕಿ ಇರುವ ಈ ನಮೂನೆಯ ಅರ್ಜಿಗಳನ್ನು ಎಷ್ಟು ದಿನಗಳಲ್ಲಿ ವಿಲೇವಾರಿ ಮಾಡಿ ರೈತರಿಗೆ ಹಕ್ಕು ಪತ್ರ ನೀಡಲಾಗುವುದು ; (ಈ ಬಗ್ಗೆ ಸರ್ಕಾರ ಸ್ಪಷ್ಟ ಉತ್ತರ ನೀಡುವುದು)

(ಈ) ಅನರ್ಹ ಫಲಾನುಭವಿಗಳಿಗೆ ಈ ಬಗರ್‌ಹುಕುಂ ಅಡಿಯಲ್ಲಿ ಹಕ್ಕು ಪತ್ರ ವಿತರಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಪ್ಪಿತಸ್ಥ ಅಧಿಕಾರಿ/ನೌಕರರ ಮೇಲೆ ಇಲ್ಲಿಯವರೆಗೆ ತೆಗೆದುಕೊಂಡಿರುವ ಕಾನೂನು ಕ್ರಮಗಳೇನು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ದೇವಸ್ಥಾನಗಳ ಆದಾಯದ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೪೯ (೬೮೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಯಡಿಯಲ್ಲಿ ಬರುವ ದೇವಸ್ಥಾನಗಳು ಯಾವ್ಯಾವು ;

(ಆ) ಕಳೆದ ೨ ವರ್ಷಗಳಲ್ಲಿ ಸದರಿ ದೇವಸ್ಥಾನಗಳಿಂದ ಬಂದಿರುವ ಆದಾಯ ಎಷ್ಟು ; ದೇವಸ್ಥಾನಗಳಿಂದ ಬಂದಿರುವ ಆದಾಯಗಳನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗಿದೆ ; (ದೇವಸ್ಥಾನವಾರು ಸಂಪೂರ್ಣ ವಿವರ ನೀಡುವುದು)

(ಇ) ಹೆಚ್ಚಿನ ಆದಾಯ ಬರುವ ದೇವಸ್ಥಾನಗಳಿಂದ ಅದೇ ಜಿಲ್ಲೆಯ ಇತರ ದೇವಸ್ಥಾನಗಳ ಅಭಿವೃದ್ಧಿಗೆ ಅನುದಾನ ನೀಡಲಾಗಿದೆಯೇ ; ನೀಡಿದ್ದರೆ, ಯಾವ ಯಾವ ದೇವಸ್ಥಾನಗಳಿಗೆ ಎಷ್ಟು ಅನುದಾನ ನೀಡಲಾಗಿದೆ ; (ವಿವರ ಒದಗಿಸುವುದು)

(ಈ) ಹೆಚ್ಚಿನ ಆದಾಯವಿರುವ ದೇವಸ್ಥಾನಗಳಿಂದ ಅದೇ ಜಿಲ್ಲೆಯ ಇತರ ದೇವಸ್ಥಾನಗಳ ಅಭಿವೃದ್ಧಿಗೆ ಪ್ರಸಕ್ತ ವರ್ಷದಲ್ಲಿ ಅನುದಾನ ನೀಡಲಾಗುವುದೇ ?

## ಗೋ ಶಾಲೆಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೦ (೬೮೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಗೋ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ ; ಎಲ್ಲೆಲ್ಲಿವೆ ; ೨೦೨೨-೨೩ರಲ್ಲಿ ಎಷ್ಟು ಗೋಶಾಲೆಗಳಿದ್ದವು ; (ವಿವರ ನೀಡುವುದು)

(ಆ) ಈ ಗೋಶಾಲೆಗಳಿಗೆ ಸರ್ಕಾರದಿಂದ ಎಷ್ಟು ಅನುದಾನವನ್ನು ನೀಡಲಾಗುತ್ತಿದೆ ; ಒಂದು ಪಶುವಿನ ಪಾಲನೆಗೆ ಸರ್ಕಾರದಿಂದ ಎಷ್ಟು ಹಣ ನೀಡಲಾಗುತ್ತಿದೆ ; ಈ ಗೋಶಾಲೆಗಳನ್ನು ಸಂಪೂರ್ಣವಾಗಿ ಸರ್ಕಾರದಿಂದಲೇ ನಿರ್ವಹಣೆ ಮಾಡಲಾಗುತ್ತಿದೆಯೇ ಅಥವಾ ಸಂಘ ಸಂಸ್ಥೆಗಳಿಂದ ನಿರ್ವಹಣೆ ಮಾಡಲಾಗುತ್ತಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಇ) ಸದರಿ ಜಿಲ್ಲೆಗಳಲ್ಲಿ ಮುಂದಿನ ಬೇಸಿಗೆಗೆ ಗೋವುಗಳಿಗೆ ಮೇವನ್ನು ಸಂಗ್ರಹಿಸಲಾಗಿದೆಯೇ ; ಮೇವು ಖರೀದಿಸಲು ಎಷ್ಟು ಅನುದಾನ ಮೀಸಲಿಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಒಂದು ಗೋಶಾಲೆ ನಿರ್ಮಾಣ ಮಾಡಲು ಕನಿಷ್ಟ ಎಷ್ಟು ಎಕರೆ ಜಮೀನು ಬೇಕು ; ಸದರಿ ಜಿಲ್ಲೆಗಳಲ್ಲಿ ಹೊಸ ಗೋ ಶಾಲೆಗಳನ್ನು ಪ್ರಾರಂಭಿಸಲಾಗುವುದೇ ?

## ಮನೆಗಳ ನಿರ್ಮಾಣದ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೧ (೬೮೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ವಸತಿ ಇಲಾಖೆಯಿಂದ ಎಷ್ಟು ಮನೆಗಳನ್ನು ನಿರ್ಮಾಣ ಮಾಡಲಾಗಿದೆ ; (ಯೋಜನೆವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳಲ್ಲಿ ಮನೆಗಳ ನಿರ್ಮಾಣಕ್ಕೆ ವಸತಿ ಇಲಾಖೆಯಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಎಷ್ಟು ಅನುದಾನ ಖರ್ಚಾಗಿದೆ ; (ವಿವರ ಒದಗಿಸುವುದು)

(ಇ) ಈ ಜಿಲ್ಲೆಗಳಲ್ಲಿ ೨೦೨೫-೨೬ನೇ ಸಾಲಿನಲ್ಲಿ ಎಷ್ಟು ಮನೆಗಳ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ ; ಎಷ್ಟು ಅನುದಾನ ಮೀಸಲಿಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಸದರಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯಲ್ಲಿ ಎಷ್ಟು ಮನೆಗಳ ನಿರ್ಮಾಣ ಮಾಡಲಾಗಿದೆ ; ಎಷ್ಟು ಅನುದಾನವನ್ನು ಬಳಸಲಾಗಿದೆ ? (ವಿವರ ನೀಡುವುದು)

## ಕುಕ್ಕೆ ಸುಬ್ರಮಣ್ಯ ದೇವಸ್ಥಾನದಲ್ಲಿ ವಸತಿ ವ್ಯವಸ್ಥೆ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೨ (೬೮೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅತೀ ಹೆಚ್ಚು ಆದಾಯ ನೀಡುತ್ತಿರುವ (ನಂ.೧) ದಕ್ಷಿಣ ಕನ್ನಡ ಜಿಲ್ಲೆಯ ಕುಕ್ಕೆ ಸುಬ್ರಮಣ್ಯ ದೇವಸ್ಥಾನದಲ್ಲಿ ಯಾತ್ರಾರ್ಥಿಗಳಿಗೆ ವಿಶೇಷ ದಿನಗಳಲ್ಲಿ ಮತ್ತು ವಾರದ ರಜಾ ದಿನಗಳಲ್ಲಿ ವಸತಿ ಸಮಸ್ಯೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದಾಗಿ ಸ್ಥಳೀಯರು ಮನೆಗಳಲ್ಲಿ/ಹೋಮ್‌ಸ್ಟೇಗಳಲ್ಲಿ ಯಾತ್ರಾರ್ಥಿಗಳಿಗೆ ವಸತಿಯನ್ನು ನೀಡಿ ಹೆಚ್ಚಿನ ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಪ್ರಸ್ತುತ ಕುಕ್ಕೆ ಸುಬ್ರಮಣ್ಯ ದೇವಸ್ಥಾನದಲ್ಲಿ ಯಾತ್ರಾರ್ಥಿಗಳಿಗೆ ಎಷ್ಟು ವಸತಿ ಗೃಹಗಳಿವೆ ; ಎಷ್ಟು ಕೊಠಡಿಗಳು ಲಭ್ಯವಿದೆ ; ಈ ವಸತಿ ಗೃಹಗಳಿಂದ ವರ್ಷಕ್ಕೆ ಎಷ್ಟು ಆದಾಯ ಬರುತ್ತಿದೆ ; (ಕಳೆದ ಮೂರು ವರ್ಷಗಳ ವಿವರ ಒದಗಿಸುವುದು)

(ಈ) ಸದರಿ ದೇವಸ್ಥಾನದಲ್ಲಿ ಯಾತ್ರಾರ್ಥಿಗಳಿಗೆ ವಸತಿ ವ್ಯವಸ್ಥೆ ಹಾಗೂ ಇತರ ಮೂಲಭೂತ ಸೌಲಭ್ಯಗಳನ್ನು ಹೆಚ್ಚಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ; ಹೊಸದಾಗಿ ವಸತಿ ಗೃಹಗಳ ನಿರ್ಮಾಣಕ್ಕೆ ಕ್ರಮ ವಹಿಸಲಾಗಿದೆಯೇ ?

## ಕೊಡಗು ಜಿಲ್ಲೆಯ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೩ (೬೫೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿನ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ರಸ್ತೆಗಳು ತುಂಬಾ ದುರಸ್ತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಮೀಸಲಿಡಲಾದ ಅನುದಾನ ಎಷ್ಟು ಹಾಗೂ ಬಿಡುಗಡೆ ಮಾಡಲಾದ ಅನುದಾನ ಎಷ್ಟು ? (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯ ಕರ್ನಾಟಕ ಒನ್ ಕೇಂದ್ರಗಳ ನಿರ್ವಹಣೆಯ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೪ (೬೬೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಎಷ್ಟು ಕರ್ನಾಟಕ ಒನ್ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಮತ್ತು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಗ್ರಾಮ ಒನ್ ಕೇಂದ್ರಗಳ ಮೂಲಕ ಗ್ರಾಮಸ್ಥರಿಗೆ ಯಾವ ಯಾವ ಸೇವೆಗಳು ಲಭ್ಯವಿದೆ ಮತ್ತು ನಿಗದಿಪಡಿಸಲಾದ ಶುಲ್ಕ ಎಷ್ಟು ; (ಸೇವೆಗಳ ಅನುಸಾರ ಮಾಹಿತಿ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಕರ್ನಾಟಕ ಒನ್ ಕೇಂದ್ರಗಳಲ್ಲಿ ಒಟ್ಟು ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ ಮತ್ತು ಅದರಲ್ಲಿ ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ?

## ವಿಜಯಪುರ ಜಿಲ್ಲೆಯ ಗೋಮಾಳ ಆಸ್ತಿಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೫ (೭೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿ ಒಟ್ಟು ಎಷ್ಟು ಗೋಮಾಳ ಭೂಮಿ ಲಭ್ಯವಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಭೂಮಿಯನ್ನು ಇತ್ತೀಚಿನ ವರ್ಷಗಳಲ್ಲಿ ಯಾರು, ಹೇಗೆ ಅನುಭವಿಸುತ್ತಿದ್ದಾರೆ, ಅಕ್ರಮವಾಗಿ ಸ್ವಾಧೀನ ಮಾಡಿಕೊಂಡ ಗೋಮಾಳ ಭೂಮಿ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ವಿಜಯಪುರ ಜಿಲ್ಲೆಯಲ್ಲಿ ಮುಫತ್ (ಗಾಯಠಾಣಾ) (ಉಚಿತ) ವಿತರಿಸಿದ ಭೂಮಿಯ ಒಟ್ಟು ಪ್ರಮಾಣ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಈ ಭೂಮಿಯನ್ನು ಯಾವ ಪಂಗಡದ ಜನರಿಗೆ (SC/ST/ OBC/ಪ್ರಿಯಾರಿಟಿ ಗ್ರೂಪ್) ನೀಡಲಾಗಿದೆ ; ಈ ಭೂಮಿ ನ್ಯಾಯಯುತವಾಗಿ ಹಂಚಿಕೆಯಾಗಿದೆಯಾ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಉ) ಸರ್ಕಾರದ ಭೂಮಿ ನಿರ್ವಹಣೆ ಮತ್ತು ಸುಧಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಗೋಮಾಳ ಮತ್ತು ಮುಫತ್ ಭೂಮಿ ಅಕ್ರಮವಾಗಿ ಕಬ್ಜೆಯಾಗಿದ್ದರೆ ಅವರ ಮೇಲೆ ಸರ್ಕಾರದ ಕ್ರಮವೇನು ; ಜಿಲ್ಲೆಯಲ್ಲಿ ಎಷ್ಟು ಪ್ರಕರಣಗಳಲ್ಲಿ ಕ್ರಮವಾಗಿದೆ ? (ಪ್ರಕರಣವಾರು ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಮುಸ್ಲಿಂಮರಲ್ಲಿಯ ಒಳಪಂಗಡಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೬ (೭೧೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಸ್ಲಿಂಮರ ಒಟ್ಟು ಪಂಗಡ ಹಾಗೂ ಒಳಪಂಗಡಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಮುಸ್ಲಿಂಮರಲ್ಲಿ ಆರ್ಥಿಕವಾಗಿ ಅತಿ ಹಿಂದುಳಿದ ಒಳಪಂಗಡಗಳು ಯಾವುವು ; ಅಂತಹ ಒಳಪಂಗಡಗಳನ್ನು ಗುರುತಿಸಿ ಅವರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; (ವಿವರ ನೀಡುವುದು)

(ಇ) ಅಲ್ಪಸಂಖ್ಯಾತರ ವಸತಿ ನಿಲಯಗಳಲ್ಲಿ ಮುಸ್ಲಿಂಮರಿಗೆ ಶೇಕಡಾ ೭೨ ರಷ್ಟು ಮೀಸಲಾತಿ ನೀಡಲಾಗುತ್ತಿದ್ದು, ಅದರಲ್ಲಿನ ಒಳಪಂಗಡಗಳಿಗೂ ಮೀಸಲಾತಿ ನೀಡಲಾಗುತ್ತಿದೆಯೇ ; ಇದ್ದಲ್ಲಿ, ಒಳಪಂಗಡವಾರು ಸಂಪೂರ್ಣ ವಿವರ ನೀಡುವುದು ;

(ಈ) ಆರ್ಥಿಕವಾಗಿ ಹಿಂದುಳಿದ ಮುಸ್ಲಿಂ ಸಮುದಾಯದ ಒಳಪಂಗಡಗಳನ್ನು ಯಾವ ಯಾವ ಜಾತಿಯ ಪಟ್ಟಿಗೆ ಸೇರ್ಪಡೆ ಮಾಡಲಾಗಿದೆ ? (ವಿವರ ನೀಡುವುದು)

## ಗ್ರಾಮ ಆಡಳಿತ ಅಧಿಕಾರಿಗಳ ನೇಮಕ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೫೫೭ (೬೯೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ವಿವಿಧ ಜಿಲ್ಲಾ ಕಂದಾಯ ಘಟಕಗಳಿಗೆ ಗ್ರಾಮ ಆಡಳಿತ ಅಧಿಕಾರಿ (ವಿಎಓ) ಗಳನ್ನು ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ರಾಜ್ಯದ ಯಾವ ಯಾವ ಜಿಲ್ಲಾ ಕಂದಾಯ ಘಟಕಗಳಲ್ಲಿ ಅರ್ಹ ಅಭ್ಯರ್ಥಿಗಳ ಅಂತಿಮ ಪಟ್ಟಿ ಪ್ರಕಟಿಸಲಾಗಿದೆ ; ಅಂತಿಮ ಪಟ್ಟಿ ಪ್ರಕಟಿಸಲು ಬಾಕಿ ಇರುವ ಜಿಲ್ಲೆಗಳು ಯಾವುವು ; (ವಿವರ ನೀಡುವುದು)

(ಇ) ಕೆಲವು ಜಿಲ್ಲೆಗಳಲ್ಲಿ ಸಿಂಧುತ್ವ ಪ್ರಮಾಣ ಪತ್ರ, ಪೊಲೀಸ್ ವರದಿ ನಿರೀಕ್ಷಿಸಿರುವುದರಿಂದ ಅಭ್ಯರ್ಥಿಗಳ ಅಂತಿಮ ಪಟ್ಟಿ ಪ್ರಕಟಿಸಲು ವಿಳಂಬ ಆಗುತ್ತಿರುವುದು ನಿಜವೇ ;

(ಈ) ರಾಜ್ಯದ ಎಲ್ಲಾ ಜಿಲ್ಲಾ ಕಂದಾಯ ಘಟಕಗಳಲ್ಲಿ ಅರ್ಹ ಗ್ರಾಮ ಆಡಳಿತ ಅಧಿಕಾರಿಗಳಿಗೆ ನೇಮಕಾತಿ ಆದೇಶ ಪತ್ರವನ್ನು ಯಾವಾಗ ನೀಡಲಾಗುತ್ತದೆ ;

(ಉ) ಅಭ್ಯರ್ಥಿಗಳು ಹೊಸದಾಗಿ ಕೆಲಸಕ್ಕೆ ಸೇರುವುದರಿಂದ ವೃತ್ತಿ ಬುನಾದಿ ತರಬೇತಿಯನ್ನು ನೀಡಲಾಗುವುದೇ ; ಇದ್ದಲ್ಲಿ, ತರಬೇತಿಯ ಅವಧಿ ಎಷ್ಟು ; ಯಾವ ಸಂಸ್ಥೆ ಮೂಲಕ ತರಬೇತಿ ನೀಡಲು ಉದ್ದೇಶಿಸಲಾಗಿದೆ ; (ವಿವರ ನೀಡುವುದು)

(ಊ) ಗ್ರಾಮ ಆಡಳಿತ ಅಧಿಕಾರಿಗಳು ಪೂರ್ಣ ಪ್ರಮಾಣದಲ್ಲಿ ಸಾರ್ವಜನಿಕ ಸೇವೆಗೆ ಎಂದಿನಿಂದ ಲಭ್ಯವಾಗಲಿದ್ದಾರೆ ? (ಮಾಹಿತಿ ನೀಡುವುದು)

## ಮುಜರಾಯಿ ಇಲಾಖೆಗೆ ಸೇರಿದ ದೇವಾಲಯದಲ್ಲಿ ಅರ್ಚಕರಲ್ಲದವರಿಗೆ ವೇತನ ಭತ್ಯೆ ಪಾವತಿಸಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೫೫೮ (೬೯೧) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಜರಾಯಿ ಇಲಾಖೆಗೆ ಸೇರಿರುವ ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ ತಾಲ್ಲೂಕು ಕಿರಂಗೂರು ಗ್ರಾಮದ ಶ್ರೀರಾಮ ದೇವಾಲಯದ ಅರ್ಚಕರಲ್ಲದವರಿಗೆ ವರ್ಷಾಪನ ಹಣ ಪಾವತಿ ಮಾಡಿ ಆರ್ಥಿಕ ದುರುಪಯೋಗವೆಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾರು ಯಾರಿಗೆ ಹಣ ಪಾವತಿಸಲಾಗಿದೆ ; ಇದರಿಂದ ಸರ್ಕಾರಕ್ಕೆ ಆಗಿರುವ ಆರ್ಥಿಕ ನಷ್ಟ ಎಷ್ಟು ; ಎಷ್ಟು ವರ್ಷಗಳಿಂದ ಹಣ ಪಾವತಿಸಿಕೊಂಡು ಬರಲಾಗುತ್ತಿದೆ ; (ವರ್ಷವಾರು ಮಾಹಿತಿ ನೀಡುವುದು)

(ಇ) ಸರ್ಕಾರ ಈ ದೇವಾಲಯಕ್ಕೆ ಕೊನೆಯದಾಗಿ ನೇಮಕ ಮಾಡಿರುವ ಅರ್ಚಕರು ರ್ಯಾರು ; ಈಗ ಅರ್ಚಕರಾಗಿ ಕೆಲಸ ನಿರ್ವಹಿಸುತ್ತಿರುವವರು ಯಾರು ; ಮೂಲ ಅರ್ಚಕರಲ್ಲದವರಿಗೆ ವರ್ಷಾಪನ ಹಣವನ್ನೂ ಕೆಲ ವರ್ಷಗಳಿಂದ ಪಾವತಿಸುತ್ತಿರುವುದರಲ್ಲಿ ಅಧಿಕಾರಿ/ ಸಿಬ್ಬಂದಿಗಳ ಪಾತ್ರ ಇದೆಯೇ ; (ಸಂಪೂರ್ಣ ವಿವರ ನೀಡುವುದು)

(ಈ) ಸರ್ಕಾರಕ್ಕೆ ಆರ್ಥಿಕ ನಷ್ಟವನ್ನುಂಟು ಮಾಡಿದ ಅಧಿಕಾರಿ/ ಸಿಬ್ಬಂದಿಗಳ ವಿರುದ್ಧ ಯಾವ ರೀತಿ ಕ್ರಮವಹಿಸಲಿದೆ ; ಆರ್ಥಿಕ ನಷ್ಟವನ್ನು ಯಾವ ರೀತಿ ವಸೂಲು ಮಾಡಲಿದೆ ಹಾಗೂ ದೇವಾಲಯಕ್ಕೆ ಅರ್ಚಕರನ್ನು ನೇಮಕ ಮಾಡುವ ಕುರಿತು ಸರ್ಕಾರದ ನಿಲುವೇನು ;

(ಉ) ಈ ದೇವಾಲಯದ ಸ್ಥಿರಾಸ್ತಿ ಮತ್ತು ಚರಾಸ್ತಿ ಸಂರಕ್ಷಣೆಗೆ ಸರ್ಕಾರ ಯಾವ ಕ್ರಮ ತೆಗೆದುಕೊಳ್ಳಲಿದೆ ಹಾಗೂ ಈ ದೇವಾಲಯಕ್ಕೆ ಈವರೆಗೂ ಬಂದಿರುವ ಆದಾಯ ಮತ್ತು ವಿವಿಧ ಬಾಬ್ತುಗಳಿಗೆ ಮಾಡಲಾಗಿರುವ ವೆಚ್ಚ ಎಷ್ಟು ; (ವಿವರ ನೀಡುವುದು)

(ಊ) ಮಂಡ್ಯ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಗೆ ಸೇರಿದ ದೇವಾಲಯಗಳಲ್ಲಿ ಆರ್ಥಿಕ ದುರುಪಯೋಗ ಆಗುತ್ತಿರುವುದು ಹಾಗೂ ಅರ್ಚಕರಲ್ಲದವರು ಅರ್ಚಕರಾಗಿ ಅಕ್ರಮವಾಗಿ ಸೇವೆ ಸಲ್ಲಿಸುತ್ತಾ ಸರ್ಕಾರದ ಸವಲತ್ತು ಪಡೆಯುತ್ತಿರುವ ಸಾಧ್ಯತೆ ಇರುವುದರಿಂದ ಎಲ್ಲಾ ದೇವಾಲಯಗಳಲ್ಲೂ ತನಿಖೆ ಅಥವಾ ಪರಿಶೀಲನೆಗೆ ಒಳಪಡಿಸಲು ಸರ್ಕಾರ ಕ್ರಮ ವಹಿಸಲಿದೆಯೇ ? (ಮಾಹಿತಿ ನೀಡುವುದು)

## ಮಂಡ್ಯ ಜಿಲ್ಲೆಯಲ್ಲಿನ ರಾಷ್ಟ್ರೀಯ/ರಾಜ್ಯ ಹೆದ್ದಾರಿಗಳಲ್ಲಿ ಅಪಘಾತಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೫೫ (೬೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯಲ್ಲಿ ಹಾದುಹೋಗಿರುವ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳು ಯಾವುವು ; (ಹೆದ್ದಾರಿಗಳ ರಸ್ತೆ ಹೆಸರು, ಸಂಖ್ಯೆ ಮತ್ತು ಉದ್ದ (ಕಿ.ಮೀ.ಗಳಲ್ಲಿ) ವಿವರವನ್ನು ಒಳಗೊಂಡಂತೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ಹಾದುಹೋಗಿರುವ ಕೆಲವು ರಾಜ್ಯ ಹೆದ್ದಾರಿಗಳು ಇಕ್ಕಟ್ಟಾಗಿದ್ದು ಇವುಗಳ ವಿಸ್ತರಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಅಂತಹ ಯಾವ ಯಾವ ರಸ್ತೆಗಳನ್ನು ವಿಸ್ತರಿಸಲು ಗುರುತಿಸಲಾಗಿದೆ ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ರಾಜ್ಯ ಹೆದ್ದಾರಿಗಳನ್ನು ಅಭಿವೃದ್ಧಿಪಡಿಸಲಾಗಿದೆ (ಉದ್ದ ಕಿ.ಮೀ.ಗಳಲ್ಲಿ) ಹಾಗೂ ಇದಕ್ಕೆ ಭರಿಸಲಾಗಿರುವ ವೆಚ್ಚ ಎಷ್ಟು ; (ಮಾಹಿತಿ ನೀಡುವುದು)

(ಈ) ಈ ಹೆದ್ದಾರಿಗಳಲ್ಲಿ ಕಳೆದ ೫ ವರ್ಷಗಳಲ್ಲಿ ಸಂಭವಿಸಿರುವ ರಸ್ತೆ ಅಪಘಾತಗಳ ಸಂಖ್ಯೆ ಎಷ್ಟು ; ಮೃತಪಟ್ಟವರು ಮತ್ತು ಗಾಯಗೊಂಡವರ ಸಂಖ್ಯೆ ಎಷ್ಟು ; (ವರ್ಷವಾರು, ರಾಜ್ಯ/ ರಾಷ್ಟ್ರೀಯ ಹೆದ್ದಾರಿವಾರು ಮಾಹಿತಿ ನೀಡುವುದು)

(ಉ) ಈ ಹೆದ್ದಾರಿಗಳಲ್ಲಿ ಸುಗಮ ಸಂಚಾರಕ್ಕಾಗಿ ತೆಗೆದುಕೊಂಡಿರುವ ಸುರಕ್ಷತಾ ಕ್ರಮಗಳೇನು ?

## ಕೆ.ಆರ್.ಎಸ್.ತೇಲುವ ಪಂಜರಗಳಲ್ಲಿ ಮೀನು ಕೃಷಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೬೦ (೬೯೩) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆ ಕೃಷ್ಣರಾಜಸಾಗರ (ಕೆ.ಆರ್.ಎಸ್) ಜಲಾಶಯದಲ್ಲಿ ತೇಲುವ ಪಂಜರಗಳಲ್ಲಿ ಮೀನು ಕೃಷಿ' ಕೈಗೊಳ್ಳಲಾಗಿದೆಯೇ ;

(ಆ) ತೇಲುವ ಪಂಜರಗಳಲ್ಲಿ ಎಷ್ಟು ವರ್ಷಗಳಿಂದ ಮೀನು ಕೃಷಿ ಕೈಗೊಳ್ಳಲಾಗಿದೆ ; ಎಷ್ಟು ಮಂದಿ ಗುತ್ತಿಗೆದಾರರು ಪಂಜರ ಕೃಷಿ ಕೈಗೊಂಡಿದ್ದಾರೆ ; ಗುತ್ತಿಗೆ ಮೊತ್ತ ಮತ್ತು ಎಷ್ಟು ತೇಲುವ ಪಂಜರಗಳನ್ನು ನಿರ್ಮಾಣ ಮಾಡಿ ಮೀನು ಸಾಕಾಣಿಕೆ ಮಾಡುತ್ತಿರುತ್ತಾರೆ ; (ಸಂಪೂರ್ಣ ವಿವರ ನೀಡುವುದು)

(ಇ) ಕೆ.ಆರ್.ಎಸ್. ಜಲಾಶಯದಲ್ಲಿ ಯಾವ ತಳಿಯ ಮೀನನ್ನು ಬೆಳಸಲಾಗುತ್ತದೆ ; ೨೦೨೦-೨೧ನೇ ಸಾಲಿನಿಂದ ಈವರೆವಿಗೂ ಮೀನು ಮರಿ ಬಿತ್ತನೆ, ಹಿಡುವಳಿ, ಮಾರಾಟದಿಂದ ಬಂದ ಆದಾಯ ಎಷ್ಟು ಮಾಹಿತಿ ನೀಡುವುದು ;

(ಈ) ಗುತ್ತಿಗೆ ಪಡೆಯುವವರಿಗೆ ಸರ್ಕಾರದ ವತಿಯಿಂದ ನೀಡುವ ತಾಂತ್ರಿಕ ಮತ್ತು ಆರ್ಥಿಕ ನೆರವುಗಳೇನು ;

(ಉ) ಗುತ್ತಿಗೆ ನೀಡುವಾಗ ಪಾಲಿಸಬೇಕಾದ ಷರತ್ತು ಮತ್ತು ನಿಬಂಧನೆಗಳು ಏನು ?

## ಮುಜರಾಯಿ ಇಲಾಖೆಗೆ ಸೇರಿದ ದೇವಾಲಯಗಳ ಹೆಸರಿಗೆ ಸ್ಥಳ ಖಾತೆ ಆಗಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೬೧ (೬೫೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಗೆ ಸೇರಿದ 'ಸಿ' ವರ್ಗದ ದೇವಾಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ದೇವಾಲಯಕ್ಕೆ ಸೇರಿದ ಸ್ಥಿರಾಸ್ತಿಗಳು, ಕೊಡುಗೆ ಜಮೀನುಗಳು ಆಯಾಯ ದೇವಸ್ಥಾನಗಳ ಹೆಸರಿನಲ್ಲಿ ಖಾತೆ ಆಗಿದೆಯೇ ; ಇದ್ದಲ್ಲಿ, ದೇವಾಲಯಗಳಿಗೆ ಸೇರಿದ ಒಟ್ಟು ಸ್ಥಿರಾಸ್ತಿಗಳು ಎಷ್ಟು ; (ವಿಸ್ತೀರ್ಣದೊಂದಿಗೆ ಮಾಹಿತಿ ನೀಡುವುದು)

(ಇ) ಇಲ್ಲದಿದ್ದಲ್ಲಿ, ಯಾವ ಯಾವ ದೇವಸ್ಥಾನಗಳ ಹೆಸರಿಗೆ ಸ್ಥಿರಾಸ್ತಿ ಇನ್ನೂ ಖಾತೆ ಆಗಿರುವುದಿಲ್ಲ ; ಇದುವರೆವಿಗೂ ಸ್ಥಳ/ ಜಮೀನು ಖಾತೆ ಆಗದಿರುವುದಕ್ಕೆ ಕಾರಣವೇನು ; ಅಂತಹ ದೇವಸ್ಥಾನಗಳ ವಿವರ ನೀಡುವುದು ;

(ಈ) ಕೆಲವು ದೇವಸ್ಥಾನಗಳಿಗೆ ಸೇರಿರುವ ಕೊಡುಗೆ ಜಮೀನುಗಳನ್ನು ಕೆಲವರು ಅಕ್ರಮವಾಗಿ ಮಾಡಿಕೊಂಡಿರುವ ಹಾಗೂ ಕೆಲವು ಪ್ರಕರಣಗಳಲ್ಲಿ ಘನ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಉಡುಪಿ ಜಿಲ್ಲೆಯ ಮರವಂತೆ ಹೊರ ಬಂದರು ಕಾಮಗಾರಿಯ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೬೨ (೬೮೫) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯ ಮರವಂತೆ ಹೊರ ಬಂದರು ಕಾಮಗಾರಿಯ ಯೋಜನಾ ಅಂದಾಜು ಮೊತ್ತವೆಷ್ಟು ; ಈ ಕಾಮಗಾರಿಯ ಗುತ್ತಿಗೆ ಪಡೆದ ಸಂಸ್ಥೆ ಯಾವುದು ; ಎಷ್ಟು ಮೊತ್ತಕ್ಕೆ ಟೆಂಡರ್ ನೀಡಲಾಗಿದೆ ; ಈ ಕಾಮಗಾರಿಯ "ವಿಸ್ತೃತ ಯೋಜನಾ ವರದಿ" ಯ ಪ್ರತಿಯೊಂದಿಗೆ ಗುತ್ತಿಗೆ ಪ್ರಕ್ರಿಯೆಯ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಗುತ್ತಿಗೆ ಪಡೆದ ಸಂಸ್ಥೆಯ ಅರ್ಹತೆಯೇನು ; ಸಂಸ್ಥೆಯು ಈ ಹಿಂದೆ ಕಾಮಗಾರಿ ನಿರ್ವಹಿಸಿದ ಅನುಭವ ಹೊಂದಿದೆಯೇ ; ಈ ಬಗ್ಗೆ ೩ ನೇ ಪಕ್ಷಗಾರ ಪರಿಶೀಲನೆ ಪಡೆಯಲಾಗಿದೆಯೇ ; (ದಾಖಲಾತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ಮರವಂತೆ ಹೊರ ಬಂದರು ಕಾಮಗಾರಿಯ ಪ್ರಸ್ತುತ ಸ್ಥಿತಿಗತಿಯೇನು ; ಈಗಾಗಲೇ ಈ ಕಾಮಗಾರಿಗಾಗಿ ಗುತ್ತಿಗೆದಾರರಿಗೆ ಪಾವತಿ ಮಾಡಲಾದ ಮೊತ್ತವೆಷ್ಟು ; ಪಾವತಿ ಮಾಡಲು ಬಾಕಿಯಿರುವ ಮೊತ್ತವೆಷ್ಟು ;

(ಈ) ಈ ಕಾಮಗಾರಿಯ ಯೋಜನಾ ಅಂದಾಜು ಮೊತ್ತವನ್ನು ಹೆಚ್ಚಿಸುವ ಪ್ರಸ್ತಾವ ಇಲಾಖೆಯ ಮುಂದಿದೆಯೇ ; ಎಷ್ಟು ಮೊತ್ತಕ್ಕೆ ಹೆಚ್ಚಿಸುವ ಪ್ರಸ್ತಾವನೆಯಿದೆ ; ಯಾವ ಕಾರಣಕ್ಕಾಗಿ ಈ ಪ್ರಸ್ತಾವನೆಯನ್ನು ಪರಿಗಣಿಸಲಾಗುತ್ತಿದೆ ; ಈ ಬಗ್ಗೆ ೩ ನೇ ಪಾರ್ಟಿ ಅಭಿಪ್ರಾಯ ಪಡೆಯಲಾಗಿದೆಯೇ ; ಈ ಕುರಿತಂತೆ ಇಲಾಖಾ ಅಧಿಕಾರಿಗಳ ಹಂತದಲ್ಲಿ ನಡೆದಿರುವ ಪ್ರಕ್ರಿಯೆಯೇನು ?

## ಕರ್ನಾಟಕ ರಾಜ್ಯದಲ್ಲಿ ಆದಾಯ ಪ್ರಮಾಣ ಪತ್ರ ವಿತರಿಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೬೩ (೬೮೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಆದಾಯ ಪ್ರಮಾಣ ಪತ್ರ ವಿತರಿಸುವ ಪ್ರಾಧಿಕಾರ ಯಾವುದು ; ಆದಾಯವನ್ನು ಪ್ರಾಥಮಿಕವಾಗಿ ದೃಢೀಕರಿಸುವ ಅಧಿಕಾರಿ ಮತ್ತು ಈ ಪ್ರಕ್ರಿಯೆಯಲ್ಲಿ ಭಾಗವಹಿಸುವ ಇತರ ಅಧಿಕಾರಿಗಳು ಯಾರು ; ಈ ಆದಾಯ ದೃಢೀಕರಣದ ನೈಜತೆ ಮತ್ತು ಪ್ರಸ್ತುತತೆಯನ್ನು ಯಾವ ಆಧಾರದ ಮೇಲೆ ಒಪ್ಪಿ ಅಂತಿಮವಾಗಿ ಆದಾಯ ಪ್ರಮಾಣ ಪತ್ರ ವಿತರಿಸಲಾಗುತ್ತಿದೆ ;

(ಆ) ಕಂದಾಯ ಇಲಾಖೆಯಲ್ಲಿ ಆನ್ ಲೈನ್ ಮೂಲಕ ಸಲ್ಲಿಸಿದ ಎಷ್ಟು ಅರ್ಜಿಗಳನ್ನು ಒಪ್ಪಿ ಪ್ರಮಾಣ ಪತ್ರ ವಿತರಿಸಿದೆ ; ತಿರಸ್ಕರಿಸಿದ ಅರ್ಜಿಗಳೆಷ್ಟು ; ಅದಕ್ಕೆ ಕಾರಣಗಳೇನು ; (ಕಳೆದ ೩ ವರ್ಷಗಳ ವಿವರ ನೀಡುವುದು)

(ಇ) ಸರ್ಕಾರಿ ನಿಯಂತ್ರಣದಲ್ಲಿರಬಹುದಾದ Aadhar, PAN card ಹಾಗೂ PF, ESI ಆಧಾರಿತ ವ್ಯವಹಾರಗಳಿಂದಲೇ ವ್ಯಕ್ತಿಯ ವಾರ್ಷಿಕ ಆದಾಯವನ್ನು ಗುರುತಿಸಬಹುದಾಗಿದ್ದರೂ ಈ ಸೌಲಭ್ಯಗಳನ್ನು ಹೊಂದಿ ಬಿಪಿಎಲ್ ಆದಾಯವನ್ನು ಮೀರಿರುವ ಅರ್ಜಿದಾರರಿಗೆ ಬಿಪಿಎಲ್ ಆದಾಯ ಪ್ರಮಾಣ ಪತ್ರಗಳು ವಿತರಣೆಯಾಗಿ ಸರ್ಕಾರದ ಸವಲತ್ತುಗಳು ಅನರ್ಹರಿಗೂ ದೊರಕುತ್ತಿರುವುದು ಕಂಡು ಬಂದಿರುವ ಬಗ್ಗೆ ಏನು ಕ್ರಮವಹಿಸಲಾಗುವುದು ;

(ಈ) ಆದಾಯ ಪ್ರಮಾಣ ಪತ್ರವನ್ನು ವಿತರಿಸಲು ಅಧಿಕಾರ ಹೊಂದಿರುವ ಅಧಿಕಾರಿಗಳಿಗೆ ಅರ್ಜಿದಾರರು ನೀಡಿರುವ ಮಾಹಿತಿಯನ್ನು ತಂತ್ರಾಂಶದ ನೆರವು ಪಡೆದು ಲಿಂಕ್ ಆಗಿರುವ "ಆರ್ಥಿಕ ಹಾಗೂ ಆಸ್ತಿ ಪರಿಕರಗಳ" (Financial & Asset instruments like IT & GST returns, Aadhar, PAN, PF, ESI, RC, E-swathu, E-Khata, RTC, etc) ಮೂಲಕ ನೈಜತೆಯನ್ನು ಪರಿಶೀಲಿಸಲು ಯಾಕೆ ಇನ್ನೂ ಸ್ವಯಂಚಾಲಿತ ಅವಕಾಶಗಳನ್ನು ಕಲ್ಪಿಸಲಾಗಿಲ್ಲ ; ಯಾವಾಗ ಆದಾಯ ಪ್ರಮಾಣ ಪತ್ರಸಹಿತ ಎಲ್ಲಾ ಪ್ರಮಾಣ ಪತ್ರಗಳ ವಿತರಣೆಗೆ ಪ್ರಮಾಣೀಕೃತ ಕಛೇರಿ ಪ್ರಕ್ರಿಯೆಗಳನ್ನು (SOP) ಅಂತಿಮಗೊಳಿಸಲಾಗುವುದು ?

## ಡಿ ಸಿ ಮನ್ನಾ ಭೂಮಿ ಪ್ರಸ್ತುತ ಸ್ಥಿತಿಗತಿ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೬೪ (೬೮೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಯಾವ್ಯಾವ ಜಿಲ್ಲೆಗಳಲ್ಲಿ ಡಿ ಸಿ ಮನ್ನಾ ಜಮೀನುಗಳ ಪರಿಕಲ್ಪನೆ ಇದೆ ; ಪ್ರಸ್ತುತ ಈ ಜಮೀನುಗಳು ಯಾರ ಸ್ವಾಧೀನದಲ್ಲಿ ಇವೆ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಸಾಮಾಜಿಕವಾಗಿ ಶೋಷಿತ ಜನರಿಗೆ ಡಿಪ್ರಸ್ಡ್ ಕ್ಲಾಸ್ ಮಾನದಂಡದಡಿ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಒಟ್ಟು ೧೨೬೬೮ ಪ್ರಕರಣಗಳಲ್ಲಿ ೬೪೭೮. ೪೮೫ ಎಕರೆ ಮತ್ತು ಉಡುಪಿ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಒಟ್ಟು ೩೮೦೨ ಪ್ರಕರಣಗಳಲ್ಲಿ ೪೧೮೪.೯೪ ಎಕರೆ ಜಮೀನನ್ನು ಮಂಜೂರು ಮಾಡಿರುವುದು ನಿಜವೇ ಯಾವ ಯಾವ ಸಮುದಾಯಗಳಿಗೆ ಎಷ್ಟು ಭೂ ಮಂಜೂರಾತಿ ಮಾಡಲಾಗಿದೆ ; (ಸಮುದಾಯಗಳ ಹೆಸರು ಸಹಿತ ಲಭ್ಯವಿರುವ ಪಟ್ಟಿ ನೀಡುವುದು)

(ಇ) ಈ ಜಮೀನುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಸಮುದಾಯದ ವ್ಯಕ್ತಿಗಳ ಸ್ವಾಧೀನದಲ್ಲಿ ಇರುವ ಜಮೀನು ಎಷ್ಟು ; ಡಿ ಸಿ ಮನ್ನಾ ಜಮೀನುಗಳನ್ನು ಮಂಜೂರು ಮಾಡುವಾಗ ಇದ್ದ ಪರಿಶಿಷ್ಟ ಜಾತಿ/ಪಂಗಡದ ಸಮುದಾಯಗಳು ಯಾವುವು ; (ಸಮುದಾಯದ ಹೆಸರು ಸಹಿತ ವಿವರ ನೀಡುವುದು)

(ಈ) ಈಗಾಗಲೇ ಮಂಜೂರಾಗಿರುವ ಈ ಜಮೀನುಗಳ ಪ್ರಸ್ತುತ ಸ್ಥಿತಿಗತಿ ಏನು ; ಎಷ್ಟು ಜಮೀನು ಆಕ್ರಮಣವಾಗಿದೆ ; ಎಷ್ಟು ಜಮೀನು ೯೪ ಸಿ, ೯೪ ಸಿಸಿ ಮತ್ತು ಬಗರ್ ಹುಕುಂ ಇತ್ಯಾದಿಗಳಿಗೆ ಮಂಜೂರಾಗಿದೆ ; ಈ ಕುರಿತು ತಾಲ್ಲೂಕುವಾರು ಅಂಕಿ ಅಂಶಗಳಿವೆಯೇ ; ಡಿ ಸಿ ಮನ್ನಾ ಜಮೀನುಗಳನ್ನು ಸಂರಕ್ಷಿಸಲು ಮತ್ತು ಸಂಬಂಧಪಟ್ಟವರಿಗೆ ವಿತರಿಸಲು ಯಾವಾಗ ಕ್ರಮ ವಹಿಸಲಾಗುವುದು ;

(ಉ) ಇತರರು ಸ್ವಾಧೀನಪಡಿಸಲು ಅವಕಾಶವಿರದ ಡಿ ಸಿ ಮನ್ನಾ ಜಮೀನುಗಳು ಪರಭಾರೆಯಾಗಿದ್ದಲ್ಲಿ ಹಿಂಪಡೆಯಲು ಇಲಾಖೆ ಏನು ಕ್ರಮ ವಹಿಸುತ್ತಿದೆ ? (ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆ ರಸ್ತೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೬೫ (೬೮೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿರುವ ರಸ್ತೆಗಳ ಬದಿಯಲ್ಲಿರುವ ಅಪಾಯಕಾರಿ ಮರ, ಕಟ್ಟಡಗಳು, ವಿದ್ಯುತ್ ಕಂಬ ಇತ್ಯಾದಿಗಳನ್ನು ತೆರವುಗೊಳಿಸಲಾಗುತ್ತಿದೆಯೇ ; ಇಲಾಖೆಯ ಗಮನಕ್ಕೆ ಬಂದ ಎಷ್ಟು ಪ್ರಕರಣಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ವಹಿಸಲಾಗಿದೆ ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಈಗಾಗಲೇ ಕೆಲವು ಪ್ರಕರಣಗಳಲ್ಲಿ ರಸ್ತೆಯಲ್ಲಿ ಸಂಚರಿಸುತ್ತಿರುವ ವಾಹನಗಳ ಮೇಲೆ ಮರ ಬಿದ್ದು ಪ್ರಾಣ ಹಾನಿಯಾಗಿದ್ದು ಮುಂದಿನ ದಿನಗಳಲ್ಲಿ ರಸ್ತೆ ಪ್ರಯಾಣಿಕರ ಸುರಕ್ಷತೆಗಾಗಿ ಏನು ಕ್ರಮ ವಹಿಸಲಾಗಿದೆ ;

(ಇ) ಈ ರಸ್ತೆಗಳ ಭೂಗಡಿಯ ಅಂಚನ್ನು ಮತ್ತು ಕಟ್ಟಡ ರೇಖೆಯನ್ನು ಗುರುತಿಸುವುದು ಸಕ್ಷಮ ಪ್ರಾಧಿಕಾರ ಇಲಾಖೆಯೇ ಆಗಿದ್ದು ಕಟ್ಟಡ ರೇಖೆಯು ಅಂತರದೊಳಗಿನ ರಸ್ತೆ ಬದಿಯ ಅನಧಿಕೃತ ಅಂಗಡಿಗಳನ್ನು ತೆರವುಗೊಳಿಸದಿರಲು ಕಾರಣವೇನು ಮತ್ತು ಈ ಜವಾಬ್ದಾರಿಯನ್ನು ಸ್ಥಳೀಯ ಸಂಸ್ಥೆಗಳಿಗೆ ವರ್ಗಾಯಿಸಲು ಅವಕಾಶವಿದೆಯೇ ;

(ಈ) ಲೋಕೋಪಯೋಗಿ ಇಲಾಖೆಯ ರಸ್ತೆ ಅಂಚಿನಲ್ಲಿ ಕಟ್ಟಡ ರೇಖೆಯನ್ನು ಸಕ್ಷಮ ಪ್ರಾಧಿಕಾರ ತಾನೇ ಆಗಿದ್ದರೂ ಸಹಾ ರಸ್ತೆ ಅಂಚಿನಲ್ಲಿ ಕಟ್ಟಡ ಕಟ್ಟುವರೆ ನಿರಾಕ್ಷೇಪಣಾ ಪತ್ರ ನೀಡುವ ಮೊದಲು ಸ್ಥಳೀಯ ಸಂಸ್ಥೆಗಳಾದ ನಗರ ಸ್ಥಳೀಯ ಸಂಸ್ಥೆಗಳ ಮತ್ತು ಗ್ರಾಮ ಪಂಚಾಯತಿಗಳ ಅಭಿಪ್ರಾಯವನ್ನು ಯಾವ ಉದ್ದೇಶಕ್ಕಾಗಿ ಕೋರಲಾಗುತ್ತಿದೆ ;

(ಉ) ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿರುವ ರಸ್ತೆಗಳ ಭೂ ಗಡಿಯ ಅಂಚಿನಲ್ಲಿರುವ ಭೂಮಿಯನ್ನು ಬಫರ್ ವಲಯದ ಭೂಮಿಯನ್ನು ಕಂದಾಯ ಇಲಾಖೆ ಸಂಬಂಧಪಟ್ಟ ಇಲಾಖೆಗಳ ಸಹಮತಿಯೊಂದಿಗೆ ಭೂ ಪರಿವರ್ತನೆ ಮಾಡಿ ವಿನ್ಯಾಸ ಅನುಮೋದನೆ ಮಾಡಿ ನಮೂನೆ ೯/೧೧ ಪಡೆದ ನಂತರ ಸದರಿ ಜಾಗದಲ್ಲಿ ಕಟ್ಟಡ ನಿರ್ಮಿಸಲು ಅನುಮತಿ ನಿರಾಕರಿಸುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರ ಏನು ಕ್ರಮವಹಿಸುತ್ತಿದೆ ?

## ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೬೬ (೬೮೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅನುಷ್ಠಾನಿಸಲಾಗಿರುವ ರಾಷ್ಟ್ರೀಯ ಹೆದ್ದಾರಿ ಚತುಷ್ಪಥ ಕಾಮಗಾರಿಗಳ ಸಮಗ್ರ ಯೋಜನಾ ವರದಿಯನ್ನು ಹೆದ್ದಾರಿ ಹಾದು ಹೋಗುವ ಪ್ರಸ್ತುತ ಜನ ಸಂಖ್ಯೆ ಹಾಗೂ ವಾಹನ ಸಾಂದ್ರತೆಗನುಗುಣವಾಗಿ ಪರಿಷ್ಕರಿಸಲಾಗಿದೆಯೇ: ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಅನುಷ್ಠಾನಿಸಲಾಗುತ್ತಿರುವ ರಾಷ್ಟ್ರೀಯ ಹೆದ್ದಾರಿ–೧೬೬ ಚತುಷ್ಪಥದಲ್ಲಿ ನಿರ್ಮಾಣವಾಗುತ್ತಿರುವ ಅಂಡರ್ ಪಾಸ್, ಫ್ಲೈಓವರ್ ಹಾಗೂ ಸರ್ವೀಸ್ ರಸ್ತೆಗಳ ಸಂಖ್ಯೆಯೆಷ್ಟು ; ಇವುಗಳ ಸಂಖ್ಯೆ ಕಡಿಮೆಯಿರುವ ಕಾರಣ ರಸ್ತೆ ಅಪಘಾತಗಳ ಸಂಖ್ಯೆ ಅಧಿಕಗೊಳ್ಳುವ ಹಿನ್ನಲೆಯಲ್ಲಿ ಯೋಜನಾ ವರದಿಯನ್ನು ಪರಿಷ್ಕರಿಸಿ ಅಗತ್ಯ ಮಾರ್ಪಾಡು ಮಾಡುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಕರಾವಳಿ ಭಾಗದಲ್ಲಿ ರಾಷ್ಟ್ರೀಯ ಹೆದ್ದಾರಿ–೧೬೬ ಚತುಷ್ಪಥ ರಸ್ತೆ ಹಾದು ಹೋಗುವ ಪ್ರದೇಶಗಳಲ್ಲಿ ಹೆಚ್ಚು ಜನಸಾಂದ್ರತೆಯಿದ್ದು ಹಲವು ತಾಲ್ಲೂಕು, ಹೋಬಳಿ ಕೇಂದ್ರ ಸ್ಥಾನ ಹಾಗೂ ಗ್ರಾಮಗಳಲ್ಲಿ ಎರಡೂ ಬದಿಗಳಲ್ಲಿ ಹಲವು ಸಂಪರ್ಕ ರಸ್ತೆಗಳು ಇದ್ದು, ಹೆದ್ದಾರಿ ಪ್ರಾಧಿಕಾರ ಮಂಜೂರು ಮಾಡಿದ ಫ್ಲೈಓವರ್ ಹಾಗೂ ಸರ್ವೀಸ್ ರಸ್ತೆಗಳ ಸಂಖ್ಯೆ ಕಡಿಮೆಯಾಗಿರುವುದರಿಂದ ಯಾವಾಗ ಆಯಾಯ ಪ್ರದೇಶದ ನಾಗರೀಕರು ಹಲವಾರು ಕಿಲೋ ಮೀಟರುಗಳಷ್ಟು ಸುತ್ತಿ ಬಳಸಿ ಬರಬೇಕಾದ ಅನಿವಾರ್ಯತೆ ಸೃಷ್ಟಿಯಾಗಿರುವ ಬಗ್ಗೆ ಇಲಾಖೆ ಯಾವ ಕ್ರಮ ವಹಿಸಿದೆ ;

(ಈ) ಕೆಲವು ಪ್ರದೇಶಗಳಲ್ಲಿ ಮಳೆಯ ಮತ್ತು ನೈಸರ್ಗಿಕ ನೀರು ಹರಿಯುವ ಸ್ಥಳಗಳಲ್ಲಿ ಅಗತ್ಯಕ್ಕೆ ತಕ್ಕಂತೆ ಸೂಕ್ತ ಮಟ್ಟದಲ್ಲಿ ಸೇತುವೆ / ಅಂಡರ್ ಪಾಸ್ ನಿರ್ಮಿಸದೆ ಮಳೆಗಾಲದಲ್ಲಿ ಕೃಷಿ ಭೂಮಿ ಮತ್ತು ನಾಗರೀಕ ಜನ ವಸತಿ ಪ್ರದೇಶಗಳಲ್ಲಿ ಮಳೆ ನೀರು ನುಗ್ಗುವ ಸಂಭವವಿರುವ ಬಗ್ಗೆ ಸ್ಥಳೀಯ ಪರಿಸ್ಥಿತಿಗಳನ್ನು ಪರಿಗಣಿಸಿ ಅಗತ್ಯ ಕ್ರಮ ವಹಿಸಲಾಗಿದೆಯೇ ;

(ಉ) ಈ ಎಲ್ಲಾ ಅಂಶಗಳ ಕುರಿತು ಸರ್ಕಾರ ಹೆದ್ದಾರಿ ಇಲಾಖೆಗೆ ಮನವಿ/ಪತ್ರ ಸಲ್ಲಿಸಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿರುವ ದೇವಸ್ಥಾನಗಳಿಗೆ ನೀಡುವ ಅನುದಾನದ ಬಗ್ಗೆ

**ಶ್ರೀ ಎಂ. ನಾಗರಾಜು ( ವಿಧಾನಸಭೆಯಿಂದ ಚುನಾಯಿತರಾದವರು) :-**

೫೬೭ (೭೩೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೮-೧೯ ರಿಂದ ೨೦೨೧ ೨೨ನೇ ಸಾಲಿನವರೆಗೆ ಒಟ್ಟು ೬೧ ಮುಜರಾಯಿ ದೇವಸ್ಥಾನಗಳಿಗೆ ಗರಿಷ್ಠ ಅರ್ಹ ಅನುದಾನಕ್ಕಿಂತ ಹೆಚ್ಚಾಗಿ ರೂ.೩೯೭೮.೮೨ ಲಕ್ಷ ರೂ ಅನುದಾನ ಹಾಗೂ ೭೯ ದೇವಸ್ಥಾನಗಳಿಗೆ ವಿವಿಧ ಯೋಜನೆಗಳಡಿ (ಒಂದೇ ದೇವಸ್ಥಾನಕ್ಕೆ ವಿವಿಧ ಯೋಜನೆಗಳಡಿ ಅನುದಾನ ಮಂಜೂರು) ೫೧೩.೩೩ ಲಕ್ಷ ರೂ. ಅನುದಾನ ಮಂಜೂರು ಮಾಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಈ ಹಗರಣದಲ್ಲಿ ಭಾಗಿಯಾಗಿರುವ ಅಧಿಕಾರಿ/ ಸಿಬ್ಬಂದಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮವೇನು ; ಮತ್ತು ಸದರಿ ಅನುದಾನವನ್ನು ಹಿಂಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮವೇನು ? (ಮಾಹಿತಿ ನೀಡುವುದು)

## ಕಾಮಗಾರಿ ಆರಂಭವಾಗುವ ಮುನ್ನ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳದಿರುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೬೮ (೭೩೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಲೋಕೋಪಯೋಗಿ ಇಲಾಖೆ ವತಿಯಿಂದ ರಾಜ್ಯದಲ್ಲಿ ರಸ್ತೆ ಅಗಲೀಕರಣ ಯೋಜನೆಗಳಲ್ಲಿ ಅಗತ್ಯವಿರುವ ಭೂಮಿಯನ್ನು

ಕಾಮಗಾರಿ ಆರಂಭವಾಗುವ ಮುನ್ನ ಸ್ವಾಧೀಪಡಿಸಿಕೊಳ್ಳದೇ ರಸ್ತೆ, ಅಗಲೀಕರಣ ಕಾಮಗಾರಿಯನ್ನು ಪ್ರಾರಂಭಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಭೂಮಿ ಸ್ವಾಧೀನ ಪಡಿಸಿಕೊಳ್ಳದೇ ಕಾಮಗಾರಿ ಪ್ರಾರಂಭಿಸಿ ನಂತರ ಭೂಮಾಲೀಕರು ಭೂ ಪರಿಹಾರಕ್ಕಾಗಿ ಸಂಬಂಧಿಸಿದ ಕೋರ್ಟ್ ಮೊರೆ ಹೋಗಿ ನಿಗಧಿಪಡಿಸಿದ ಭೂ ಪರಿಹಾರದ ಮೊತ್ತಕ್ಕಿಂತ ಎರಡರಿಂದ ಮೂರು ಪಟ್ಟು ಹೆಚ್ಚು ಮೊತ್ತವನ್ನು ಪಡೆಯುತ್ತಿದ್ದು, ಇದರಿಂದಾಗಿ ಸರ್ಕಾರದ ಬೊಕ್ಕಸಕ್ಕೆ ಹೆಚ್ಚಿನ ಹೊರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇಂತಹ ಪ್ರಕರಣಗಳು ರಾಜ್ಯದಲ್ಲಿ ಎಲ್ಲೆಲ್ಲಿ ನಡೆದಿವೆ; ಮತ್ತು ನಿಗಧಿಪಡಿಸಿದ ಭೂ ಪರಿಹಾರಕ್ಕಿಂತ ಎಷ್ಟು ಮೊತ್ತ ಇಲಾಖೆ/ ಸರ್ಕಾರದ ಮೇಲೆ ಹೊರೆಯಾಗಲಿದೆ ; (ಜಿಲ್ಲಾವಾರು ಮತ್ತು ಕಾಮಗಾರಿವಾರು ಮಾಹಿತಿ ನೀಡುವುದು)

(ಈ) Karnataka Public Works Departmental Code, 2014 (KPWD Code) ನಂತೆ Separate estimates may be prepared for acquisition of land and be sactioned first and only after the required land is in possession of the Department, tenders for the works be invited , ಎಂದು ತಿಳಿಸಲಾಗಿದ್ದು ಈ ಆದೇಶದಂತೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಉಂಟಾಗುತ್ತಿರುವ ಅಡಚಣೆಗಳೇನು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಸ್ಲಮ್‌ಗಳ ನಿರ್ಮೂಲನೆ ಮಾಡುವ ಕುರಿತು

**ಶ್ರೀ ಎಂ. ನಾಗರಾಜು ( ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೯ (೭೩೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸ್ಲಮ್‌ಗಳು ಎಷ್ಟು ಹಾಗೂ ಬೆಂಗಳೂರಿನಲ್ಲಿರುವ ಸ್ಲಮ್‌ಗಳ ಸಂಖ್ಯೆ ಎಷ್ಟು ; ಈ ಸ್ಲಮ್‌ಗಳ ನಿರ್ಮೂಲನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಸ್ಲಮ್‌ಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಮತ್ತು ಇತರೇ ಸೌಲಭ್ಯಗಳನ್ನು ಒದಗಿಸಲು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಸ್ಥಾಪಿಸಿದ್ದು ಸದರಿ ನಿರ್ಮೂಲನೆಗಾಗಿ ಕಳೆದ ೫೦ ವರ್ಷಗಳಲ್ಲಿ ಕೈಗೊಂಡಿರುವ ಕ್ರಮಗಳೇನು ;

(ಇ) ವಸತಿ ಇಲಾಖೆಯ ಕೊಳಗೇರಿ ನಿವಾಸಿಗಳ ಕ್ಷೇಮಾಭಿವೃದ್ಧಿಗಾಗಿ ಯಾವ ಯೋಜನೆಗಳಡಿ ವಸತಿ ಗೃಹಗಳನ್ನು ನೀಡಲಾಗುತ್ತಿದೆ ;

(ಈ) ಸದರಿ ಯೋಜನೆಗಳಡಿ ವಸತಿ ಗೃಹಗಳನ್ನು ಪಡೆದುಕೊಂಡು ವಸತಿ ಗೃಹವನ್ನು ಇತರರಿಗೆ ಬಾಡಿಗೆ/ಗುತ್ತಿಗೆ ರೂಪದಲ್ಲಿ ನೀಡಿ ಮತ್ತೆ ಕೊಳಗೇರಿ ಸ್ಥಳಗಳಲ್ಲಿ ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?

## ರೇಷ್ಮೆ ಮಾರುಕಟ್ಟೆಗಳನ್ನು ಅಭಿವೃದ್ಧಿಪಡಿಸುವ ಕುರಿತು

**ಶ್ರೀ ಎಂ. ನಾಗರಾಜು ( ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೦ (೭೩೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಏಷ್ಯಾದಲ್ಲಿಯೇ ಅತಿ ಹೆಚ್ಚು ರೇಷ್ಮೆಗೂಡು ಮಾರಾಟ ವಹಿವಾಟು ನಡೆಸುವ ರಾಮನಗರ ಮತ್ತು ಶಿಡ್ಲಘಟ್ಟದಲ್ಲಿರುವ ರೇಷ್ಮೆ ಮಾರುಕಟ್ಟೆಗಳನ್ನು ಹೈಟೆಕ್ ಮಾರುಕಟ್ಟೆಗಳನ್ನಾಗಿ ಅಭಿವೃದ್ಧಿಪಡಿಸಲು ರೂ.೨೫೦ ಕೋಟಿ ವೆಚ್ಚದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿರುವುದು ನಿಜವೇ ;

(ಆ) ಹೌದಾದಲ್ಲಿ, ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ; ಈ ಕಾಮಗಾರಿಗಳ ಪ್ರಸ್ತುತ ಹಂತವೇನು ;

(ಇ) ಈ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಟೆಂಡರ್ ಕರೆಯಲಾಗಿದೆಯೇ ಹಾಗೂ ಗುತ್ತಿಗೆದಾರರನ್ನು ಆಯ್ಕೆ ಮಾಡಲಾಗಿದೆಯೇ ? (ಗುತ್ತಿಗೆದಾರರ ಮತ್ತು ಕಾಮಗಾರಿಗಳ ಸಂಪೂರ್ಣ ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಯ ಅನುದಾನದ ಬಗ್ಗೆ

**ಶ್ರೀ ಎನ್.ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೧ (೬೨೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ ಹಾಗೂ ೨೦೨೪-೨೫ನೇ ಸಾಲಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಮಂಜೂರಾದ ರಸ್ತೆ ಕಾಮಗಾರಿಗಳು ಯಾವುವು ; (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ನೀಡುವುದು)

(ಆ) ಸದರಿ ರಸ್ತೆ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ನೀಡುವುದು)

(ಇ) ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಅನುದಾನ ಬಿಡುಗಡೆ ಆಗಿದೆಯೇ ; ಹಾಗಿದ್ದಲ್ಲಿ, ಬಿಡುಗಡೆ ಮಾಡಲಾಗಿರುವ ಅನುದಾನವೆಷ್ಟು ?

## ವಸತಿ ಯೋಜನೆಯಡಿಯಲ್ಲಿ ಮನೆಗಳ ಮಂಜೂರು ಬಗ್ಗೆ

**ಶ್ರೀ ಎನ್.ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೨ (೬೨೫) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರದ ವಿವಿಧ ವಸತಿ ಯೋಜನೆಯಡಿ ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ ೨೦೨೩ ರಿಂದ ಈವರೆಗೆ ಮಂಜೂರು ಮಾಡಲಾಗಿರುವ ಮನೆಗಳ ಸಂಖ್ಯೆ ಎಷ್ಟು ; (ಯೋಜನೆಯ ಹೆಸರು ಸಹಿತ ಗ್ರಾಮ ಪಂಚಾಯತಿವಾರು ವಿವರಗಳನ್ನು ನೀಡುವುದು)

(ಆ) ಮಂಜೂರಾದ ಮನೆಗಳ ವಿವಿಧ ಹಂತಗಳೇನು ; ಈ ಮನೆಗಳಲ್ಲಿ ಎಷ್ಟು ಮನೆಗಳನ್ನು ಪೂರ್ಣಗೊಳಿಸಲಾಗಿದೆ; ಎಷ್ಟು ಫಲಾನುಭವಿಗಳ ಖಾತೆಗೆ ಹಣ ಜಮಾ ಮಾಡಲಾಗಿದೆ ಹಾಗೂ ಎಷ್ಟು ಬಾಕಿ ಇದೆ ;

(ಇ) ಹಣ ಜಮಾವಣೆ ಮಾಡಲು ಬಾಕಿಯಿರುವ ಫಲಾನುಭವಿಗಳ ಖಾತೆಗೆ ಯಾವಾಗ ಹಣ ಜಮಾ ಮಾಡಲಾಗಿದೆ ?

## ಬಿದರಹಳ್ಳಿ ಹೋಬಳಿಯ ಗ್ರಾಮಗಳ ಬಗ್ಗೆ

**ಶ್ರೀ ಎನ್.ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೩ (೬೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನಿಂದ ೧೯೮೬ ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ದಕ್ಷಿಣ ತಾಲ್ಲೂಕಿಗೆ (ಹಾಲಿ ಪೂರ್ವ ತಾಲ್ಲೂಕು)

ಸ್ಥಳಾಂತರಗೊಂಡಿರುವ ಬಿದರಹಳ್ಳಿ ಹೋಬಳಿಯ ಕಂದಾಯ ಗ್ರಾಮಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಸ್ಥಳಾಂತರಗೊಂಡಿರುವ ಕಂದಾಯ ಗ್ರಾಮಗಳ ದಾಖಲೆಗಳು ಸಮರ್ಪಕವಾಗಿ ವರ್ಗಾವಣೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಸಮರ್ಪಕವಾಗಿ ದಾಖಲೆಗಳನ್ನು ವರ್ಗಾಯಿಸದಿರುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಈಗಾಗಲೇ ಸ್ಥಳಾಂತರಗೊಂಡಿರುವ ಕಂದಾಯ ಗ್ರಾಮಗಳಲ್ಲಿ ಭೂ ಮಂಜೂರಾತಿಯಾಗಿ ಅನುಭವದಲ್ಲಿರುವ ರೈತರಿಗೆ ಪೋಡಿ ದುರಸ್ಥೀಕರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಬಿದರಹಳ್ಳಿ ಹೋಬಳಿಯ ಎಷ್ಟು ಗ್ರಾಮಗಳು ದುರಸ್ತಿ (ಪೋಡಿ) ಮುಕ್ತ ಗ್ರಾಮಗಳಾಗಿವೆ ? (ಗ್ರಾಮವಾರು, ಸರ್ವೇ ನಂಬರ್‌ವಾರು, ವಿಸ್ತೀರ್ಣವಾರು, ಹೆಸರುಗಳ ಸಂಪೂರ್ಣ ಮಾಹಿತಿ ನೀಡುವುದು)

## ಬಾಗಲಕೋಟೆ ಜಿಲ್ಲೆಯ ವಿವಿಧ ಧಾರ್ಮಿಕ ಮತಗಳ ಜೀರ್ಣೋದ್ಧಾರದ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೫೭೪ (೬೫೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೦೧ ವರ್ಷದಿಂದ ಬಾಗಲಕೋಟೆ ಜಿಲ್ಲೆಯ ಮಠ/ದೇವಸ್ಥಾನ/ ವಿವಿಧ ಧಾರ್ಮಿಕ ಕೇಂದ್ರಗಳ ಜೀರ್ಣೋದ್ಧಾರಕ್ಕೆ ಮಂಜೂರು ಮಾಡಿದ ಒಟ್ಟು ಮೊತ್ತ ಎಷ್ಟು ; (ಕ್ಷೇತ್ರವಾರು ಮಾಹಿತಿ ಒದಗಿಸುವುದು)

(ಆ) ಹಿಂದಿನ ಸರ್ಕಾರದ ಅವಧಿಯಲ್ಲಿ ಮಂಜೂರು ಮಾಡಿದ ಕಾಮಗಾರಿಗಳನ್ನು ಪ್ರಸ್ತುತ ಸರ್ಕಾರ ಬಂದ ಮೇಲೆ ಕಾಮಗಾರಿಗಳನ್ನು ಬದಲಾಯಿಸಲಾಗಿದೆಯೇ ; ಹಾಗಿದ್ದಲ್ಲಿ, ಬದಲಾಯಿಸಿದ ಕಾಮಗಾರಿಗಳ ವಿವರವಾದ/ಕ್ಷೇತ್ರವಾರು ಮಾಹಿತಿ ಒದಗಿಸುವುದು ;

(ಇ) ಪೂರ್ಣಗೊಂಡ ಕಾಮಗಾರಿಗಳ ಅಂತಿಮ ಬಿಲ್‌ನ್ನು ಸಂಬಂಧಪಟ್ಟ ಇಲಾಖೆಗೆ ಸಲ್ಲಿಸಿದ್ದರೂ ಇಲ್ಲಿಯವರೆಗೆ ಹಣ ಬಿಡುಗಡೆಯಾಗದೆ ಇರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ; ಯಾವ ಕಾಲಮಿತಿಯೊಳಗೆ ಹಣ ಬಿಡುಗಡೆ ಮಾಡಲಾಗುವುದು ?

**ಬಸವ ವಸತಿ ಹಾಗೂ ಡಾ॥ ಬಿ.ಆರ್. ಅಂಬೇಡ್ಕರ್ ಯೋಜನೆಯಡಿಯ ಮನೆಗಳ ನಿರ್ಮಾಣದ ಕುರಿತು**

**ಶ್ರೀ ಪಿ.ಹೆಚ್. ಪೂಜಾರ್( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೭೫ (೬೯) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರದಿಂದ ಗ್ರಾಮೀಣ ಭಾಗದಲ್ಲಿನ ಬಸವ ವಸತಿ ಯೋಜನೆಯಡಿ ೨೦೧೦-೧೧ ರಿಂದ ಇಲ್ಲಿಯವರೆಗೆ ಹಾಗೂ ಡಾ: ಬಿ.ಆರ್. ಅಂಬೇಡ್ಕರ್ ನಿವಾಸ ಯೋಜನೆಯಡಿ ೨೦೧೫-೧೬ ರಿಂದ ಇಲ್ಲಿಯವರೆಗೆ ಗುರಿಗೆ ಅನುಗುಣವಾಗಿ ಅರ್ಹ ಫಲಾನುಭವಿಗಳು ಮನೆಗಳನ್ನು ನಿರ್ಮಿಸಿಕೊಳ್ಳುತ್ತಿದ್ದು, ವಿಜಯಪುರ-ಬಾಗಲಕೋಟೆ ಜಿಲ್ಲೆಯಲ್ಲಿ ತಾಲ್ಲೂಕುವಾರು ಗುರಿಗೆ ಅನುಗುಣವಾಗಿ ಆಯ್ಕೆಗೊಂಡ ಅರ್ಹ ಫಲಾನುಭವಿಗಳ ಸಂಖ್ಯೆ ಎಷ್ಟು ; ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುವ ಮನೆಗಳ ಸಂಖ್ಯೆ ಎಷ್ಟು; ಬಿಡುಗಡೆಗೆ ಬಾಕಿ ಇರುವ ಅನುದಾನ ಎಷ್ಟು ; (ವಿವರವನ್ನು ಒದಗಿಸುವುದು)

(ಆ) ಸದರಿ ಯೋಜನೆಯಲ್ಲಿ ಅರ್ಹ ಫಲಾನುಭವಿಗಳಿಗೆ ವಿವಿಧ ಹಂತಗಳಲ್ಲಿ ಮನೆ ನಿರ್ಮಾಣಗೊಂಡರೂ ನಿಗಧಿತ ಅವಧಿಯಲ್ಲಿ ಸಹಾಯಧನ ಬಿಡುಗಡೆಯಾಗದೇ ಫಲಾನುಭವಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ೨೦೨೧-೨೨ನೇ ಸಾಲಿನ ವಸತಿ ಯೋಜನೆಗಳಲ್ಲಿ ಗ್ರಾಮೀಣ ಭಾಗದಲ್ಲಿ ಆಯ್ಕೆಗೊಂಡ ಅರ್ಹ ಫಲಾನುಭವಿಗಳು ವಿವಿಧ ಕಾರಣಗಳಿಂದ ನಿಗಧಿತ ಅವಧಿಯಲ್ಲಿ ಮನೆಗಳನ್ನು ಪ್ರಾರಂಭಿಸದೇ ಇರುವುದರಿಂದ RGRHCL ಬ್ಲಾಕ್ ಮಾಡಿದ್ದು, ಅಂತಹ ಫಲಾನುಭವಿಗಳ ಮನೆಗಳ ನಿರ್ಮಾಣಕ್ಕೆ ಸರ್ಕಾರವು ಕಾಲಾವಕಾಶ ನೀಡಲು ಕ್ರಮ ಕೈಗೊಳ್ಳುವುದೇ ? (ಮಾಹಿತಿ ನೀಡುವುದು)

## ಬೆಳ್ತಂಗಡಿ ತಾಲ್ಲೂಕು ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಜಮೀನು ಮಂಜೂರು ಮಾಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೬ (೬೩೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು ಲಾಯಿಲ ಗ್ರಾಮದ ಸರ್ವೆ ನಂಬರ್ ೧೩೧/೩ರಲ್ಲಿ ೦.೨೦ ಎಕರೆ (ಇಪ್ಪತ್ತು ಸೆಂಟ್) ಸರ್ಕಾರಿ ಜಮೀನನ್ನು ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡುವ ಪ್ರಸ್ತಾವನೆಯನ್ನು "ಗೋಮಾಳ ಜಮೀನುಗಳನ್ನು ಖಾಸಗಿ ಸಂಘ ಸಂಸ್ಥೆಗಳಿಗೆ ಮಂಜೂರು ಮಾಡಲು ನಿಯಮಗಳಲ್ಲಿ ಅವಕಾವಿರುವುದಿಲ್ಲ" ಎಂದು ತಪ್ಪಾದ ಕಾರಣ ನೀಡಿ ತಿರಸ್ಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಗೋಮಾಳ ಜಮೀನು ಎಂದು ಸರಿಯಲ್ಲದ ಕಾರಣ ನೀಡಿ ತಿರಸ್ಕರಿಸಿರುವ ಸದರಿ ಪ್ರಸ್ತಾವನೆಯನ್ನು ಮತ್ತೊಮ್ಮೆ ಪರಿಶೀಲಿಸಿ ಕೂಡಲೇ ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಲಾಯಿಲ ಗ್ರಾಮದ ಸರ್ವೆ ನಂಬರ್: ೧೩೧/೩ ರಲ್ಲಿ ೦.೨೦ ಎಕರೆ (ಇಪ್ಪತ್ತು ಸೆಂಟ್) ಸದರಿ ಸರ್ಕಾರಿ ಜಮೀನನ್ನು ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡಲು ಪುನರ್ ಪರಿಶೀಲಿಸಲು ಸರ್ಕಾರ ಅಗತ್ಯ ಕ್ರಮ ವಹಿಸುವುದೇ ;

(ಇ) ಯಾವ ಕಾಲಮಿತಿಯೊಳಗೆ ಸದರಿ ಜಮೀನನ್ನು ಲಾಯಿಲ, ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡಲಾಗುವುದು ?

## ರಾಜ್ಯದ ಸಾರಿಗೆ ಸಂಸ್ಥೆಗಳ ಆರ್ಥಿಕ ಸ್ಥಿತಿ ಶೋಚನೀಯವಾಗಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೭ (೬೩೯) ಮಾನ್ಯ ಸಾರಿಗೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಾರಿಗೆ ಸಂಸ್ಥೆಗಳ ಆರ್ಥಿಕ ಸ್ಥಿತಿ ಸಂಪೂರ್ಣವಾಗಿ ಶೋಚನೀಯವಾಗಿದ್ದು, ಸಂಸ್ಥೆಗಳ "ಬಾಕಿ ಹೊರೆ" ಸತತವಾಗಿ ಹೆಚ್ಚುತ್ತಲೇ ಇದ್ದು, ಲಾಭಾದ ಹಳಿಗೆ ಶಾಶ್ವತವಾಗಿ ಮರಳಿ ಬಾರದ ಪರಿಸ್ಥಿತಿಗೆ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರಸ್ತುತ, ಸಾರಿಗೆ ಸಂಸ್ಥೆಗಳು ಪಾವತಿಸಲು ಉಳಿಸಿಕೊಂಡಿರುವ ವಿವಿಧ ರೀತಿಯ ಬಾಕಿ ವಿವರಗಳೇನು ; ಒಟ್ಟು ಮೊತ್ತವೆಷ್ಟು ;

(ಇ) ಪ್ರಸ್ತುತ ಸಂಸ್ಥೆಗಳು ಪಾವತಿಸಲು ಉಳಿಸಿಕೊಂಡಿರುವ ವಿವಿಧ ರೀತಿಯ ಬಾಕಿ ಮೊತ್ತವನ್ನು ಪಾವತಿಸಲು ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ ;

(ಈ) ನಿವೃತ ನೌಕರರು ಮತ್ತು ಹಾಲಿ ನೌಕರರಿಗೆ ಪಾವತಿಸಬೇಕಾಗಿರುವ ಬಾಕಿ ಮೊತ್ತವೆಷ್ಟು ಮತ್ತು ಸದರಿ ಬಾಕಿ ಮೊತ್ತವನ್ನು ಯಾವ ಕಾಲಮಿತಿಂಯೊಳಗೆ ನೌಕರರಿಗೆ ಸಂಪೂರ್ಣವಾಗಿ ಪಾವತಿಸಲಾಗುವುದು ;

(ಉ) ಯಾವ ಕಾಲಮಿತಿಯೊಳಗೆ ಸಾರಿಗೆ ಸಂಸ್ಥೆಗಳ ಬಾಕಿಗಳ ಹೊರೆಯನ್ನು ಸಂಪೂರ್ಣವಾಗಿ ನಿವಾರಿಸಿ ಅವುಗಳನ್ನು ಲಾಭದಾಯಕವಾಗಿ ಹಳಿಗೆ ತರಲಾಗುವುದು ?

## ಋಣಭಾರ ಪ್ರಮಾಣ ಪತ್ರ (ಇ.ಸಿ) ಸಕಾಲದಲ್ಲಿ ಮತ್ತು ತ್ವರಿತವಾಗಿ ಸಿಗದಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೮ (೬೪೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಸ್ತಿ ನೋಂದಣಿ ಮಾಡಲು ಕಂದಾಯ ಇಲಾಖೆಯು ನೀಡುವ ಋಣಭಾರ ಪ್ರಮಾಣ ಪತ್ರ (ಇ.ಸಿ) ಸಕಾಲದಲ್ಲಿ ಹಾಗೂ ತ್ವರಿತವಾಗಿ ಸಿಗದೆ ಸಾರ್ವಜನಿಕರು ತಮ್ಮ ನೋಂದಣಿ ವ್ಯವಹಾರಗಳನ್ನು ಮಾಡಲು ಸಾಕಷ್ಟು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಹಿಂದೆ ಕೇವಲ ಮೂರು ದಿನಗಳಲ್ಲಿ ಸಿಗುತ್ತಿದ್ದ ಋಣಭಾರ ಪ್ರಮಾಣ ಪತ್ರ (ಇ.ಸಿ) ಈಗ ೧೫ ದಿನಗಳಾದರೂ ಸಿಗುತ್ತಿಲ್ಲದಿರುವ ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಇದುವರೆಗೆ ಯಾವೆಲ್ಲಾ ಕ್ರಮಗಳನ್ನು ಕೈಗೊಂಡಿದೆ ;

(ಇ) ಯಾವ ಕಾಲಮಿತಿಯೊಳಗೆ ಈ ಸಮಸ್ಯೆಯನ್ನು ಪೂರ್ಣವಾಗಿ ಪರಿಹರಿಸಿ, ಸಾರ್ವಜನಿಕರು ನೋಂದಣಿ ವ್ಯವಹಾರಗಳನ್ನು ಯಾವುದೇ ಸಮಸ್ಯೆ ಮತ್ತು ವಿಳಂಬವಿಲ್ಲದೆ ಮಾಡುವಂತಾಗಲು ಕ್ರಮ ವಹಿಸಲಾಗುವುದು ?

### "ಪಶು ಸಂಜೀವಿನಿ ಯೋಜನೆ" ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೯ (೬೪೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪಶುಗಳ ತುರ್ತು ಚಿಕಿತ್ಸೆಗೆ ನೆರವಾಗಲು 'ಪಶು ಸಂಜೀವಿನಿ' ಯೋಜನೆ ರೂಪಿಸಿ ಲೋಕಾರ್ಪಣೆಗೊಳಿಸಲಾಗಿದೆಯೇ ;

(ಆ) ಸದರಿ ಯೋಜನೆಯ ಅನುಷ್ಠಾನಕ್ಕಾಗಿ ಎಷ್ಟು ಆಂಬುಲೆನ್ಸ್‌ಗಳನ್ನು ನಿಯೋಜಿಸಲಾಗಿದೆ ;

(ಇ) ಪ್ರತಿ ಆಂಬುಲೆನ್ಸ್ ಗೆ ನಿಯೋಜಿಸಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಇದುವರೆವಿಗೂ ಸದರಿ ಯೋಜನೆಯ ಮೂಲಕ ಎಷ್ಟು ಜಾನುವಾರುಗಳಿಗೆ ತುರ್ತು ಸೇವೆಯನ್ನು ಒದಗಿಸಲಾಗಿದೆ ? (ವಿವರ ನೀಡುವುದು)

### ಕಡಬ ತಾಲ್ಲೂಕಿನ ಕೊಯ್ಲಾದಲ್ಲಿನ ಪಶುಸಂಗೋಪನೆ ಶಾಲೆಯ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೦ (೬೪೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕಿನ ಕೊಯ್ಲಾದಲ್ಲಿನ ಪಶುಸಂಗೋಪನಾ ಕಾಲೇಜಿನಲ್ಲಿ ಶೈಕ್ಷಣಿಕ ಚಟುವಟಿಕೆಗಳು ಪ್ರಾರಂಭಗೊಂಡಿವೆಯೇ ;

(ಆ) ಪ್ರಾರಂಭಗೊಂಡಿದ್ದಲ್ಲಿ, ಸದರಿ ಕಾಲೇಜಿಗೆ ಬೇಕಾಗಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಪೂರ್ಣ ಮಟ್ಟದಲ್ಲಿ ಒದಗಿಸಲಾಗಿದೆಯೇ ;

(ಇ) ಒದಗಿಸದಿದ್ದಲ್ಲಿ, ಇನ್ನೂ ಒದಗಿಸಲು ಬಾಕಿ ಉಳಿದಿರುವ ಮೂಲಭೂತ ಸೌಕರ್ಯಗಳಿಗೆ ಬೇಕಾಗಿರುವ ಅನುದಾನವೆಷ್ಟು ; ಉಳಿದಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದೇ ;

(ಈ) ಯಾವ ಕಾಲಮಿತಿಯೊಳಗೆ ಬಾಕಿ ಉಳಿದಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು ?

## ರಾಜ್ಯಾದ್ಯಾಂತ ಇ–ಖಾತಾ ಕಡ್ಡಾಯಗೊಳಿಸಿದ ಕಾರಣ ತೊಂದರೆ ಆಗಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೧ (೬೭೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಾಂತ ನಗರ, ಪಟ್ಟಣ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಆಸ್ತಿಗಳಿಗೆ ಇ–ಖಾತಾ ವಿತರಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ ; ಈವರೆಗೆ ಸಾಧಿಸಿರುವ ಪ್ರಗತಿ ಎಷ್ಟು ; ಇ–ಖಾತಾ ವಿತರಣೆಯಿಂದ ಜನ ಸಾಮಾನ್ಯರಿಗೆ ಆಗುವ ಪ್ರಯೋಜನವೇನು ;

(ಆ) ಇ–ಖಾತಾ ಜಾರಿಯಿಂದ ಆಗುವ ಸಾಧಕ–ಭಾಧಕಗಳ ಅಧ್ಯಯನ ನಡೆದಿದೆಯೇ ; ಇ–ಖಾತಾ ಜಾರಿಗೆ ಸರ್ಕಾರ ಮಾಡಿಕೊಂಡಿರುವ ಸಿದ್ಧತೆಗಳೇನು ; ಈ ವ್ಯವಸ್ಥೆಯಡಿ ಸಮಸ್ಯೆಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಸರ್ವರ್ ಡೌನ್, ಇ–ಖಾತಾ ಕಡ್ಡಾಯಗೊಳಿಸಿದ ಕಾರಣ, ಆಸ್ತಿ ಮಾಲೀಕರಿಗೆ ತೊಂದರೆಯುಂಟಾಗಿ ಆಸ್ತಿ ನೋಂದಣಿ ವಹಿವಾಟು ಕುಸಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಹಿವಾಟು ಕುಸಿತದಿಂದ ಆಗಿರುವ ನಷ್ಟ ಎಷ್ಟು ;

(ಈ) ಗ್ರಾಮೀಣ ಪ್ರದೇಶಗಳಲ್ಲಿರುವ ಶೇ.೯೦ ರಷ್ಟು ಆಸ್ತಿಗಳಿಗೆ ಕಂದಾಯ ಇಲಾಖೆಯ ನಿಯಮಗಳಡಿ ಇ–ಖಾತಾ ದೊರೆಯದ ಕಾರಣ ಅವರೆಲ್ಲರು ಆತಂಕಕ್ಕೆ ಒಳಗಾಗಿದ್ದು, ಇವರ ಆತಂಕ ನಿವಾರಣೆಗೆ ಸರ್ಕಾರ ಕ್ರಮ ಕೈಗೊಂಡಿದೆಯೇ ; ಇ–ಖಾತಾ ಜಾರಿಯಲ್ಲಿರುವ ಸಮಸ್ಯೆಗಳಿಗೆ ಸರ್ಕಾರ ಕಂಡುಕೊಂಡಿರುವ ಪರಿಹಾರಗಳೇನು ?

## ಮಳೆಯಿಂದಾಗಿ ಹಾನಿಗೀಡಾದ ಮನೆಗಳಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೨ (೬೭೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷದಿಂದ ಮಳೆಯಿಂದಾಗಿ ಹಾನಿಗೀಡಾದ ಮನೆಗಳ ಸಂಖ್ಯೆ ಎಷ್ಟು ; ಈ ಪೈಕಿ ಸಂಪೂರ್ಣ ಹಾನಿಗೀಡಾದ ಮತ್ತು ಭಾಗಶಃ ಹಾನಿಗೀಡಾದ ಮನೆಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅತಿವೃಷ್ಟಿಯಿಂದ ಹಾನಿಗೊಳಗಾದ ಮನೆಗಳಿಗೆ ಎಷ್ಟು ಪರಿಹಾರ ನೀಡಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಸಂಪೂರ್ಣ ಹಾನಿಗೀಡಾದ ಮನೆಗಳನ್ನು ಪುನರ್ ನಿರ್ಮಾಣ ಮಾಡಲು ಹೊಸದಾಗಿ ಮನೆಗಳನ್ನು ಮಂಜೂರು ಮಾಡಲಾಗಿದೆಯೇ ; ಮಂಜೂರು ಮಾಡಲಾಗಿದ್ದರೆ, ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಈ) ಹಿಂದಿನ ವರ್ಷಗಳಲ್ಲಿ ಅತಿವೃಷ್ಟಿಯಿಂದ ಹಾನಿಗೀಡಾಗಿದ್ದ ಮನೆಗಳನ್ನು ಪುನರ್ ನಿರ್ಮಾಣ ಮಾಡಿಕೊಂಡ ಮನೆಗಳ ಫೋಟೊಗಳನ್ನು ಜಿ.ಪಿ.ಎಸ್ ಮಾಡಿ ನಿಗಮದ ವೆಬ್ ಸೈಟ್‌ನಲ್ಲಿ ಅಳವಡಿಸಿದ್ದರೂ ಸಹ ಅನುದಾನ ಬಿಡುಗಡೆಯಾಗದೆ ಫಲಾನುಭವಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಎಷ್ಟು ಫಲಾನುಭವಿಗಳಿಗೆ ಹಣ ಬಿಡುಗಡೆ ಆಗಿಲ್ಲ ; (ಜಿಲ್ಲಾವಾರು ವಿವರ ನೀಡುವುದು)

(ಉ) ಈ ಫಲಾನುಭವಿಗಳ ಖಾತೆಗೆ ಹಣ ಬಿಡುಗಡೆಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ; ಯಾವ ಕಾಲಮಿತಿಯೊಳಗೆ ಹಣ ಬಿಡುಗಡೆ ಮಾಡಲಾಗುವುದು ? (ವಿವರ ಒದಗಿಸುವುದು)

## ಚಿಕ್ಕಮಗಳೂರು ಜಿಲ್ಲೆಗೆ ಮಂಜೂರು ಮಾಡಿರುವ ಅನುದಾನ ಬಿಡುಗಡೆ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೩ (೬೭೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷದಿಂದ ಚಿಕ್ಕಮಗಳೂರು ಜಿಲ್ಲೆಗೆ ಮುಜರಾಯಿ ಇಲಾಖೆಯಿಂದ ಎಷ್ಟು ಅನುದಾನ ಒದಗಿಸಲಾಗಿದೆ ;

(ಆ) ಯಾವ ಯಾವ ದೇವಾಲಯಗಳ ನಿರ್ಮಾಣ/ಜೀರ್ಣೋದ್ಧಾರ ಕಾಮಗಾರಿಗಳಿಗಾಗಿ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಜೂರಾದ ಅನುದಾನದಲ್ಲಿ ಬಿಡುಗಡೆಯಾಗಿರುವ, ವೆಚ್ಚವಾಗಿರುವ ಮತ್ತು ಉಳಿದಿರುವ ಅನುದಾನ ಎಷ್ಟು; (ವರ್ಷವಾರು ವಿವರ ನೀಡುವುದು)

(ಈ) ಅನುದಾನ ಬಿಡುಗಡೆಗೆ ಬಾಕಿ ಇರಲು ಕಾರಣಗಳೇನು ; ಬಾಕಿ ಇರುವ ಅನುದಾನವನ್ನು ಯಾವಾಗ ಬಿಡುಗಡೆಗೊಳಿಸಲಾಗುವುದು ?

## ಬಾಕಿ ಇರುವ ಹಾಲಿನ ಪ್ರೋತ್ಸಾಹ ಧನ ಬಿಡುಗಡೆ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫ಲ೪ (೬೮೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಾಲು ಉತ್ಪಾದಕರಿಗೆ ಪ್ರತಿ ಲೀಟರ್‌ಗೆ ನೀಡುತ್ತಿರುವ ಪ್ರೋತ್ಸಾಹ ಧನ ಎಷ್ಟು ; ಕಳೆದ ಎರಡು ವರ್ಷದಿಂದ ಎಷ್ಟು ಫಲಾನುಭವಿಗಳಿಗೆ ಎಷ್ಟು ಪ್ರೋತ್ಸಾಹ ಧನ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಹಾಲು ಉತ್ಪಾದಕರ ಫಲಾನುಭವಿಗಳಿಗೆ ಪ್ರೋತ್ಸಾಹ ಧನ ನೀಡಲು ಬಾಕಿ ಇರುವ ಮೊತ್ತ ಎಷ್ಟು ; (ಜಿಲ್ಲಾವಾರು ಫಲಾನುಭವಿಗಳ ವಿವರ ನೀಡುವುದು)

(ಇ) ಪ್ರತಿ ತಿಂಗಳೂ ಪ್ರೋತ್ಸಾಹ ಧನ ಪಾವತಿ ಮಾಡಲು ಸರ್ಕಾರಕ್ಕೆ ಇರುವ ತೊಡಕುಗಳೇನು ; ಪ್ರೋತ್ಸಾಹ ಧನ ಪಾವತಿ ಮಾಡದ ಕಾರಣ ರೈತರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದರೆ, ರೈತರಿಗೆ ಬಾಕಿ ಇರುವ ಪ್ರೋತ್ಸಾಹ ಧನವನ್ನು ಯಾವ ಕಾಲಮಿತಿಯೊಳಗೆ ಪಾವತಿ ಮಾಡಲಾಗುವುದು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರೇಷ್ಮೆ ಬೆಳೆಗೆ ವಿಮಾ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೮೫ (೬೧೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನುಸಿ ಮತ್ತು ಕೀಟಗಳ ಹಾವಳಿಯಿಂದ ಹಿಪ್ಪು ನೇರಳೆ ಸೊಪ್ಪಿನ ಗುಣಮಟ್ಟ ಹಾಳಾಗುತ್ತಿರುವುದು ಮತ್ತು ಕಳಪೆ ಹಾಗೂ ರೋಗ ಪೀಡಿತ ಮೊಟ್ಟೆಗಳ ಚಾಕಿಯಿಂದ ರೇಷ್ಮೆ ಹುಳಗಳು ರೋಗಕ್ಕೆ ತುತ್ತಾಗಿ ರೇಷ್ಮೆ ಬೆಳೆಗಾರರು ಸಂಕಷ್ಟಕ್ಕೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇತರೆ ಬೆಳೆಗಳಂತೆ ರೇಷ್ಮೆ ಬೆಳೆಗೂ ವಿಮಾ ಸೌಲಭ್ಯವನ್ನು ವಿಸ್ತರಿಸಲು ಸರ್ಕಾರ ಕ್ರಮ ವಹಿಸಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಗ್ರಾಮ ನಕ್ಷೆಗಳಲ್ಲಿ ಗುರುತಿಸಿರುವ ನೈಸರ್ಗಿಕ ನೀರಿನ ಮೂಲಗಳನ್ನು ವರ್ಗೀಕರಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೬ (೬೧೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ನಕ್ಷೆಗಳ ಪ್ರಕಾರ ಯಾವುದೇ ಜಮೀನು/ಸರ್ವೇ ನಂಬರ್‌ಗಳಲ್ಲಿರುವ ವಿವಿಧ ಬಗೆಯ ನೈಸರ್ಗಿಕ ನೀರಿನ ಮೂಲಗಳನ್ನು (ನದಿ, ತೊರೆ, ರಾಜಕಾಲುವೆ, ನಾಲೆ, ಹಳ್ಳ, ಕೊರಕಲು ಇತ್ಯಾದಿಗಳನ್ನು) ಎಷ್ಟು ರೀತಿಯಲ್ಲಿ ವರ್ಗೀಕರಿಸಲಾಗಿದೆ; ಈ ರೀತಿ ವರ್ಗೀಕರಿಸಲಾದ ನೀರಿನ ಮೂಲಗಳ ಅಗಲ ಮತ್ತು ಆಳಗಳನ್ನು ಎಷ್ಟು ಅಡಿ/ಮೀಟರ್‌ಗಳಿಗೆ ನಿಗಧಿಪಡಿಸಲಾಗಿದೆ ;

(ಆ) ಈ ನೀರಿನ ಮೂಲಗಳ ಅಕ್ಕಪಕ್ಕದ (ಬಫರ್ ವಲಯ) ಎಷ್ಟು ವಿಸ್ತೀರ್ಣದಲ್ಲಿ ಯಾವ ಯಾವ ಚಟುವಟಿಕೆಗಳನ್ನು (ನಿವೇಶನ ನಿರ್ಮಾಣ, ಕಟ್ಟಡ ನಿರ್ಮಾಣ, ಕೈಗಾರಿಕೆ, ವಾಣಿಜ್ಯ, ಕೃಷಿ ಇತ್ಯಾದಿ) ನಿರ್ಭಂದಿಸಲಾಗಿದೆ ; (ಆದೇಶಗಳ ಸಹಿತ ಮಾಹಿತಿ ನೀಡುವುದು)

(ಇ) ಜಮೀನು/ಸರ್ವೇ ನಂಬರ್‌ನಲ್ಲಿರುವ ವಿವಿಧ ಬಗೆಯ ನೈಸರ್ಗಿಕ ನೀರಿನ ಮೂಲಗಳನ್ನು ಜಮೀನಿನ ಮಾಲೀಕರು ಮತ್ತು ಅನುಭವದಾರರು ಯಾವ ಯಾವ ಉದ್ದೇಶಗಳಿಗೆ ಬಳಸಿಕೊಳ್ಳಬಹುದು ; ಯಾವ ಉದ್ದೇಶಗಳಿಗೆ ಬಳಸಿಕೊಳ್ಳಬಾರದು ? (ವಿವರ ನೀಡುವುದು)

## ಅವಸಾನದ ಅಂಚಿಗೆ ತಲುಪಿರುವ ಮುಜರಾಯಿ ದೇವಸ್ಥಾನಗಳ ರಕ್ಷಣೆ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೮೭ (೬೧೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಮುಜರಾಯಿ ಇಲಾಖೆ ವ್ಯಾಪ್ತಿಗೆ ಒಳಪಡುವ ಹಲವಾರು ಐತಿಹಾಸಿಕ ದೇವಸ್ಥಾನಗಳ ಗೋಡೆಗಳು ಬಿರುಕು ಬಿಟ್ಟಿರುವುದು, ಶಿಲ್ಪಗಳು ವಿಕೃತಿಗೊಂಡಿರುವುದು, ರಕ್ಷಣೆ ಇಲ್ಲದೇ ಸೊರಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇಂತಹ ಎಷ್ಟು ದೇವಸ್ಥಾನಗಳನ್ನು ಗುರುತಿಸಲಾಗಿದೆ ಮತ್ತು ಅವು ಯಾವುವು ; ಪುನರುಜ್ಜೀವನಗೊಳ್ಳದೇ ಅವಸಾನದ ಅಂಚಿಗೆ ತಲುಪಿರುವ ದೇವಸ್ಥಾನಗಳು ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ಮಾಂಸ ಮಾರಾಟ ಮಳಿಗೆಗೆ ಅನುಮತಿ ನೀಡುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೮ (೬೨೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನೆ ಇಲಾಖಾ ವತಿಯಿಂದ ಮಾಂಸ ಮಾರಾಟ ಮಳಿಗೆಗಳಿಗೆ ಅನುಮತಿ ನೀಡುವಾಗ ಯಾವ ರೀತಿಯ ನಿಬಂಧನೆಗಳನ್ನು ಹಾಕಲಾಗುತ್ತದೆ ; (ವಿವರ ನೀಡುವುದು)

(ಆ) ಮಾಂಸ ಮಾರಾಟ ಮಾಡುವ ವ್ಯಾಪಾರಸ್ಥರು ಯಾವ ಯಾವ ಪ್ರಮಾಣ ಪತ್ರಗಳನ್ನು ಹೊಂದಿರಬೇಕಾಗುತ್ತದೆ ; ಮಾಂಸ ಮಾರಾಟ ಮಾಡುವ ಅಂಗಡಿಗಳು ಹಲಾಲ್ ಪ್ರಮಾಣ ಪತ್ರವನ್ನು ಹೊಂದಿರುವುದು ಕಡ್ಡಾಯವೇ; ಈ ಕುರಿತು ಸರ್ಕಾರದ ನಿಲುವೇನು ;

(ಇ) ಸರ್ಕಾರವು ಮಾಂಸ ಮಾರಾಟ ಮಾಡುವ ಅಂಗಡಿಗಳಿಗೆ ಹಲಾಲ್ ಪ್ರಮಾಣ ಪತ್ರ ನೀಡುತ್ತಿದೆಯೇ ; ಇಲ್ಲವಾದಲ್ಲಿ, ಈ ಪ್ರಮಾಣ ಪತ್ರವನ್ನು ಯಾರು ನೀಡುತ್ತಾರೆ ; ಈ ಪ್ರಮಾಣ ಪತ್ರವನ್ನು

ನೀಡಲು ಸರ್ಕಾರವು ಯಾವ ಸಂಸ್ಥೆಗೆ ಅನುಮತಿ ನೀಡಿದೆ; ಇದಕ್ಕಾಗಿ ಸರ್ಕಾರವು ಪಡೆಯುವ ಶುಲ್ಕ ಎಷ್ಟು ;

(ಈ) ನಿಯಮ ಬಾಹಿರವಾಗಿ ಅನಧಿಕೃತವಾಗಿ ಹಲಾಲ್ ಪ್ರಮಾಣ ಪತ್ರವನ್ನು ಪಡೆದು ಪ್ರದರ್ಶಿಸುತ್ತಾರೆ ಎಂದಾದಲ್ಲಿ ಹಾಗೂ ಈ ಪ್ರಮಾಣ ಪತ್ರಕ್ಕೆ ಸರ್ಕಾರದ ಯಾವುದೇ ಮಾನ್ಯತೆ ಇಲ್ಲವೆಂದಾದಲ್ಲಿ ಇದರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ನೋಂದಣಿ ಅಧಿಕಾರಿಗಳ ಮಾಹಿತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೯ (೬೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೫, ಜನವರಿ ೯ರ ಬಳಿಕ ಬೆಂಗಳೂರು ನಗರ ಜಿಲ್ಲೆಯ 'ನೀಲಸಂದ್ರ ಗ್ರಾಮದ ಸರ್ವೆ ನಂ-೭೯ರಲ್ಲಿ ೧೫ ಎಕರೆ ೧೨ ಗುಂಟೆ ಜಮೀನಿಗೆ ಸಂಬಂಧಿಸಿದಂತೆ ಉಪ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಎಷ್ಟು ಮಾರಾಟ ಮತ್ತು ಖರೀದಿ ಪ್ರಕ್ರಿಯೆಗಳು ದಾಖಲಾಗಿವೆ ; (ನೋಂದಾಯಿತ ಮಾರಾಟ ಹಾಗೂ ಖರೀದಿ ಮಾಡಿದವರ ವಿವರದೊಂದಿಗೆ ನೋಂದಣಿ ದಿನಾಂಕ: ಸಹಿತವಾಗಿ ಮಾಹಿತಿ ನೀಡುವುದು)

(ಆ) ೨೦೧೫, ಜನವರಿ ೯ರ ಬಳಿಕ ಬೆಂಗಳೂರು ನಗರ ಜಿಲ್ಲೆಯ 'ನೀಲಸಂದ್ರ ಗ್ರಾಮದ ಸರ್ವೇ ನಂ-೭೯ರಲ್ಲಿ ೧೫ ಎಕರೆ ೧೨ ಗುಂಟೆ ಜಮೀನಿಗೆ ಸಂಬಂಧಿಸಿದಂತೆ ಉಪ ನೋಂದಣಾಧಿಕಾರಿಗಳ ಕಚೇರಿಯಲ್ಲಿ ಮಾರಾಟ ಮತ್ತು ಖರೀದಿ

ನೋಂದಣಿ ಪ್ರಕ್ರಿಯೆಗಳು ನಡೆಯುತ್ತಿರುವ ಸಮಯದಲ್ಲಿ ಸದರಿ ಕಚೇರಿಗಳಲ್ಲಿ ಉಪ ನೋಂದಣಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿದ ಅಧಿಕಾರಿಗಳು ಯಾರು ? (ಹೆಸರಿನೊಂದಿಗೆ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳದ ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೦ (೬೧೯) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಲ್ಪ ಸಂಖ್ಯಾತರೆಂದರೆ ಯಾರು; ಯಾವ ಆಧಾರದಲ್ಲಿ ಅವರನ್ನು ಅಲ್ಪಸಂಖ್ಯಾತರು ಎಂದು ಪರಿಗಣಿಸಲಾಗಿದೆ ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಅಲ್ಪಸಂಖ್ಯಾತರನ್ನು ಯಾವ ಬಹುಸಂಖ್ಯಾತರ ಪರಿಗಣನೆಗೆ ತೆಗೆದುಕೊಂಡು ಅಲ್ಪಸಂಖ್ಯಾತರು ಎಂಬುದಾಗಿ ಗುರುತಿಸಿದೆ ; (ವಿವರ ನೀಡುವುದು)

(ಇ) ಅಲ್ಪಸಂಖ್ಯಾತರಿಗೂ ಬಹುಸಂಖ್ಯಾತರಿಗೂ ಇರುವ ವ್ಯತ್ಯಾಸಗಳೇನು ? (ವಿವರ ನೀಡುವುದು)

## ಪ್ರಾರ್ಥನೆಗೆ ಗುರುತಿಸಲಾದ ಸರ್ಕಾರಿ ಸ್ಥಳಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೧ (೬೨೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರಕಾರಿ ಸ್ಥಳಗಳಲ್ಲಿ ಮುಸ್ಲಿಂಮರಿಗೆ ಪ್ರಾರ್ಥನೆಗೆಂದು ಗುರುತಿಸಲಾದ ಸ್ಥಳಗಳ ಸಂಖ್ಯೆ ಎಷ್ಟು; ಅವು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮುಸ್ಲಿಂಮರಿಗೆ ಪ್ರಾರ್ಥನೆಗೆ ಅವಕಾಶ ಕಲ್ಪಿಸಿದ ಸರಕಾರಿ ಜಾಗವನ್ನು ಉಪಯೋಗಿಸಿದ್ದ ಕಾರಣಕ್ಕೆ. ಬಾಡಿಗೆಯುನ್ನು ನಿಗಧಿ ಪಡೆಸಲಾಗಿದೆಯೇ; ಇಲ್ಲವಾದಲ್ಲಿ ಕಾರಣವೇನು ; ಹಾಗಿದ್ದಲ್ಲಿ ಬಾಡಿಗೆ ದರವನ್ನು ನಿಗಧಿ ಪಡೆಸಲಾಗುವುದು ಯಾವಾಗ ; (ವಿವರ ನೀಡುವುದು)

(ಇ) ಮುಸ್ಲಿಂಮರಿಗೆ ಪ್ರಾರ್ಥನೆಗೆ ಅವಕಾಶ ಕಲ್ಪಿಸಿದ ಸರಕಾರಿ ಜಾಗದಲ್ಲಿ ಗೋಡೆ ನಿರ್ಮಾಣಕ್ಕೆ ಅವಕಾಶ ಕಲ್ಪಿಸಲಾಗಿದೆಯೇ ; ಯಾವ ನಿಯಮದ ಅನ್ವಯ ಸರಕಾರಿ ಜಾಗದಲ್ಲಿ ಗೋಡೆ ನಿರ್ಮಿಸಲು ಅನುಮತಿ ನೀಡಲಾಗಿದೆ ; (ಅನುಮತಿ ಪತ್ರದೊಂದಿಗೆ ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮುಸ್ಲಿಂಮರಿಗೆ ವರ್ಷಕ್ಕೆ ಎರಡು ಬಾರಿ ಮಾತ್ರವೇ ಪ್ರಾರ್ಥನೆಗೆ ಅವಕಾಶ ಕಲ್ಪಿಸಿದ ಸರಕಾರಿ ಜಾಗದಲ್ಲಿ ಗೋಡೆಯನ್ನು ಅನಧಿಕೃತವಾಗಿ ಅಕ್ರಮವಾಗಿ ನಿರ್ಮಿಸಿದಲ್ಲಿ ಸದರಿ ಗೋಡೆಯನ್ನು ತೆರವುಗೊಳಿಸದಿರಲು ಕಾರಣವೇನು; ಈ ಅಕ್ರಮ ನಿರ್ಮಾಣಕ್ಕೆ ಸಹಕರಿಸಿದ ಕಂದಾಯ ಇಲಾಖೆಯ ಯಾವ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ; ಈ ಅಕ್ರಮ ನಿರ್ಮಾಣಗಳನ್ನು ಎಂದು ತೆರವುಗೊಳಿಸಲಾಗುವುದು ; (ವಿವರ ನೀಡುವುದು)

(ಉ) ಮುಸ್ಲಿಂಮರಿಗೆ ವರ್ಷಕ್ಕೆ ಎರಡು ಬಾರಿ ಮಾತ್ರವೇ ಪ್ರಾರ್ಥನೆಗೆ ಅವಕಾಶ ಕಲ್ಪಿಸಿದ ಸರಕಾರಿ ಜಾಗದಲ್ಲಿ ಇತರ ಧರ್ಮದವರು ತಮ್ಮ ಧಾರ್ಮಿಕ ಕಾರ್ಯಕ್ರಮಗಳನ್ನು ನಿರ್ವಹಿಸಬಾರದು ಎಂಬುದಾಗಿ ಸರಕಾರ ಕಾನೂನು ಮಾಡಿದೆಯೇ; ಈ ಕುರಿತು

ಸರಕಾರದ ನಿಲುವೇನು; ರಾಜ್ಯದ ಎಷ್ಟು ಸ್ಥಳಗಳಲ್ಲಿ ಇತರ ಧರ್ಮದವರ ಪ್ರಾರ್ಥನೆ ಮತ್ತು ಉತ್ಸವಗಳಿಗೆ ಅವಕಾಶ ಕಲ್ಪಿಸಲಾಗಿದೆ ;

(ಊ) ಸರಕಾರಿ ಮೈದಾನದಲ್ಲಿ ಯಾವುದೇ ಧರ್ಮ ಸಮುದಾಯದವರು ತಮ್ಮ ಧಾರ್ಮಿಕ ಆಚರಣೆಗಳನ್ನು ನಿರ್ವಹಿಸಲು ಅನುವಾಗುವಂತೆ ಏಕ ರೂಪ ನಿಯಮಾವಳಿಗಳನ್ನು ಜಾರಿಗೆ ತರುವ ಕುರಿತು ಸರಕಾರದ ನಿಲುವೇನು ?

## ಮತ್ಸ್ಯ ಸಂಪದ ಯೋಜನೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೯೨ (೬೨೨) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಧಾನ ಮಂತ್ರಿ ಮತ್ಸ ಸಂಪದ ಯೋಜನೆಯ ಅನ್ವಯ ಕಳೆದ ೦೨ ವರ್ಷಗಳಲ್ಲಿ ಎಷ್ಟು ಮೀನುಗಾರರಿಗೆ ಸಹಾಯ ಧನ ವಿತರಿಸಲಾಗಿದೆ; ಇದರಲ್ಲಿ ರಾಜ್ಯ ಸರಕಾರದ ಪಾಲು ಹಾಗೂ ಕೇಂದ್ರ ಸರಕಾರದ ಪಾಲು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಮೀನುಗಾರರ ಅಭಿವೃದ್ಧಿ ಹಾಗೂ ಮೀನುಗಾರಿಕೆಯ ಪ್ರೋತ್ಸಾಹಕ್ಕಾಗಿ ಸರಕಾರವು ಕೈಗೊಂಡ ಕಾರ್ಯಕ್ರಮಗಳೇನು; ಇದರ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ? (ಕಾರ್ಯಕ್ರಮವಾರು ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದಲ್ಲಿ ಸಬ್‌ರಿಜಿಸ್ಟ್ರಾರ್ ಕಛೇರಿಗಳಲ್ಲಿ ಆಸ್ತಿಗಳ ನೋಂದಣಿ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೫೯೩ (೬೬೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಬ್ ರಿಜಿಸ್ಟ್ರಾರ್ ಕಛೇರಿಗಳಲ್ಲಿ ಪ್ರತಿದಿನ ಎಷ್ಟು ಆಸ್ತಿಗಳನ್ನು ನೋಂದಣಿ ಮಾಡಲಾಗುತ್ತಿದೆ ;

(ಆ) ಈ ಸಬ್ ರಿಜಿಸ್ಟಾರ್ ಕಛೇರಿಗಳಲ್ಲಿ ಸರ್ವರ್ ಸಮಸ್ಯೆಯಿಂದ ಆಸ್ತಿ ನೋಂದಣಿ ಪ್ರಕ್ರಿಯೆ ವಿಳಂಬವಾಗುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಾವೇರಿ ೨.೦ ತಂತ್ರಾಂಶ ಬರುವುದಕ್ಕೂ ಮೊದಲು ಎಷ್ಟು ಆಸ್ತಿಗಳನ್ನು ಪ್ರತಿ ದಿನ ನೋಂದಣಿ ಮಾಡಲಾಗುತ್ತಿತ್ತು ; ಈ ತಂತ್ರಾಂಶ ಬಳಸಲು ಪ್ರಾರಂಭಿಸಿದ ನಂತರ ಎಷ್ಟು ಆಸ್ತಿಗಳನ್ನು ಪ್ರತಿ ದಿನ ನೋಂದಣಿ ಮಾಡಲಾಗುತ್ತಿದೆ ;

(ಈ) ಕಾವೇರಿ ೨.೦ ತಂತ್ರಾಂಶದಲ್ಲಿ ಕಾಣಿಸಿಕೊಳ್ಳುತ್ತಿರುವ ತಾಂತ್ರಿಕ ಸಮಸ್ಯೆಗೆ ಕಾರಣವೇನು; ಹಾಗೂ ಸರ್ವರ್ ಸಮಸ್ಯೆ ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಬಂದರು ನಿರ್ಮಾಣದಿಂದ ಸಾಂಪ್ರದಾಯಿಕ ಮೀನುಗಾರರಿಗೆ ಆಗುವ ತೊಂದರೆಗಳ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-**

೫೯೪ (೭೦೯) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪಶ್ಚಿಮ ಕರಾವಳಿ ಎಷ್ಟು ಕಿಲೋಮೀಟರ್ ವ್ಯಾಪ್ತಿಯನ್ನು ಹೊಂದಿದೆ ಹಾಗೂ ಈ ವ್ಯಾಪ್ತಿಯಲ್ಲಿ ನಿರ್ಮಾಣವಾದ ಬಂದರುಗಳ ಸಂಖ್ಯೆ ಎಷ್ಟು ಹಾಗೂ ನಿರ್ಮಾಣಗೊಂಡಿರುವ ಸ್ಥಳಗಳು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಬಂದರು ಹಾಗೂ ಕಟ್ಟಿ ನಿರ್ಮಾಣವಲ್ಲದೆ ತಡೆಗೋಡೆ ನಿರ್ಮಾಣದಿಂದ ಸಾಂಪ್ರದಾಯಿಕ ಮೀನುಗಾರಿಕೆಗೆ ತೊಂದರೆಯಾಗಿದೆಯೆಂಬ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸಾಂಪ್ರದಾಯಿಕ ಮೀನುಗಾರಿಕೆಗೆ ತೊಂದರೆಯಾದ ಬಗ್ಗೆ ಇಲಾಖೆ ಅಧ್ಯಯನ ನಡೆಸಿ ಅವರಿಗೆ ಸೂಕ್ತ ಪರಿಹಾರ ನೀಡುವ ಕ್ರಮ ಕೈಗೊಂಡಿದೆಯೇ ; (ಈ ಕುರಿತು ವಿವರವಾದ ಮಾಹಿತಿ ನೀಡುವುದು)

(ಈ) ಯಾಂತ್ರಿಕ ದೋಣಿ ನಡೆಸುವ ಮೀನುಗಾರರಿಗೆ ವರ್ಷದಲ್ಲಿ ಮಳೆಗಾಲದ ಸಂದರ್ಭದಲ್ಲಿ ಒಂದೂವರೆ ತಿಂಗಳು ಮೀನು ಹಿಡಿಯದಂತೆ (ಮೀನುಗಾರಿಕೆ ರಜೆ) ನಿರ್ಬಂದನೆ ಮಾಡಿ ಸರ್ಕಾರ ಆದೇಶ ಹೊರಡಿಸಿರುವುದು ನಿಜವೇ ;

(ಉ) ಮೀನುಗಾರಿಕೆಗೆ ನಿರ್ಬಂಧ ಹೇರಿರುವ ಹಿನ್ನಲೆಯಲ್ಲಿ ಅಂತವರಿಗೆ ಪರಿಹಾರ ಕ್ರಮಗಳನ್ನು ಸರ್ಕಾರ ಕೈಗೊಂಡಿದೆಯೇ ?

## ವಸತಿ ಯೋಜನೆಗಳಲ್ಲಿ ಬ್ಲಾಕ್ ಆದ ಮನೆಗಳನ್ನು ಬ್ಲಾಕ್ ತೆರವುಗೊಳಿಸುವ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೯೫ (೬೬೧) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿವಿಧ ವಸತಿ ಯೋಜನೆಗಳಲ್ಲಿ ಗ್ರಾಮೀಣ ಜನರಿಗೆ ಮಂಜೂರಾದ ಮನೆಗಳನ್ನು ವಿವಿಧ ಕಾರಣಗಳಿಂದ ಕಟ್ಟಿಕೊಳ್ಳದೇ ಇರುವುದರಿಂದ ಸದರಿ ಮನೆಗಳನ್ನು ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ; ಬಂದಿದ್ದರೆ, ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ವಿವಿಧ ವಸತಿ ಯೋಜನೆಗಳಲ್ಲಿ ತಡೆಹಿಡಿದಿರುವ ಮನೆಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯತ್‌ವಾರು ವಿವರಗಳನ್ನು ನೀಡುವುದು)

(ಇ) ಯಾವ ಕಾಲಮಿತಿಯೊಳಗೆ ತಡೆಹಿಡಿದಿರುವ ಮನೆಗಳನ್ನು ಮಂಜೂರು ಮಾಡಲಾಗುವುದು; ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ?

## ವಿವಿಧ ವಸತಿ ಯೋಜನೆಗಳಲ್ಲಿ ಗ್ರಾಮ ಪಂಚಾಯಿತಿಗಳಿಗೆ ಮನೆಗಳನ್ನು ಮಂಜೂರು ಮಾಡುವ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೯೬ (೬೬೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು ವರ್ಷಗಳಲ್ಲಿ ಗ್ರಾಮ ಪಂಚಾಯತಿಗಳಿಗೆ ವಿವಿಧ ವಸತಿ ಯೋಜನೆಗಳಡಿಯಲ್ಲಿ ಹೊಸದಾಗಿ ಮನೆಗಳನ್ನು ಮಂಜೂರು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಹೊಸ ಮನೆಗಳನ್ನು ಮಂಜೂರು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಪ್ರತಿ ಗ್ರಾಮ ಪಂಚಾಯತಿಗಳಿಗೆ ವಿವಿಧ ವಸತಿ ಯೋಜನೆಗಳಲ್ಲಿ ಮನೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಇದ್ದರೆ, ಪ್ರತಿ ಗ್ರಾಮ ಪಂಚಾಯತಿಗಳಿಗೆ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗುವುದು ;

(ಇ) ಪ್ರತಿ ಗ್ರಾಮ ಪಂಚಾಯತಿಗಳಿಗೆ ಕನಿಷ್ಠ ೧೦೦ ಮನೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಇದ್ದರೆ, ಈ ಪ್ರಸ್ತಾವನೆಯು ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಲಿಂಗಸಗೂರು ತಾಲ್ಲೂಕಿನ ತಹಶೀಲ್ದಾರ್ ಕಛೇರಿಯಲ್ಲಿ ಹಣ ದುರುಪಯೋಗ ಕುರಿತು

**ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೯೭ (೬೪೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲೂಕಿನ ತಹಶೀಲ್ದಾರ್ ಕಛೇರಿಯಲ್ಲಿ ೧.೮೭ ಲಕ್ಷದ ಹಣ ದುರುಪಯೋಗ ಆಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಈ ಹಣದ ದುರುಯೋಗದ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಸದರಿ ತಹಶೀಲ್ದಾರ್ ಕಛೇರಿಗೆ ಪ್ರಕೃತಿ ವಿಕೋಪದಿಂದ ಬಂದ ಅನುದಾನ ಎಷ್ಟು ;

(ಈ) ಈ ಅನುದಾನದಲ್ಲಿ ಖರ್ಚಾದ ಅನುದಾನ ಎಷ್ಟು ;

(ಉ) ಮತ್ತು ಉಳಿದ ಅನುದಾನವೆಷ್ಟು ? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

## ಬಗರ್ ಹುಕುಂ ಅರ್ಜಿಗಳ ವಿಲೇವಾರಿ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೯೮ (೬೫೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩ ರಿಂದ ೨೦೨೪-೨೫ನೇ ಸಾಲಿನವರೆಗೆ ಬಗರ್ ಹುಕುಂ ಸಮಿತಿಗಳಿಗೆ ರಾಜ್ಯಾದ್ಯಂತ ಭೂಮಿ ಹಂಚಿಕೆಗೆ ಬಂದ ಬೇಡಿಕೆಗಳ ಅರ್ಜಿ ಸಂಖ್ಯೆ ಮತ್ತು ಒಟ್ಟು ಭೂಮಿಯ ಪ್ರಮಾಣ ಎಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅಕ್ರಮಕ್ಕೆ ಸಲ್ಲಿಕೆಯಾದ ಅರ್ಜಿಗಳಲ್ಲಿ ತಿರಸ್ಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; ತಾಲ್ಲೂಕುವಾರು ಹಂತದಲ್ಲಿ, ವಿಭಾಗಾಧಿಕಾರಿವಾರು ಹಂತದಲ್ಲಿ ಮತ್ತು ಜಿಲ್ಲಾಧಿಕಾರಿ ಹಂತದಲ್ಲಿ ತಿರಸ್ಕೃತ ಅರ್ಜಿಗಳ ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ೨೦೧೩ ರಿಂದ ಇಲ್ಲಿಯವರೆಗೆ ಎಷ್ಟು ಅರ್ಜಿಗಳನ್ನು ಬಗರ್ ಹುಕುಂ ಸಮಿತಿಗಳು ವಿಲೇವಾರಿ ಮಾಡಿವೆ ಮತ್ತು ಹಂಚಿಕೆಯಾದ ಭೂಮಿ ಎಷ್ಟು ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಬಗರ್ ಹುಕುಂ ಯೋಜನೆಯಡಿ ಭೂಮಿ ಹಂಚಿಕೆ ತ್ವರಿತ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಸಾರ್ವಜನಿಕರು ಇ-ಖಾತಾ ಕುರಿತಂತೆ ಸಮಸ್ಯೆ ಎದುರಿಸುತ್ತಿರುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೫೯೯ (೭೩೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಹಾನಗರ ಪಾಲಿಕೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಯಾವ ಯಾವ ಆಸ್ತಿಗಳು ಆಸ್ತಿ ತೆರಿಗೆ ವ್ಯಾಪ್ತಿಗೆ ಒಳಪಡುತ್ತವೆ ಮತ್ತು ಯಾವ ಆಸ್ತಿಗಳು ಒಳಪಡುವುದಿಲ್ಲ. ಇ ಖಾತಾ ಪ್ರಕ್ರಿಯೆಯಿಂದ ಆಸ್ತಿದಾರರಿಗೆ ಆಗುವ ಉಪಯೋಗಗಳು ಯಾವುವು ; ಇ ಖಾತಾದಲ್ಲಿರುವ ವಿವಿಧ ನಮೂನೆಯ ಖಾತೆಗಳು ಯಾವುವು ;

(ಆ) ಎ-ಖಾತಾ ಹಾಗೂ ಬಿ ಖಾತಾಗಳಿಗಿರುವ ವ್ಯತ್ಯಾಸಗಳು ಯಾವುವು: ಇವುಗಳಿಂದಾಗುವ ಅನುಕೂಲ ಮತ್ತು ಅನಾನುಕೂಲಗಳು ಯಾವುವು ; (ವಿಸ್ತೃತ ವಿವರಣೆ ನೀಡುವುದು)

(ಇ) ಕಳೆದ ೨೦-೨೫ ವರ್ಷಗಳ ಹಿಂದೆ ವಿವಿಧ ಬಡಾವಣೆಗಳಲ್ಲಿ ಉಪ ನೋಂದಣಾಧಿಕಾರಿ ಕಚೇರಿಯಲ್ಲಿ ದಾಖಲಿಸುವ ಮೂಲಕ ಖರೀದಿ ಮಾಡಿದ ನಿವೇಶನ ಏಕಾ ಏಕಿ ಸರ್ಕಾರವು ಅನಧಿಕೃತ ಬಡಾವಣೆ ಎಂದು ಮತ್ತು ಅವುಗಳಿಗೆ ಬಿ ಖಾತೆ ನೀಡಲು ಆದೇಶಿಸಿರುವುದರಿಂದ ಸಾರ್ವಜನಿಕರು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ನ್ಯೂನ್ಯತೆಗಳನ್ನು ಸರಿಪಡಿಸುವ ಬಗ್ಗೆ ಸರ್ಕಾರದ ನಿಲುವೇನು ? (ವಿವರಣೆ ನೀಡುವುದು)

## ರಾಜ್ಯದಲ್ಲಿರುವ ವಿವಿಧ ಸ್ಥರದ ಗುತ್ತಿಗೆದಾರರಿಗೆ ಬಿಡುಗಡೆಯಾಗ ಬೇಕಿರುವ ಬಾಕಿ ಮೊತ್ತ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೬೦೦ (೭೩೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ವಿವಿಧ ಸ್ಥರದ ಗುತ್ತಿಗೆದಾರರು ಈಗಾಗಲೇ ಪೂರ್ಣಗೊಳಿಸಿರುವ ಕಾಮಗಾರಿಗಳಿಗೆ ಸರ್ಕಾರದಿಂದ ಹಣ ಬಿಡುಗಡೆಯಾಗದೆ ಆರ್ಥಿಕವಾಗಿ ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಆ) ಕಳೆದ ೨ ವರ್ಷಗಳಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಇಲಾಖೆಯಿಂದ ಸರ್ಕಾರದ ವಿವಿಧ ಕಾಮಗಾರಿಗಳಿಗೆ ಅನುಮೋದನೆಗೊಂಡ ಅನುದಾನ ಎಷ್ಟು; ಇವುಗಳಲ್ಲಿ ಪೂರ್ಣಗೊಂಡ, ಬಾಕಿ ಉಳಿದ ಕಾಮಗಾರಿಗಳು ಎಷ್ಟು; ಈ ಕಾಮಗಾರಿಗಳಿಗೆ ಬಿಡುಗಡೆಯಾದ ಹಾಗೂ ಬಾಕಿ ಉಳಿದಿರುವ ಅನುದಾನವೆಷ್ಟು ;

(ಇ) ಯಾವ ಕಾಲಮಿತಿಯಲ್ಲಿ ಗುತ್ತಿಗೆದಾರರಿಗೆ ಬಿಡುಗಡೆಯಾಗಬೇಕಿರುವ ಬಾಕಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು ?

## ಧಾರವಾಡ ಜಿಲ್ಲೆಯಲ್ಲಿರುವ ಧನಗರಗೌಳಿ ಜನಾಂಗದ ಕಂದಾಯ ಗ್ರಾಮಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿದವರು) :-**

೬೦೧ (೭೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಧಾರವಾಡ ಜಿಲ್ಲೆಯಲ್ಲಿ ಕಾಡಿನಂಚಿನಲ್ಲಿ ವಾಸಿಸುವ ಧನಗರಗೌಳಿ ಜನಾಂಗದ ಎಷ್ಟು ಹಾಡಿಗಳಿವೆ: ಸದರಿ ಹಾಡಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡಿ ಹಕ್ಕುಪತ್ರ ನೀಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಾಕಿ ಉಳಿದಿರುವ ಹಾಡಿಗಳನ್ನು ಕಂದಾಯ ಗ್ರಾಮಗಳಾಗಿ ಮಾಡುವುದಕ್ಕೆ ಸರ್ಕಾರದ ಮುಂದಿನ ಕ್ರಮಗಳೇನು ? (ಸಂಪೂರ್ಣವಾಗಿ ವಿವರಿಸುವುದು)

## ಮೀನುಗಾರಿಕೆ ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಇರುವ ಸೌಲಭ್ಯಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿದವರು) :-**

೬೦೨ (೭೨೭) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀನುಗಾರಿಕೆ ಉದ್ಯೋಗ ಕೈಗೊಳ್ಳಲು ಇರುವ ಸರ್ಕಾರದ ಯೋಜನೆಗಳು ಯಾವುವು ಮತ್ತು ಇವರಿಗೆ ಮೀನುಗಾರಿಕೆ ಉದ್ಯೋಗ ಕೈಗೊಳ್ಳಲು ಇರುವ ಸಾಲದ ಯೋಜನೆಗಳಾವುವು ? (ಸಬ್ಸಿಡಿ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

## ಅನುಗ್ರಹ ಯೋಜನೆಯಡಿ ಪರಿಹಾರ ಮೊತ್ತ ವಿಳಂಬವಾಗಿರುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿದವರು) :-**

೬೦೩ (೭೨೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಶುಸಂಗೋಪನೆ ಇಲಾಖೆಯ ಅನುಗ್ರಹ ಯೋಜನೆಯಡಿ ಬೆಳಗಾವಿ ಜಿಲ್ಲೆಯಲ್ಲಿ ಪ್ರಸ್ತುತ ಸಾಲಿನಲ್ಲಿ ಪರಿಹಾರಕ್ಕಾಗಿ ಸ್ವೀಕೃತಗೊಂಡಿರುವ ಅರ್ಜಿಗಳ ಸಂಖ್ಯೆ ಎಷ್ಟು; ಪರಿಹಾರ ನೀಡಿದ ಮೊತ್ತ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಖಾನಾಪೂರ ತಾಲ್ಲೂಕಿನಲ್ಲಿ ಅನುಗ್ರಹ ಯೋಜನೆಯಡಿ ಸೆಪ್ಟೆಂಬರ್ ೨೦೨೪ ರಿಂದ ಫೆಬ್ರವರಿ-೨೦೨೫ವರೆಗೆ ಸ್ವೀಕೃತವಾಗಿರುವ ಯಾವುದೇ ಅರ್ಜಿಗಳಿಗೆ ಇಲ್ಲಿಯವರೆಗೂ ರೈತರ ಖಾತೆಗೆ ಪರಿಹಾರ ಮೊತ್ತ ಜಮಾ ಆಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ರೈತರಿಗೆ ಪರಿಹಾರ ನೀಡಲಾಗುವುದು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿನ ಗೋಮಾಳ ಜಾಗದ ನಿರ್ವಹಣೆ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೬೦೪ (೭೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಗೋಮಾಳ ಜಾಗವು ಲಭ್ಯವಿದೆ ; (ಜಿಲ್ಲಾವಾರು ವಿಸ್ತೀರ್ಣದೊಂದಿಗೆ ಮಾಹಿತಿ ನೀಡುವುದು)

(ಆ) ಗೋಮಾಳ ಸ್ಥಳವನ್ನು ಯಾವ ಯಾವ ಉದ್ದೇಶಗಳಿಗೆ ಬಳಕೆ ಮಾಡಲಾಗುತ್ತದೆ ;

(ಇ) ಗೋಮಾಳ ಸ್ಥಳವನ್ನು ಸಂಘ ಸಂಸ್ಥೆಗಳಿಗೆ ಮಂಜೂರು ಮಾಡಲು ಇರುವ ನಿಯಮಗಳೇನು ; ಯಾವ ಯಾವ ಉದ್ದೇಶಗಳಿಗೆ ಗೋಮಾಳ ಜಾಗವನ್ನು ಮಂಜೂರು ಮಾಡಲಾಗುವುದು ; (ವಿವರ ನೀಡುವುದು)

(ಈ) ಕಳೆದ ೨ ವರ್ಷಗಳಲ್ಲಿ ಎಷ್ಟು ಸಂಘ ಸಂಸ್ಥೆಗಳಿಗೆ ಗೋಮಾಳ ಜಾಗವನ್ನು ಮಂಜೂರು ಮಾಡಲಾಗಿದೆ ; ಯಾವ ಉದ್ದೇಶಕ್ಕೆ ಮಂಜೂರು ಮಾಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಮುಜರಾಯಿ ಇಲಾಖೆಗಳ ದೇವಸ್ಥಾನದ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೬೦೫ (೭೧೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ದೇವಸ್ಥಾನಗಳ ಸಂಖ್ಯೆ ಎಷ್ಟು; ಈ ದೇವಸ್ಥಾನಗಳು ಯಾವ ಯಾವ ವರ್ಗದಲ್ಲಿ ಬರುತ್ತದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮುಜರಾಯಿ ವ್ಯಾಪ್ತಿಯಲ್ಲಿ ಬರುವ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಸರ್ಕಾರವು ೨೦೨೪-೨೫ನೇ ಸಾಲಿನಲ್ಲಿ ನಿಗದಿಪಡಿಸಿರುವ ಆಯವ್ಯಯ ಹಣ ಎಷ್ಟು; ಇದುವರೆಗೂ ಬಿಡುಗಡೆ ಮಾಡಲಾದ ಹಾಗೂ ಖರ್ಚು ಮಾಡಲಾದ ಹಣ ಎಷ್ಟು; ಈ ಹಣದಲ್ಲಿ ಎಲ್ಲಾ ದೇವಸ್ಥಾನಗಳ ಜೀರ್ಣೋದ್ಧಾರ ಮಾಡಲು ಸಾಧ್ಯವಿದೆಯೇ ;

(ಇ) ಮುಜರಾಯಿ ಇಲಾಖೆಯ ದೇವಸ್ಥಾನಗಳಿಂದ ೨೦೨೪-೨೫ನೇ ಸಾಲಿನಲ್ಲಿ ಇದುವರೆಗೂ ವಿವಿಧ ಕಾಣಿಕೆಗಳಿಂದ ಬಂದಿರುವ ಹಣ ಹಾಗೂ ಬಂಗಾರದ ವಸ್ತುಗಳು ಎಷ್ಟು; (ದೇವಸ್ಥಾನವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ೨೦೨೪-೨೫ನೇ ಸಾಲಿನ ಆಯವ್ಯಯದಲ್ಲಿ ನಿಗದಿಪಡಿಸಿರುವ ಹಣದಿಂದ ಎಲ್ಲಾ ದೇವಸ್ಥಾನಗಳ ಜೀರ್ಣೋದ್ಧಾರ ಮಾಡಲು ಸಾಧ್ಯವಿದೆಯೇ ;

(ಉ) ೨೦೨೫-೨೬ನೇ ಸಾಲಿನ ಆಯವ್ಯಯಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಅನುದಾನವನ್ನು ನಿಗಧಿಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಅಲ್ಪಸಂಖ್ಯಾತರು ವಾಸಿಸುವ ಜಾಗಗಳಲ್ಲಿ ಮೂಲಭೂತ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೬೦೬ (೭೧೬) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ೨೦೨೪-೨೫ನೇ ಸಾಲಿನಲ್ಲಿ ನಿಗಧಿಪಡಿಸಿರುವ ಅನುದಾನ ಎಷ್ಟು;

(ಆ) ಮೂಲಭೂತ ಸೌಕರ್ಯಗಳನ್ನು ಒದಗಿಸಲು ೨೦೨೪ ೨೫ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನ ಎಷ್ಟು ಮತ್ತು ಯಾವ ಯಾವ ವಿಧಾನಸಭಾ ಕ್ಷೇತ್ರಗಳಿಗೆ ಬಿಡುಗಡೆ ಮಾಡಲಾಗಿದೆ ;

(ಇ) ಕಳೆದ ಹತ್ತು ವರ್ಷಗಳಲ್ಲಿ ಅಲ್ಪ ಸಂಖ್ಯಾತರ ಪ್ರದೇಶಗಳಲ್ಲಿ ನಿರ್ಮಾಣ ಮಾಡಿರುವ ಶಾದಿ ಮಹಲ್‌ಗಳ ಸಂಖ್ಯೆ ಎಷ್ಟು; ಶಾದಿ ಮಹಲ್‌ಗಳನ್ನು ನಿರ್ಮಿಸಲು ನಿಗಧಿಪಡಿಸಿರುವ ಘಟಕ ವೆಚ್ಚ ಎಷ್ಟು;

(ಈ) ಈ ವೆಚ್ಚದಲ್ಲಿ ಶಾದಿ ಮಹಲ್ ನಿರ್ಮಾಣ ಮಾಡಲು ಸಾಧ್ಯವಿದೆಯೇ ; ಇಲ್ಲದೇ ಇದ್ದಲ್ಲಿ, ಘಟಕ ವೆಚ್ಚವನ್ನು ಹೆಚ್ಚಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ ;

(ಉ) ರಾಜ್ಯದಲ್ಲಿ ವಾಸಿಸುವ ಅಲ್ಪಸಂಖ್ಯಾತರ ಕುಟುಂಬಗಳ ಸಂಖ್ಯೆ ಎಷ್ಟು ; ಈ ಪೈಕಿ ಅಲ್ಪ ಸಂಖ್ಯಾತರಲ್ಲಿ ವಸತಿ ರಹಿತ ಕುಟುಂಬಗಳ ಹಾಗೂ ನಿವೇಶನ ರಹಿತ ಕುಟುಂಬಗಳ ಸಂಖ್ಯೆ ಎಷ್ಟು ;

(ಊ) ಈ ಎಲ್ಲಾ ಕುಟುಂಬಗಳಿಗೆ ವಸತಿ ಮತ್ತು ನಿವೇಶನ ಸೌಲಭ್ಯವನ್ನು ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಮೀನುಗಾರಿಕೆ ಇಲಾಖೆಯಲ್ಲಿ ತೊಡಗಿಸಿಕೊಂಡಿರುವ ಕುಟುಂಬಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೬೦೭ (೭೧೭) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮೀನುಗಾರಿಕಾ ವೃತ್ತಿಯಲ್ಲಿ ತೊಡಗಿರುವ ಕುಟುಂಬಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕುಟುಂಬಗಳಿಗೆ ಕಳೆದ ಐದು ವರ್ಷಗಳಿಂದ ಮಂಜೂರು ಮಾಡಿರುವ ಮನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಮೀನುಗಾರಿಕಾ ವೃತ್ತಿಯಲ್ಲಿ ತೊಡಗಿರುವ ಕುಟುಂಬದವರಿಗೆ ಮಂಜೂರು ಮಾಡುವ ಮನೆಗಳ ಘಟಕದ ಸಂಖ್ಯೆ ಎಷ್ಟು; ಈ ಘಟಕ ವೆಚ್ಚದಲ್ಲಿ ಮನೆಯನ್ನು ನಿರ್ಮಾಣ ಮಾಡಿಕೊಳ್ಳಲು ಸಾಧ್ಯವಿದೆಯೇ ;

(ಈ) ಪ್ರಸ್ತುತ ಕಟ್ಟಡ ಸಾಮಾಗ್ರಿಗಳ ದರಗಳು ಏರಿಕೆಯಾಗಿರುವುದರಿಂದ ಮನೆಗಳ ಘಟಕ ವೆಚ್ಚವನ್ನು ಹೆಚ್ಚಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ ;

(ಉ) ಒಳನಾಡಿನಲ್ಲಿ ಮೀನುಗಾರಿಕೆ ಕುಟುಂಬದವರಿಗೆ ಅದರೊಂದಿಗೆ ಪ್ರವರ್ಗ–೧ ರ ಜಾತಿಗೆ ಸೇರಿರುವ ಮೀನುಗಾರ ವೃತ್ತಿಯನ್ನು

ಹೊಂದಿದವರಿಗೆ ಗುತ್ತಿಗೆಯನ್ನು ನೀಡಲಾಗಿದೆಯೇ ; ಈ ರೀತಿಯಾಗಿ ಗುತ್ತಿಗೆ ನೀಡಿರುವ ಕುಟುಂಬಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಲೋಕೋಪಯೋಗಿ ಇಲಾಖೆಯಲ್ಲಿ ಟೆಂಡರ್ ಆಹ್ವಾನಿಸಿರುವ ಬಗ್ಗೆ ಮಾಹಿತಿ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೬೦೮ (೭೧೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಲೋಕೋಪಯೋಗಿ ಇಲಾಖೆಯಲ್ಲಿ ೨೦೨೪-೨೫ನೇ ಸಾಲಿನಲ್ಲಿ ಆಹ್ವಾನಿಸಿರುವ ಟೆಂಡರ್‌ಗಳ ಸಂಖ್ಯೆ ಎಷ್ಟು;

(ಆ) ಈ ಪೈಕಿ ಒಂದು ಕೋಟಿಗಿಂತ ಕಡಿಮೆ ಇರುವ ಟೆಂಡರ್‌ಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಸರ್ಕಾರದ ನಿಯಮಾನುಸಾರ ಮತ್ತು ಆದೇಶ ಅನುಸಾರ ಪ್ರವರ್ಗ-೧ರ ಜಾತಿಗಳ ಜನಾಂಗದವರಿಗೆ ನಿಗಧಿಪಡಿಸಿರುವ ಹಾಗೂ ನೀಡಿರುವ ಸಂಖ್ಯೆ ಎಷ್ಟು? (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು)

## ಅಕ್ರಮ-ಸಕ್ರಮ ಯೋಜನೆಯಡಿ ಹಕ್ಕು ಪತ್ರಗಳು ವಿತರಣೆ ಮಾಡಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೬೦೯ (೭೦೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಂದಾಯ ಭೂಮಿ ಒತ್ತುವರಿ ಮಾಡಿ ಮನೆ ಕಟ್ಟಿದವರಿಗೆ ಅಕ್ರಮ-ಸಕ್ರಮ ಯೋಜನೆ ಅಡಿಯಲ್ಲಿ ತೇರದಾಳ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು ಎಷ್ಟು ಹಕ್ಕು ಪತ್ರಗಳು ವಿತರಣೆಯಾಗಿದೆ ; (ನಗರ ಹಾಗೂ ಗ್ರಾಮವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಎಷ್ಟು ಸಂಖ್ಯೆಯ ಹಕ್ಕು ಪತ್ರಗಳು ನೊಂದಣಿಯಾಗಿದೆ ; ಇನ್ನು ನೊಂದಣಿ ಆಗದೆ ಉಳಿದಿರುವ ಸಂಖ್ಯೆ ಎಷ್ಟು;

(ಇ) ಈ ಯೋಜನೆಯ ಅಡಿಯಲ್ಲಿ ರಬಕವಿ-ಬನಹಟ್ಟಿ ನಗರ ರಬಕವಿ ಬನಹಟ್ಟಿ, ರಾಂಪುರ ಹೊಸೂರು ವ್ಯಾಪ್ತಿಯಲ್ಲಿ ಎಷ್ಟು ಹಕ್ಕು ಪತ್ರ ನೀಡಲಾಗಿದೆ ;

(ಈ) ಇದರಲ್ಲಿ ಕೆಲವು ಫಲಾನುಭವಿಗಳ ಹಕ್ಕು ಪತ್ರಗಳು ಸಿ.ಟಿ.ಎಸ್ ಆಗದೆ ತೊಂದರೆಗೊಳಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ತೊಂದರೆ ನಿವಾರಿಸಲು ಇಲ್ಲಿಯವರೆಗೆ ಕ್ರಮವಹಿಸದಿರಲು ಕಾರಣವೇನು ?

## ಮೀನುಗಾರರ ರಕ್ಷಣೆ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೬೧೦ (೭೦೨) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೀನುಗಾರರ ರಕ್ಷಣೆಗೆ ಸಮುದ್ರ ಆಂಬ್ಯುಲೆನ್ಸ್ ಖರೀದಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಆ) ಈ ಆಂಬ್ಯುಲೆನ್ ವ್ಯವಸ್ಥೆಯು ಎಲ್ಲೆಲ್ಲಿ ಕಲ್ಪಿಸಲಾಗಿದೆ ಮತ್ತು ಇದರ ನಿರ್ವಹಣೆ ಜವಾಬ್ದಾರಿ ಯಾರಿಗೆ ವಹಿಸಲಾಗಿದೆ ; (ಮಾಹಿತಿ ನೀಡುವುದು)

(ಇ) ಈ ಸೇವೆಯಲ್ಲಿ ಇದುವರೆಗೂ ಎಷ್ಟು ಮೀನುಗಾರರಿಗೆ ರಕ್ಷಣೆ ಮಾಡಲಾಗಿದೆ ; ಅದರಲ್ಲಿ ಮಹಿಳೆಯರ ಸಂಖ್ಯೆ ಎಷ್ಟು ?

## ಶಕ್ತಿ ಯೋಜನೆ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೬೧೧ (೭೦೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಶಕ್ತಿ ಯೋಜನೆಯಡಿ ೨೦೨೩-೨೪ ಹಾಗೂ ೨೦೨೪-೨೫ನೇ ಸಾಲಿನಲ್ಲಿ ಪ್ರಯಾಣಿಸಿದ ಮಹಿಳೆಯರು ಎಷ್ಟು ;

(ಆ) ೨೦೨೩-೨೪ ಹಾಗೂ ೨೦೨೪-೨೫ ರಲ್ಲಿ ಈ ಯೋಜನೆಗಾಗಿ ಕಾಯ್ದಿರಿಸಿದ್ದ ಹಣವೆಷ್ಟು ; ವರ್ಷದ ಕೊನೆಗೆ ವ್ಯಯವಾದ ಹಣ ಎಷ್ಟು ;

(ಇ) ೨೦೨೩-೨೪ ಹಾಗೂ ೨೦೨೪-೨೫ರಲ್ಲಿ ಈ ಯೋಜನೆಗಾಗಿ ಎಷ್ಟು ಬಸ್ಸುಗಳನ್ನು ಉಪಯೋಗಿಸಲಾಗಿದೆ ; ಯಾವ ಪ್ರದೇಶಗಳಿಗೆ ಮಹಿಳೆಯರು ಹೆಚ್ಚು ಪ್ರವಾಸ ಮಾಡಿದ್ದಾರೆ ; ಧಾರ್ಮಿಕ ಸ್ಥಳಗಳಾಗಿದ್ದಲ್ಲಿ, ಅತೀ ಹೆಚ್ಚು ಪ್ರವಾಸ ಮಾಡಿದ ಧಾರ್ಮಿಕ ಸ್ಥಳಗಳು ಯಾವುವು ಮತ್ತು ಅತೀ ಹೆಚ್ಚು ಪ್ರವಾಸ ಮಾಡಿದ ಐತಿಹಾಸಿಕ ಸ್ಥಳಗಳು ಯಾವುವು ?

## ಮಹಿಳಾ ಪಶುಸಂಗೋಪನ ಸಹಕಾರಿ ಸಂಘಗಳ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೬೧೨ (೭೦೪) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಹಿಳಾ ಪಶುಸಂಗೋಪನೆ ಸಹಕಾರಿ ಸಂಘಗಳು ಎಷ್ಟಿವೆ ಮತ್ತು ಅವುಗಳಿಗೆ ಪ್ರತಿ ವರ್ಷ ಅನುದಾನ ನೀಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಪ್ರತಿ ಮಹಿಳಾ ಸಂಗೋಪನಾ ಸಂಸ್ಥೆಗಳಿಗೆ ಎಷ್ಟು ಅನುದಾನ ನೀಡಲಾಗುತ್ತಿದೆ ;

(ಆ) ಪಶುಸಂಗೋಪನ ಸಹಕಾರಿ ಮಹಿಳಾ ಸಂಸ್ಥೆಗಳ ಮೂಲಕ ಮಹಿಳಾ ಸಬಲೀಕರಣಕ್ಕಾಗಿ ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು ?

## ಅಮೃತ ಸ್ವಾಭಿಮಾನ ಕುರಿಗಾಯಿ ಯೋಜನೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೧೩ (೬೨೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆ ವ್ಯಾಪ್ತಿಯಲ್ಲಿ ಅಮೃತ ಸ್ವಾಭಿಮಾನ ಕುರಿಗಾಯಿ ಯೋಜನೆಯಡಿ ಘಟಕ ಸ್ಥಾಪನೆಗೆ ಕಳೆದ ೨ ವರ್ಷದಲ್ಲಿ ಆಯ್ಕೆಯಾಗಿರುವ ಕುರಿಗಾಯಿ ಸದಸ್ಯರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಆಯ್ಕೆಯಾದ ಕುರಿಗಾಯಿ ಸದಸ್ಯರಿಗೆ ಸಹಾಯ ಧನ ನೀಡಲಾಗಿದೆಯೇ ; ನೀಡಲಾಗಿದ್ದರೆ, ಕೇಂದ್ರ ಮತ್ತು ರಾಜ್ಯ

ಸರ್ಕಾರದಿಂದ ನೀಡಲಾದ ಪ್ರೋತ್ಸಾಹ ಧನವೆಷ್ಟು; (ಮಾಹಿತಿ ನೀಡುವುದು)

(ಇ) ಹೊಸದಾಗಿ ಅಮೃತ ಸ್ವಾಭಿಮಾನ ಕುರಿಗಾಯಿ ಯೋಜನಾ ಅಡಿಯಲ್ಲಿ ಸಲ್ಲಿಸಲಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ಯಾವಾಗ ಇವರುಗಳಿಗೆ ಸಹಾಯ ಧನ ನೀಡಲಾಗುವುದು ? (ವಿವರ ಒದಗಿಸುವುದು)

## ಹೊರ ವರ್ತುಲ ರಸ್ತೆ ನಿರ್ಮಾಣ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೧೪ (೬೩೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಬೀದರ್ ಪಟ್ಟಣದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಅಧಿಕ ವಾಹನಗಳು ಓಡಾಡುತ್ತಿರುವುದರಿಂದ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಬೀದರ್ ಹೊರ ವರ್ತುಲ ರಸ್ತೆ ನಿರ್ಮಾಣಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ; (ಮಾಹಿತಿ ನೀಡುವುದು)

(ಇ) ಸರ್ಕಾರವು ಯಾವ ಕಾಲಮಿತಿಯಲ್ಲಿ ಹೊರ ವರ್ತುಲ ರಸ್ತೆ ಕಾಮಗಾರಿ ಕೈಗೊಳ್ಳುವುದು ?

## ಮೀನುಗಾರರ ಸಮಸ್ಯೆ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೧೫ (೬೧೪) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೊನ್ನಾವರ ಖಾಸಗಿ ಬಂದರು ಮತ್ತು ಮೀನುಗಾರರ ನಡುವಿನಲ್ಲಿ ಇರುವ ವಿವಾದಗಳೇನು ;

(ಆ) ಮೀನುಗಾರರ ಕುಲಕಸುಬಿಗೆ ಪ್ರಕೃತಿ ಮತ್ತು ಕಡಲಾಮೆಗಳ ಉಳಿವಿಗೆ ಧಕ್ಕೆಯಾಗದಂತೆ ಇದನ್ನು ಸೌಹಾರ್ದ ಪೂರ್ವಕವಾಗಿ ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಪ್ರಕರಣದಲ್ಲಿ ಇದುವರೆವಿಗೆ ಬಂಧಿಸಲಾದ ಮೀನುಗಾರರನ್ನು ಕೋರ್ಟ್ ವಿಚಾರಣೆಗೆ ಸಲ್ಲಿಸಿದ ಮೀನುಗಾರರ ಹೆಸರು ಸಮೇತ ವಿವರ ಒದಗಿಸುವುದು ; ಈ ವಿವಾದವು ಯಾವ ವರ್ಷದಿಂದ ಪ್ರಥಮ ವರ್ತಮಾನ ವರದಿಗಳಲ್ಲಿ ದಾಖಲಾಗಿದೆ ;

(ಈ) ತಮ್ಮ ಮನೆ-ಮಠ, ಜೀವನ ಪ್ರದೇಶದ ಉಳುವಿಗಾಗಿ ಸಾಂಪ್ರದಾಯಿಕ ಮೀನುಗಾರರು ನಡೆಸುವ ಹೋರಾಟಕ್ಕೆ ಸರ್ಕಾರ ಸ್ಪಂದಿಸಿ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಮೀನುಗಾರರ ಭೂ ಪ್ರದೇಶಗಳನ್ನು ಕರಾವಳಿ ವಲಯ ನಿರ್ವಹಣೆ ಯೋಜನಾ ನಕ್ಷೆಯಲ್ಲಿ ಗುರುತಿಸುವ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೧೬ (೬೧೫) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಕರಾವಳಿ ವಲಯ ನಿರ್ವಹಣೆಯ ವ್ಯಾಪ್ತಿಗೆ ಬರುವ ಪ್ರದೇಶದ ಗ್ರಾಮವಾರು ಮೀನುಗಾರರ ಕುಟುಂಬಗಳ ಸಂಖ್ಯೆ ಎಷ್ಟು ;

(ಆ) ಸದರಿ ವಲಯದಲ್ಲಿ ವಾಸಿಸುವ ಮತ್ತು ಬಳಕೆಯಲ್ಲಿರುವ ಮೀನುಗಾರರ ಭೂ ಪ್ರದೇಶಗಳನ್ನು ಕರಾವಳಿ ವಲಯ ನಿರ್ವಹಣೆ ಯೋಜನಾ ನಕ್ಷೆಗಳಲ್ಲಿ ಯಾವಾಗ ಗುರುತಿಸಲಾಗುವುದು ;

(ಇ) ಸದರಿ ಪ್ರದೇಶದಲ್ಲಿ ಮೀನುಗಾರಿಕೆಗೆ ಇರುವ ಸೌಲಭ್ಯಗಳಾವುವು ? (ವಿಶೇಷ ಅನುದಾನ ಮಾಹಿತಿ ನೀಡುವುದು)

## ಹಕ್ಕಿ ಜ್ವರ ಹೆಚ್ಚಳ ಹಿನ್ನಲೆ ಗಡಿ ಭಾಗದಲ್ಲಿ ತಪಾಸಣೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೭ (೬೩೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಗಡಿಭಾಗದಲ್ಲಿ ಹಕ್ಕಿ ಜ್ವರ ಹೆಚ್ಚಳದ ಹಿನ್ನಲೆಯಲ್ಲಿ, ಅಂಧ್ರ ಮತ್ತು ಮಹಾರಾಷ್ಟ್ರಾದಿಂದ ಬರುವ ಕೋಳಿ ಮತ್ತು ಮೊಟ್ಟೆಗಳ ತಪಾಸಣೆಗೆ ಇಲಾಖೆ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಆ) ಬೀದರ್ ಮತ್ತು ಕಲಬುರಗಿ ಗಡಿಭಾಗವಾಗಿರುವುದರಿಂದ ಜನರ ಸುರಕ್ಷಿತ ದೃಷ್ಟಿಯಿಂದ ಕೋಳಿ ಮತ್ತು ಮೊಟ್ಟೆಗಳ ಸಾಗಣಿಕೆ ನಿರ್ಭಂದ ಮಾಡಬಹುದಲ್ಲವೇ ನಿಬರ್ಂಧ ಮಾಡಿದ್ದರೆ ಯಾವ ಯಾವ ರೀತಿ ನಿಬರ್ಂಧ ಮತ್ತು ತಪಾಸಣೆ ಮಾಡಲಾಗುವುದು ? (ವಿವರ ಒದಗಿಸುವುದು)

## ಮೂಲಭೂತ ಸೌಲಭ್ಯ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೮ (೬೩೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆ ಅಫಜಲಪೂರ ತಾಲ್ಲೂಕಿನ ಪತ್ತರಗಿ ಭಾಗ್ಯವಂತಿ ದೇವಸ್ಥಾನಕ್ಕೆ ರಾಜ್ಯದಿಂದ, ಹೊರ ರಾಜ್ಯದಿಂದ ಲಕ್ಷಾಂತರ ಭಕ್ತಾದಿಗಳು ಆಗಮಿಸುತ್ತಿರುವುದರಿಂದ ಮೂಲಭೂತ ಸೌಕರ್ಯವಿಲ್ಲದೆ ಭಕ್ತಾದಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ; (ಮಾಹಿತಿ ನೀಡುವುದು)

(ಆ) ದೇವಸ್ಥಾನದಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕಳೆದ ೫–೬ ತಿಂಗಳಿಂದ ವೇತನ ಬಿಡುಗಡೆಯಾಗದಿರಲು ಕಾರಣವೇನು ಮತ್ತು ಯಾವಾಗ ವೇತನ ಬಿಡುಗಡೆ ಮಾಡಲಾಗುವುದು ? (ಮಾಹಿತಿ ನೀಡುವುದು)

## ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೆಚ್ಚುವರಿ ಬಸ್ ಘಟಕಗಳ ಸ್ಥಾಪನೆ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೬೧೯ (೬೬೩) ಮಾನ್ಯ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೆಚ್ಚುವರಿ ಬಸ್ ಘಟಕಗಳ ಸ್ಥಾಪನೆಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಆ) ಇದ್ದಲ್ಲಿ, ಬಸ್ ಘಟಕಗಳ ಸ್ಥಾಪನೆಗೆ ಸರ್ಕಾರವು ಏಕೆ ವಿಳಂಬ ನೀತಿ ಅನುಸರಿಸುತ್ತಿದೆ ;

(ಇ) ಕಲಬುರಗಿ, ಯಾದಗಿರಿ, ಬೀದರ್ ಜಿಲ್ಲೆಗಳಲ್ಲಿ ಬಸ್ ಘಟಕ ಸ್ಥಾಪನೆ ಮಾಡದಿರಲು ಕಾರಣವೇನು ?

## ಕಲ್ಯಾಣ ಕರ್ನಾಟಕದ ಮಠಗಳ ಅಭಿವೃದ್ಧಿಯ ಅನುದಾನದ ಬಗ್ಗೆ

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೬೨೦ (೬೬೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕದಲ್ಲಿರುವ ಮಠಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ಕಳೆದ ೩ ವರ್ಷಗಳ ಅವಧಿಯಲ್ಲಿ ಅನುದಾನ ಬಿಡುಗಡೆ ಮಾಡಿದೆಯೇ ;

(ಆ) ಮಾಡಿದ್ದಲ್ಲಿ, ಯಾವ ಯಾವ ಮಠಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ? (ವಿವರ ಒದಗಿಸುವುದು)

## ವಿದ್ಯಾರ್ಥಿಗಳಿಗೆ ಆಗುವಂತಹ ತೊಂದರೆಯ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೬೨೧ (೬೬೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಹಿಳೆಯರಿಗೆ ಉಚಿತ ಬಸ್ ಸೇವೆ ನೀಡಿರುವುದರಿಂದ ರಾಜ್ಯದ ವಿದ್ಯಾರ್ಥಿಗಳಿಗೆ ಬಸ್‌ಗಳಲ್ಲಿ ಸ್ಥಳಾವಕಾಶ ಲಭ್ಯವಾಗದೇ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ವಿದ್ಯಾರ್ಥಿಗಳ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ;

(ಇ) ವಿದ್ಯಾರ್ಥಿಗಳ ಸಲುವಾಗಿ ಪ್ರತ್ಯೇಕ ಹೆಚ್ಚುವರಿ ಬಸ್‌ಗಳನ್ನು ಒದಗಿಸಲು ಸರ್ಕಾರ ಚಿಂತನೆ ನಡೆಸಿದೆಯೇ ?

## ಪಶುಭಾಗ್ಯ ಯೋಜನೆ ಅರ್ಜಿಯ ಬಗ್ಗೆ

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೬೨೨ (೬೬೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಪಶುಭಾಗ್ಯ ಯೋಜನೆ ಅಡಿಯಲ್ಲಿ ಎಷ್ಟು ಫಲಾನುಭವಿಗಳು ಅರ್ಜಿ ಸಲ್ಲಿಸಿದ್ದಾರೆ ಹಾಗೂ ಕಳೆದ ಎರಡು ವರ್ಷಗಳಲ್ಲಿ ಎಷ್ಟು ಫಲಾನುಭವಿಗಳು ಪರಿಹಾರ ಪಡೆದುಕೊಂಡಿರುತ್ತಾರೆ ; (ವಿವರ ನೀಡುವುದು)

(ಆ) ಪ್ರಸ್ತುತ ಹೊಸದಾಗಿ ಬಂದಿರುವ ಅರ್ಜಿಗಳು ಎಷ್ಟು ?

## ಕಲ್ಯಾಣ ಕರ್ನಾಟಕ ಭಾಗದ ರಸ್ತೆಗಳು ಹಾಳಾಗಿರುವುದರ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೬೨೩ (೬೬೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಎಲ್ಲಾ ರಸ್ತೆಗಳು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಸ್ತೆಗಳನ್ನು ದುರಸ್ತಿಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ಒದಗಿಸುವುದು)

## ಗುತ್ತಿಗೆದಾರರ ಬಿಲ್ಲು ಪಾವತಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೨೪ (೭೩೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :

(ಅ) ಕಳೆದ ಮೂರು ವರ್ಷಗಳಿಂದ ಕೊಪ್ಪಳ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಕಾಮಗಾರಿ ಕೈಗೊಂಡು ಪೂರ್ಣಗೊಳಿಸಿರುವ ಗುತ್ತಿಗೆದಾರರಿಗೆ ಪಾವತಿಗೆ ಬಾಕಿಯಿರುವ ಬಿಲ್ಲುಗಳ ಮೊತ್ತವೆಷ್ಟು; (ಲೆಕ್ಕ ಶೀರ್ಷಿಕೆಗಳವಾರು ಮತ್ತು ಕಾಮಗಾರಿಗಳವಾರು ಹಾಗೂ ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಕಾಮಗಾರಿಗಳ ಬಿಲ್ಲುಗಳ ಮೊತ್ತವೆಷ್ಟು; (ವರ್ಷಾವಾರು ಮತ್ತು ಕಾಮಗಾರಿಗಳವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ಪಾವತಿಗೆ ಬಾಕಿಯಿರುವ ಬಿಲ್ಲುಗಳ ಮೊತ್ತವೆಷ್ಟು; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಈ) ಗುತ್ತಿಗೆದಾರರಿಗೆ ಸಮಯಕ್ಕೆ ಸರಿಯಾಗಿ ಕಾಮಗಾರಿಗಳ ಬಿಲ್ಲು ಪಾವತಿಸದೇ ಇರುವುದರಿಂದ ಗುತ್ತಿಗೆದಾರರು ತೊಂದರೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಈ ಗುತ್ತಿಗೆದಾರರಿಗೆ ಸಕಾಲದಲ್ಲಿ ಕಾಮಗಾರಿಗಳ ಬಿಲ್ಲಿನ ಮೊತ್ತವನ್ನು ಪಾವತಿಸಲು ಸರ್ಕಾರಕ್ಕಿರುವ ತೊಂದರೆಗಳೇನು ?

## ಕೊಪ್ಪಳ ಜಿಲ್ಲೆಯಲ್ಲಿ ಪೋಡಿಗಾಗಿ ಸಲ್ಲಿಸಿರುವ ಅರ್ಜಿಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೨೫ (೭೩೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿ ಪೋಡಿಗಾಗಿ ಬಾಕಿ ಇರುವ ಅರ್ಜಿಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಸಲ್ಲಿಕೆಯಾಗಿರುವ ಅರ್ಜಿಗಳೆಷ್ಟು ; ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ; (ಕೊಪ್ಪಳ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಇ) ಪೋಡಿಗಾಗಿ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಇತ್ಯರ್ಥಪಡಿಸಲು ಕಾಲಮಿತಿ ಇದೆಯೇ ; ಕಾಲಮಿತಿಯೊಳಗೆ ಅರ್ಜಿಗಳನ್ನು ವಿಲೇವಾರಿ ಮಾಡದ ಎಷ್ಟು ಜನ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಪೋಡಿಗಾಗಿ ಬಾಕಿ ಇರುವ ಅರ್ಜಿಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಕೊಪ್ಪಳ ಜಿಲ್ಲೆಯ ರಸ್ತೆ ಕಾಮಗಾರಿಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೨೬ (೭೩೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಲ್ಲಿ ಕೊಪ್ಪಳ ಜಿಲ್ಲೆಯ ರಸ್ತೆ ಕಾಮಗಾರಿಗಳಿಗೆ ಬಿಡುಗಡೆಗೊಂಡ ಅನುದಾನ ಎಷ್ಟು; (ಕಾಮಗಾರಿಗಳ ಪೂರ್ಣ ವಿವರ ಹಾಗೂ ಅನುದಾನ ವಿನಿಯೋಗದ ವಿವರವನ್ನು ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ನೂತನ ಕಟ್ಟಡಗಳ ನಿರ್ಮಾಣಕ್ಕೆ ಬಿಡುಗಡೆಯಾದ ಅನುದಾನ ಎಷ್ಟು; ಯಾವ ಯಾವ ಸ್ಥಳಗಳಲ್ಲಿ ನಿರ್ಮಾಣಗೊಂಡಿದೆ; ಪ್ರತಿ ಕಟ್ಟಡಕ್ಕೆ ಬಿಡುಗಡೆಯಾದ ಅನುದಾನ ಎಷ್ಟು ; ಖರ್ಚಾಗಿರುವ ಅನುದಾನ ಎಷ್ಟು;

(ಇ) ಯಾವ ಯಾವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸೇತುವೆ ನಿರ್ಮಾಣಗೊಂಡಿದೆ; (ವಿವರ ನೀಡುವುದು)

(ಈ) ಈ ಕ್ಷೇತ್ರದಲ್ಲಿ ನಿರ್ಮಾಣಗೊಂಡಿರುವ ನೂತನ ಪ್ರವಾಸಿ ಮಂದಿರಗಳ ಸಂಖ್ಯೆ ಎಷ್ಟು; ಯಾವ ಯಾವ ಕಟ್ಟಡಕ್ಕೆ ಎಷ್ಟೆಷ್ಟು ಹಣ ಬಿಡುಗಡೆಯಾಗಿದೆ; ಕಾಮಗಾರಿ ಪೂರ್ಣಗೊಂಡಿದೆಯೇ: (೨ ವರ್ಷಗಳ ವಿವರ ನೀಡುವುದು)

(ಉ) ಈ ಕ್ಷೇತ್ರದಲ್ಲಿರುವ ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಕಾಂಕ್ರೀಟ್ ರಸ್ತೆ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು? (ಕಾಲೋನಿಗಳ ಹೆಸರು ಮತ್ತು ಪ್ರತಿ ಕಾಲೋನಿಗೆ ವಿನಿಯೋಗಿಸಿರುವ ಅನುದಾನದ ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಸಾಮಾಜಿಕ ಭದ್ರತೆ ಯೋಜನೆಯಡಿಯಲ್ಲಿನ ಫಲಾನುಭವಿಗಳಿಗೆ ಪಿಂಚಣಿ ಸ್ಥಗಿತ ಗೊಂಡಿರುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೨೭ (೬೪೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆಯಡಿ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು;

(ಆ) ಸದರಿ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಲ್ಲಿ ಸಾಮಾಜಿಕ ಭದ್ರತೆ ಯೋಜನೆಯಡಿ ಬಹಳಷ್ಟು ಫಲಾನುಭವಿಗಳಿಗೆ ಪಿಂಚಣಿ ಸ್ಥಗಿತವಾಗಿರುವುದು ಹಾಗೂ ಪಿಂಚಣಿ ಪರಿಹಾರ

ವಿಳಂಬವಾಗುತ್ತಿರುವುದನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಬ್ಯಾಂಕ್ ಅಕೌಂಟ್‌ಗೆ ಆಧಾರ್ ಜೋಡಣೆಯಾಗಿದ್ದರೂ ೨-೩ ತಿಂಗಳಿಗೊಮ್ಮೆ ಪಿಂಚಣಿ ನೀಡುತ್ತಿರುವುದಕ್ಕೆ ಕಾರಣವೇನು ; ಪ್ರತಿ ತಿಂಗಳು ಪಿಂಚಣಿ ನೀಡಲು ಸರ್ಕಾರಕ್ಕೆ ಇರುವ ಅಡೆ ತಡೆಗಳೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿಯ ಕೆ.ಕೆ.ಆರ್.ಟಿ.ಸಿ ಯ ಶಕ್ತಿ ಯೋಜನೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೨೮ (೬೪೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಶಕ್ತಿ ಯೋಜನೆ ಪ್ರಾರಂಭವಾದ ದಿನದಿಂದ ಇಲ್ಲಿಯವರೆಗೂ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೆ.ಕೆ.ಆರ್.ಟಿ.ಸಿ ಯ ಸಾರಿಗೆಯಲ್ಲಿ ಎಷ್ಟು ಮಹಿಳಾ ಪ್ರಯಾಣಿಕರು ಪ್ರಯಾಣ ಮಾಡಿರುತ್ತಾರೆ; ಒಂದು ದಿನದ ಮೊತ್ತ ಎಷ್ಟು; (ವಿವರ ನೀಡುವುದು)

(ಆ) ಕೆ.ಕೆ.ಆರ್.ಟಿ.ಸಿ ಸಂಸ್ಥೆಗೆ ಎಷ್ಟು ಪ್ರಮಾಣದ ಮೊತ್ತವನ್ನು ಸರ್ಕಾರವು ನೀಡಬೇಕಾಗಿದ್ದು, ಇದರಲ್ಲಿ ಎಷ್ಟು ಮೊತ್ತ ನೀಡಿದೆ ; ಎಷ್ಟು ಬಾಕಿ ಉಳಿಸಿಕೊಂಡಿದೆ ; ಬಾಕಿ ಉಳಿಸಿಕೊಳ್ಳಲು ಕಾರಣಗಳೇನು ; (ವಿವರ ನೀಡುವುದು)

(ಇ) ಸಕಾಲದಲ್ಲಿ ಶಕ್ತಿ ಯೋಜನೆಯ ಹಣವನ್ನು ಸಂಸ್ಥೆಗೆ ಪಾವತಿಸಲು ವಿಳಂಬವಾದಲ್ಲಿ ಸಿಬ್ಬಂದಿಯ ವೇತನಕ್ಕೆ ಸಮಸ್ಯೆಯಾಗದಂತೆ ಸಂಸ್ಥೆಯು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ನಿರ್ವಸತಿಗರ ವಸತಿ ಯೋಜನೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೨೯ (೬೪೯) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲೆಯಲ್ಲಿ ನಿರ್ವಸತಿಗರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಎರಡು ಆರ್ಥಿಕ ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳ ಮೂಲಕ ನಿರ್ವಸತಿಗರಿಗೆ ಯಾವ ಯಾವ ಯೋಜನಾ ಸೌಲಭ್ಯಗಳನ್ನು ಒದಗಿಸಲಾಗಿದೆ ;

(ಇ) ಕಳೆದ ಎರಡು ವರ್ಷಗಳಲ್ಲಿ ಕೇಂದ್ರ ಸರ್ಕಾರ ವಸತಿ ಯೋಜನೆಗಳ ಮೂಲಕ ರಾಜ್ಯ ಸರ್ಕಾರ ಪಡೆದುಕೊಂಡ ಯೋಜನಾನುದಾನಗಳ ಮೊತ್ತ ಎಷ್ಟು ? (ವಿವರ ನೀಡುವುದು)

## ಕಂದಾಯ ಇಲಾಖೆಯ ಅಧಿಕಾರಿ/ನೌಕರರ ಸೇವಾ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ

**ಶ್ರೀ ವೈ.ಎಂ ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೦ (೬೩೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಕಂದಾಯ ಇಲಾಖೆಯ (ಕೆಸಿಎಸ್‌ಆರ್ ನಿಯಮದ ಜ್ಯೇಷ್ಠತಾ ನಿಯಮಗಳು ೧೯೫೭ರ ಪ್ರಕಾರ) ನೌಕರರ ಸೇವಾ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದೆಯೇ : ಇದ್ದಲ್ಲಿ, ಮಾಹಿತಿ ನೀಡುವುದು ;

(ಆ) ಇಲ್ಲದಿದ್ದಲ್ಲಿ, ಕಾರಣಗಳೇನು ; ಈ ನೌಕರರ ಜ್ಯೇಷ್ಠತಾ ಪಟ್ಟಿಯನ್ನು ಯಾವ ಕಾಲಮಿತಿಯಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳಲಾಗುವುದು ?

# ಕಂದಾಯ ಇಲಾಖೆಯಲ್ಲಿ ವಂಶವೃಕ್ಷ ಪಡೆಯಲು ನೀಡುವ ದಾಖಲೆಗಳ ಬಗ್ಗೆ

**ಶ್ರೀ ವೈ.ಎಂ ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೧ (೬೩೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ವಂಶವೃಕ್ಷ ನೀಡಲು ಪಡೆಯುತ್ತಿರುವ ದಾಖಲೆಗಳು ಯಾವುವು ; ಅವುಗಳ ವಿವರಗಳೊಂದಿಗೆ ಮಾಹಿತಿ ಒದಗಿಸುವುದು ;

(ಆ) ಆಲೂರು ತಾಲ್ಲೂಕು ಪಾಳ್ಯ ಹೋಬಳಿ ಕೇಂದ್ರದಲ್ಲಿ ಕಳೆದ ಆರು (೬) ತಿಂಗಳಿನಲ್ಲಿ ವಂಶವೃಕ್ಷ ಕೋರಿ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು; ಆ ಪೈಕಿ ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ;

(ಇ) ವಂಶವೃಕ್ಷ ನೀಡಲು ಪಡೆದುಕೊಂಡಿರುವ ದಾಖಲೆಗಳು ಯಾವುವು ; ತಿರಸ್ಕೃತಗೊಂಡಿರುವ ಅರ್ಜಿಗಳ ಸಂಖ್ಯೆ ಎಷ್ಟು; ಇದಕ್ಕೆ ಕಾರಣಗಳೇನು ? (ಮಾಹಿತಿ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0241/500 ಪ್ರತಿಗಳು/05-03-2025